# ಬೆಳಗಾವಿ ವರದಿ

ಕನ್ನಡ ದಿನಪತ್ರಿಕೆ

02 ಎಪ್ರಿಲ್ । ಮಂಗಳವಾರ
02 APRIL 2024

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 38 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26


## ಪ್ರಚಾರಕರ ಪಟ್ಟಿಯಲ್ಲಿ ಸಚಿವೆ ಹೆಬ್ಬಾಳಕರ ಹೆಸರು ನಾಪತ್ತೆ



ಬೆಂಗಳೂರು: ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷ ಸೋಮವಾರ ತನ್ನ ತಾರಾ ಪ್ರಚಾರಕರ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಆದರೆ, ಇದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಚಿವ ಸಂಪುಟದಲ್ಲಿರುವ ಏಕೈಕ ಸಚಿವೆ ಹೆಸರು ನಾಪತ್ತೆಯಾಗಿದೆ.

ಇದು ಹಲವಾರು ಊಹಾಪೋಹಗಳನ್ನು ಹುಟ್ಟುಹಾಕಿದೆ. 40 ಜನರ ಹೆಸರು ಪ್ರಕಟಿಸಲಾಗಿದೆ. ಅದರಲ್ಲಿ ಉಮಾಶ್ರೀ, ಮಹಿಳಾ ಕಾಂಗ್ರೆಸ್ ಘಟಕದ ರಾಜ್ಯಾಧ್ಯಕ್ಷೆ ಪುಷ್ಪಾ ಅಮರನಾಥ ಅವರ ಹೆಸರು ತಾರಾ ಪ್ರಚಾರಕರ ಪಟ್ಟಿಯಲ್ಲಿ ಸೇರಿವೆ. ಆದರೆ, ರಾಜ್ಯದ ಪ್ರಭಾವಿ ಸಚಿವೆ ಆಗಿರುವ ಲಕ್ಷ್ಮಿ ಹೆಬ್ಬಾಳ್ಕರ್ ಹೆಸರು ನಾಪತ್ತೆಯಾಗಿರುವುದು ಹುಬ್ಬೇರಿಸುವಂತೆ ಮಾಡಿದೆ.

## ತಾವು 200 ಸ್ಥಾನ ಗೆಲ್ಲುವುದೂ ಕಷ್ಟ ಎನ್ನುವುದು ತಾನೇ ನಡೆಸಿದ ಆಂತರಿಕ ಸಮೀಕ್ಷೆಯಿಂದ ಬಿಜೆಪಿ ಗೆ ಸ್ಪಷ್ಟವಾಗಿದೆ: ಸಿ.ಎಂ.ಸಿದ್ದರಾಮಯ್ಯ

ಮೈಸೂರು: ತಾವೇ ನಡೆಸಿರುವ ಆಂತರಿಕ ಸಮೀಕ್ಷೆಯಲ್ಲಿ ಬಿಜೆಪಿ ಕೇವಲ 200 ಲೋಕಸಭಾ ಸೀಟುಗಳನ್ನು ಗೆಲ್ಲುವುದೂ ಕಷ್ಟ ಎನ್ನುವುದು ಗೊತ್ತಾಗಿದೆ. ಹೀಗಾಗಿ ತಂತ್ರಗಾರಿಕೆ ಕಾರಣದಿಂದ 400 ಸೀಟು ಗೆಲ್ಲುವುದಾಗಿ ಹೇಳುತ್ತಿದೆ. ದೇಶದ ಜನರನ್ನು ನಿರಂತರವಾಗಿ ಮೂರ್ಖರನ್ನಾಗಿಸುತ್ತೇವೆ ಎಂದು ಹೊರಟವರೇ ಜನರ ಎದುರು ಮೂರ್ಖರಾಗುತ್ತಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಎಚ್ಚರಿಸಿದರು.

ಅವರು ಮೈಸೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಈ ಬಾರಿ 400 ದಾಟುತ್ತೇವೆ ಎಂದು ಪ್ರಧಾನಿ ಮೋದಿಯವರು ತಮ್ಮ ಭಾಷಣದಲ್ಲಿ ಹೇಳಿಕೊಂಡಿರುವ ಬಗ್ಗೆ ಪ್ರತಿಕ್ರಿಯೆ ನೀಡುತ್ತಾ, ಬಿಜೆಪಿಯದ್ದು ಅಭಿವೃದ್ಧಿ ಶೂನ್ಯ ಸಾಧನೆ. ಮೋದಿಯವರ ಸುಳ್ಳಿನ ಪಿಕ್ಚರ್ ಇನ್ನೂ ಬಾಕಿ ಇದೆ. ಸುಳ್ಳಿನ ಕನಸುಗಳನ್ನು ಬಿತ್ತುತ್ತಾ ಬಂದಿದ್ದಾರೆ. ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ 20 ಸೀಟುಗಳವರೆಗೆ ಗೆದ್ದೇ ಗೆಲ್ಲುತ್ತದೆ. ಸೋಲುವ ಭಯಕ್ಕೆ ಒಳಗಾಗಿರುವ ಬಿಜೆಪಿಯವರು



ಕರ್ನಾಟಕದಲ್ಲಿ ಬಿಜೆಪಿ 28 ಸೀಟುಗಳನ್ನು ಗೆಲ್ಲುತ್ತೇವೆ ಎಂದು ಸುಳ್ಳು ಹೇಳುತ್ತಿದ್ದಾರೆ ಎಂದರು.

**ಬಿಜೆಪಿಯವರಿಗೆ ಸಂಸ್ಕಾರವಿಲ್ಲ**

ಕೇಂದ್ರ ಗೃಹಸಚಿವರ ಕುರಿತ ಹೇಳಿಕೆಗೆ ಸಂಬಂಧಿಸಿದಂತೆ ಯತೀಂದ್ರ ಸಿದ್ದರಾಮಯ್ಯರವರಿಗೆ ಸಂಸ್ಕಾರದ ಪಾಠವನ್ನು ಬಿಜೆಪಿ ಹೇಳುತ್ತಿದೆ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸುತ್ತಾ, ಬಿಜೆಪಿಯವರಿಗೆ ಸಂಸ್ಕಾರವಿಲ್ಲ.

ಯತೀಂದ್ರ ಅವರು ಸಿಬಿಐ ನವರು ಕೊಟ್ಟಿರುವ ರಿಪೋರ್ಟ್ ಆಧಾರದ ಮೇಲೆ ಹೇಳಿಕೆಯನ್ನು ನೀಡಿದ್ದಾರೆಯೇ ಹೊರತು, ಅಮಿತ್ ಶಾ ಅವರಿಗೆ ಅವಮಾನ ಮಾಡುವ ಉದ್ದೇಶ ಅವರಿಗೆ ಇಲ್ಲ ಎಂದರು.


**ಕಾಂಗ್ರೆಸ್ ಸಿದ್ಧಾಂತ ಒಪ್ಪಿ ಬರುವವರಿಗೆ ಸ್ವಾಗತ**

ಕಾಂಗ್ರೆಸ್ ಪಕ್ಷಕ್ಕೆ ಇತರೆ ಪಕ್ಷಗಳಿಂದ ಜನರು ಬರುವ ಸಾಧ್ಯತೆಯಿದೆಯೇ ಎಂಬ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿ, ಕಾಂಗ್ರೆಸ್ ಪಕ್ಷಕ್ಕೆ ಬಹಳಷ್ಟು ಜನರು ಸೇರ್ಪಡೆಯಾಗಲು ಉತ್ಸುಕರಿದ್ದಾರೆ. ಕಾಂಗ್ರೆಸ್ ಸಿದ್ಧಾಂತವನ್ನು ಒಪ್ಪಿ ಬರುವ ಎಲ್ಲರಿಗೂ ಪಕ್ಷದಲ್ಲಿ ಸ್ವಾಗತವಿದೆ ಎಂದರು.

**ಮೋದಿ ಸರ್ಕಾರದ ವೈಫಲ್ಯ, ನಮ್ಮ ಸಾಧನೆಯಿಂದ ಕಾಂಗ್ರೆಸ್ ಗೆಲುವು ಖಚಿತ**

ರಾಜ್ಯದಲ್ಲಿ ಪ್ರಧಾನಿ ಮೋದಿಯವರು ರ್ಯಾಲಿ ಪ್ರಾರಂಭಿಸುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡುತ್ತಾ, ವಿಧಾನಸಭಾ ಚುನಾವಣೆಯಲ್ಲಿಯೂ ಮೋದಿಯವರು ಪ್ರಚಾರ ಕೈಗೊಂಡಿದ್ದರೂ, ಬಿಜೆಪಿ ಗೆಲ್ಲಲು ಸಾಧ್ಯವಾಗಲಿಲ್ಲ. ಕೇಂದ್ರದಲ್ಲಿ ಮೋದಿ ಸರ್ಕಾರದ ವೈಫಲ್ಯಗಳು ಹಾಗೂ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರದ ಸಾಧನೆಗಳು ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಗೆಲುವನ್ನು ಖಾತ್ರಿಪಡಿಸಿದೆ ಎಂದರು.

## ಮಾಜಿ ಶಾಸಕ ಹೆಚ್.ನಿಂಗಪ್ಪ ಇಂದು ಜೆಡಿಎಸ್ ಸೇರ್ಪಡೆ





ಬೆಂಗಳೂರು: ತುಮಕೂರು ಗ್ರಾಮಾಂತರ ವಿಧಾನ ಸಭೆ ಕ್ಷೇತ್ರದ ಮಾಜಿ ಶಾಸಕರಾದ ಹೆಚ್.ನಿಂಗಪ್ಪ ಅವರು ಮಂಗಳವಾರ ಬೆಳಗ್ಗೆ ಜೆಡಿಎಸ್ ಪಕ್ಷ ಸೇರಲಿದ್ದಾರೆ.

ಈ ಬಗ್ಗೆ ಮಾಹಿತಿ ನೀಡಿರುವ ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ.ಕುಮಾರಸ್ವಾಮಿ ಅವರು; ಹಿರಿಯ ನಾಯಕರಾದ ನಿಂಗಪ್ಪ ಅವರು ಪಕ್ಷಕ್ಕೆ ಮರಳುತ್ತಿರುವುದು ನನಗೆ ಬಹಳ ಸಂತೋಷ ಉಂಟು ಮಾಡಿದೆ ಎಂದಿದ್ದಾರೆ.

ಮಂಗಳವಾರ ಬೆಳಗ್ಗೆ 10.30 ಗಂಟೆಗೆ ಜೆಡಿಎಸ್ ಪಕ್ಷದ ರಾಜ್ಯ ಕಚೇರಿಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ತಮ್ಮ ಅಪಾರ ಬೆಂಬಲಿಗರೊಂದಿಗೆ ನಿಂಗಪ್ಪ ಅವರು ಪಕ್ಷಕ್ಕೆ ಸೇರಲಿದ್ದಾರೆ. ಈಗಾಗಲೇ ಅವರು ನನ್ನ ಜತೆ ಮಾತುಕತೆ ನಡೆಸಿದ್ದಾರೆ. ಮಾಜಿ ಪ್ರಧಾನಿಗಳು ಹಾಗೂ ನಮ್ಮ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ದೇವೇಗೌಡರು ಅವರ ಮನೆಗೆ ಭೇಟಿ ನೀಡಿದ್ದರು ಎಂದು ಅವರು ತಿಳಿಸಿದ್ದಾರೆ.

ನಿಂಗಪ್ಪ ಕಾಂಗ್ರೆಸ್ ಪಕ್ಷಕ್ಕೆ ಸೋಮವಾರ ರಾಜೀನಾಮೆ ನೀಡಿದ್ದಾರೆ.



## ಕಾರು ತಡೆದು ಪರಿಶೀಲಿಸಿದ ಪೊಲೀಸ್ ಅಧಿಕಾರಿಗಳಿಗೆ ಸಹಕಾರ ನೀಡಿ ಕರ್ತವ್ಯನಿಷ್ಠೆ ಮೆರೆದ ಸಿದ್ದರಾಮಯ್ಯ

ಕೋಲಾರ: ಮದುವೆ ಆರತಕ್ಷತೆಗೆ ತೆರಳುತ್ತಿದ್ದ ಸಿಎಂ ಸಿದ್ದರಾಮಯ್ಯ ಅವರ ಕಾರನ್ನು ಅಧಿಕಾರಿಗಳು ತಡೆದು ಪರಿಶೀಲಿಸಿದ ಘಟನೆ ಜಿಲ್ಲೆಯ ರಾಮಸಂದ್ರ ಬಳಿ ನಡೆದಿದೆ.

ಕೋಲಾರ ನಗರದ ಹೊರಭಾಗದಲ್ಲಿರುವ ಖಾಸಗಿ ಕಲ್ಯಾಣ ಮಂಟಪದಲ್ಲಿ ಮದುವೆ ಆರತಕ್ಷತೆ ಕಾರ್ಯಕ್ರಮದಲ್ಲಿ ಭಾಗಿಯಾಗಲು ಸಿಎಂ ಸಿದ್ದರಾಮಯ್ಯ ತೆರಳುತ್ತಿದ್ದರು. ಈ ವೇಳೆ ಅವರ ಕಾರನ್ನು ಕೋಲಾರ ಜಿಲ್ಲೆಯ ಗಡಿಯಲ್ಲಿ ಸ್ಥಾಪಿಸಲಾದ ರಾಮಸಂದ್ರ ಚೆಕ್ ಪೋಸ್ಟ್ ಬಳಿ ಪೊಲೀಸರು ತಪಾಸಣೆಗೆ ಒಳಪಡಿಸಿದ್ದಾರೆ.

ಇದಕ್ಕೆ ಕಿಂಚಿತ್ತೂ ಬೇಸರಿಸಿಕೊಳ್ಳದ ಸಿಎಂ, ತಪಾಸಣೆಗೆ ಸಂಪೂರ್ಣ ಸಹಕಾರ ನೀಡಿದ್ದಾರೆ. ಈ ವೇಳೆ ಕೋಲಾರ ಜಿಲ್ಲಾ ಉಸ್ತುವಾರಿ ಸಚಿವರಾದ ಬಿ.ಎಸ್ ಸುರೇಶ್ ಸಹ ಅವರ ಜೊತೆಗಿದ್ದರು. ಬಳಿಕ ಅವರು ಖಾಸಗಿ ಕಾರ್ಯಕ್ರಮದಲ್ಲಿ ಭಾಗಿಯಾಗಿ ಸಿಎಂ ಸಿದ್ದರಾಮಯ್ಯ ವಾಪಸ್ ಬೆಂಗಳೂರಿಗೆ ತೆರಳಿದ್ದಾರೆ.

ಲೋಕಸಭಾ ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಸಮ್ಮತವಾಗಿ ನಡೆಸುವ ಉದ್ದೇಶದಿಂದ ಚುನಾವಣಾಧಿಕಾರಿಗಳ ತಂಡ ಎಲ್ಲೆಡೆ ಕಾರ್ಯನಿರ್ವಹಿಸುತ್ತಿದೆ. ಪ್ರತಿ ವಾಹನವನ್ನು ಸಮಗ್ರವಾಗಿ ತಪಾಸಣೆಗೆ ಒಳಪಡಿಸಬೇಕು ಎಂಬ ಆದೇಶದ ಮೇರೆಗೆ ಪೊಲೀಸರು ಕಾರ್ಯಪ್ರವೃತ್ತರಾಗಿದ್ದಾರೆ.

## ಶೆಟ್ಟರ್ ಅಡ್ರೆಸ್ ಹುಡಿಕಿಕೊಂಡು ಬರುವ ಪರಿಸ್ಥಿತಿ ಎದುರಾಗಲಿದೆ
## ಸಚಿವೆ ಲಕ್ಷ್ಮಿಗೆ ಶಾಸಕ ಬಾಲಚಂದ್ರ ಜಾರಕಿಹೊಳಿ ಏದುರೇಟು

ಬೆಳಗಾವಿ: " ಜಗದೀಶ್ ಶೆಟ್ಟರ್ ಅಡ್ರೆಸ್ ಕೇಳುವವರು ಲೋಕಸಭಾ ಚುನಾವಣೆ ಬಳಿಕ ಶೆಟ್ಟರ್ ಅಡ್ರೆಸ್ ಹುಡಿಕಿಕೊಂಡು ಬರುವ ಪರಿಸ್ಥಿತಿ ಎದುರಾಗಲಿದೆ" ಎಂದು ಶಾಸಕ ಬಾಲಚಂದ್ರ ಜಾರಕಿಹೊಳಿ ಅವರು ಸಚಿವೆ ಹೆಬ್ಬಾಳಕರ್ ಗೆ ಏದುರೇಟು ನೀಡಿದ್ದಾರೆ.

ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ರಾಜ್ಯವನ್ನು ಮಾಜಿ ಮುಖ್ಯಮಂತ್ರಿ ಬಗ್ಗೆ ಯಾರೂ ಹಗುರವಾಗಿ ಮಾತನಾಡಬಾರದು. ಜಗದೀಶ್ ಶೆಟ್ಟರ್ ಏಲ್ಲಿಯವರೂ ಎಂದು ಅವರ ಅಡ್ರೆಸ್ ಕೇಳುತ್ತಿರುವುದು ಸಚಿವೆ ಜಗದೀಶ್ ಶೆಟ್ಟರ್ ಅವರು ಕೇಂದ್ರ ಸಚಿವರಾದ ಬಳಿಕ ಅಡ್ರೆಸ್



ಹುಡುಕಿಕೊಂಡು ಹೋಗುವ ಪ್ರಸಂಗ ಬರಲಿದೆ ಎಂದು ಉತ್ತರಿಸಿದರು.

ರಾಜಕೀಯವಾಗಿ ಮಾತನಾಡಲಿ ಆದರೆ, ವೈಯಕ್ತಿಕ ಟೀಕೆ ಮಾಡುವುದು ಸರಿಯಲ್ಲ. ಗೋಕಾಕ, ಅರಬಾವಿ ಕ್ಷೇತ್ರದಲ್ಲಿ ಕಾಂಗ್ರೆಸ್ ಹೆಚ್ಚಿನ ಮತ ಸೆಳೆಯುವ ಪ್ರಯತ್ನದಲ್ಲಿದೆ, ಚುನಾವಣೆ ಎದುರಾದಾಗ ಇದು ಸಹಜ ಎಂದು ಹೇಳಿದರು.

ಈಗಾಗಲೇ ಶೆಟ್ಟರ್ ಅವರು ಗೋಕಾಕ, ಅರಬಾವಿಯಲ್ಲಿ ಅಬ್ಬರದ ಪ್ರಚಾರ ನಡೆಸುತ್ತಿದ್ದು, ಅವರಿಗೆ ಈಗಾಗಲೇ ಅಪಾರ ಜನ ಬೆಂಬಲ ಸಿಕ್ಕಿದೆ. ಬೆಳಗಾವಿ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿಯಾಗಿರುವ ಜಗದೀಶ್ ಶೆಟ್ಟರ್ ಪರ ಏ.7 ರಂದು ಗೋಕಾಕ ಹಾಗೂ ಅರಬಾವಿಯಲ್ಲಿ ಬಿಜೆಪಿ ಬೃಹತ್ ಸಮಾವೇಶ ನಡೆಸಲು ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದರು.

## ಕೆಜಿಎಫ್: ವಿಜೃಂಭಣೆಯ ಬ್ರಹ್ಮೋತ್ಸವ, ಲಕ್ಷಾಂತರ ಭಕ್ತರು ಭಾಗಿ



ಕೋಲಾರ: ಕೋಲಾರ ಜಿಲ್ಲೆಯ ಗಣಿ ಪ್ರದೇಶವಾದ ಕೆಜಿಎಫ್ ನಲ್ಲಿ ಈ ಬಾರಿಯ ಶ್ರೀ ಪ್ರಸನ್ನ ಲಕ್ಷ್ಮೀ ವೆಂಕಟೇಶ್ವರ ಸ್ವಾಮಿ ದೇವಸ್ಥಾನದ ಬ್ರಹ್ಮೋತ್ಸವ ವಿಜೃಂಭಣೆಯಿಂದ ನೆರವೇರಿತು. ಸುಮಾರು ನಾಲ್ಕು ಲಕ್ಷಕ್ಕೂ ಹೆಚ್ಚು ಜನರು ಸಾಕ್ಷಿಯಾದರು. ಮಾರ್ಚ್ 19 ರಿಂದ 31 ರವರೆಗೆ 13 ದಿನಗಳ ಕಾಲ ಯಾವುದೇ ಅಡ್ಡಿಯಿಲ್ಲದೆ ಸುಗಮವಾಗಿ ಬ್ರಹ್ಮೋತ್ಸವ ಜರುಗಿತು.

ಈ ವರ್ಷ ಎಲ್ಲಾ ಹದಿಮೂರು ಉತ್ಸವ ಸಮಿತಿ ಸದಸ್ಯರು ಶಾಸ್ತ್ರೀಯ ಸಂಗೀತ ಕಚೇರಿ ಒಳಗೊಂಡಂತೆ ಅದ್ಧೂರಿಯಾಗಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿದ್ದರು. ಉತ್ಸವವನ್ನು ಕಣ್ತುಂಬಿಕೊಳ್ಳಲು ರಾಜ್ಯ ಹಾಗೂ ನೆರೆಯ ರಾಜ್ಯಗಳಾದ ಆಂಧ್ರಪ್ರದೇಶ, ತಮಿಳುನಾಡಿನಿಂದ ಸಾವಿರಾರು ಜನರು ಆಗಮಿಸಿದ್ದರು. ಇದು ಕೆಜಿಎಫ್ ಪೊಲೀಸರಿಗೆ ಸವಾಲಾಗಿ ಪರಿಣಮಿಸಿತ್ತು. ಆದರೆ, ಸ್ಥಳೀಯ ಪೊಲೀಸ್ ಆಡಳಿತ ಮೊದಲ ದಿನವೇ ಬಿಗಿ ಬಂದೋಬಸ್ತ್ ಮಾಡಿದ್ದು, ಜನಸಾಗರವೇ ಹರಿದುಬರುವ ಮುನ್ನವೇ ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಂ.ಶಾಂತರಾಜು ಅವರ ನೇರ ಉಸ್ತುವಾರಿಯಲ್ಲಿ ಭದ್ರತಾ ವ್ಯವಸ್ಥೆ ಮಾಡಲಾಗಿತ್ತು.

ಪ್ರಮುಖ ಬೀದಿಗಳಲ್ಲದೆ, ಅಡ್ಡ ರಸ್ತೆಗಳಲ್ಲಿಯೂ ಪೊಲೀಸರನ್ನು ನಿಯೋಜಿಸಲಾಗಿತ್ತು. ಉಪ ಪೊಲೀಸ್ ವರಿಷ್ಠಾಧಿಕಾರಿ ಪಾಂಡುರಂಗಯ್ಯ, ಸರ್ಕಲ್ ಇನ್ಸ್‌ಪೆಕ್ಟರ್, ಸಬ್ ಇನ್ಸ್‌ಪೆಕ್ಟರ್ ಹಾಗೂ ಇತರೆ ಪೊಲೀಸ್ ಸಿಬ್ಬಂದಿ ಹಗಲಿರುಳು ಶ್ರಮಿಸಿ ಕಾರ್ಯಕ್ರಮವನ್ನು ಸುಸೂತ್ರವಾಗಿ ನೆರವೇರಿಸಿದರು. ಈ ಪ್ರಯತ್ನಕ್ಕೆ ಕೇಂದ್ರ ಶ್ರೇಣಿಯ ಪೊಲೀಸ್ ಮಹಾನಿರೀಕ್ಷಕ ರವಿಕಾಂತೇಗೌಡರಿಂದ ಮೆಚ್ಚುಗೆ ವ್ಯಕ್ತಪಡಿಸಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಿದ ಪೊಲೀಸರಿಗೆ ಉತ್ಸವ ಸಮಿತಿ ಸದಸ್ಯರು ಕೃತಜ್ಞತೆ ಸಲ್ಲಿಸಿದ್ದಾರೆ.

## ಏಕಾಏಕಿ ಆಸ್ಪತ್ರೆಗೆ ದಾಖಲಾದ ನಟ ಶಿವರಾಜಕುಮಾರ



ಬೆಂಗಳೂರು: ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ ಅವರ ಆರೋಗ್ಯದಲ್ಲಿ ಏರುಪೇರಾದ ಹಿನ್ನೆಲೆಯಲ್ಲಿ ಅವರು ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಶಿವಮೊಗ್ಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಅವರ ಪತ್ನಿ ಗೀತಾ ಶಿವರಾಜ್ ಕುಮಾರ ಅವರು ಸ್ಪರ್ಧೆ ಮಾಡುತ್ತಿದ್ದಾರೆ. ಶಿವರಾಜ್ ಕುಮಾರ ಅವರು, ಸತತವಾಗಿ ಪ್ರಚಾರ ಕೈಗೊಂಡ ಹಿನ್ನೆಲೆಯಲ್ಲಿ ಅವರು ಅನಾರೋಗ್ಯಕ್ಕೆ ಒಳಗಾಗಿರುವ ಸಾಧ್ಯತೆ ಇದ್ದು ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ ಎಂದು ತಿಳಿದು ಬಂದಿದೆ.

## ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಭರ್ಜರಿ ರೋಡ್ ಶೋ

ರಾಯಬಾಗ: ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ, ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಅಂಬೇಡ್ಕರ್ ವೃತ್ತದಲ್ಲಿ ಅದ್ದೂರಿ ಸ್ವಾಗತ ನೀಡಲಾಯಿತು.

ನಗರದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಪ್ರತಿಮೆಗೆ ಸಚಿವ ಸತೀಶ್ ಜಾರಕಿಹೊಳಿ, ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೇರಿದಂತೆ ಹಲವು ಗಣ್ಯರು ಪುಷ್ಪನಮನ ಸಲ್ಲಿಸಿದರು.

ಬಳಿಕ, ರಾಯಬಾಗ ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಮಹಾವೀರ ಭವನದವರೆಗೂ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಕಾಂಗ್ರೆಸ್ ಕಾರ್ಯಕರ್ತರೊಂದಿಗೆ ಭರ್ಜರಿ ರೋಡ್



ಶೋ ನಡೆಸಿದರು.

ಇದಕ್ಕೂ ಮೊದಲು ಕಾರ್ಯಕರ್ತರು ಸಚಿವ ಸತೀಶ್ ಜಾರಕಿಹೊಳಿ, ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಶಾಲು ಹೊದಿಸಿ ಸನ್ಮಾನಿಸಿದರು. ಮೆರವಣಿಗೆ ಉದ್ದಕ್ಕೂ ಸಾವಿರಾರು ಸಂಖ್ಯೆಯಲ್ಲಿ ಪಾಲ್ಗೊಂಡಿದ್ದ ಕಾಂಗ್ರೆಸ್ ಕಾರ್ಯಕರ್ತರು ಪಕ್ಷದ ಧ್ವಜವನ್ನು ಹಿಡಿದು ಕಾಂಗ್ರೆಸ್ ಅಭ್ಯರ್ಥಿಯ ಪರ ಘೋಷಣೆಗಳನ್ನು ಕೂಗಿದರು.

## ಟೀಕೆ–ಟಿಪ್ಪಣಿಗೆ ಪ್ರತಿಕ್ರಿಯೆ ಕೊಡುವುದಿಲ್ಲ: ಶೆಟ್ಟರ್

ಬೆಳಗಾವಿ: 'ಇದು ರಾಷ್ಟ್ರೀಯ ವಿಚಾರಧಾರೆಗಳ ಆಧಾರದಲ್ಲಿ ನಡೆಯುವ ಚುನಾವಣೆ. ಇಲ್ಲಿ ರಾಷ್ಟ್ರೀಯ ವಿಚಾರಗಳೇ ಚರ್ಚೆಯಾಗಬೇಕು. ಆದರೆ, ಕಾಂಗ್ರೆಸ್‌ನವರಿಂದ ಸಣ್ಣ–ಪುಟ್ಟ ವಿಷಯ ಚರ್ಚಿಸಲಾಗುತ್ತಿದೆ. ಇದಕ್ಕೆ ನಾವು ಉತ್ತರ ನೀಡುವುದಿಲ್ಲ' ಎಂದು ಬೆಳಗಾವಿ ಲೋಕಸಭೆ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ಹೇಳಿದರು.

ಇಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಬೆಳಗಾವಿ ನನ್ನ ಕರ್ಮಭೂಮಿ. ಆದರೆ, ಕಾಂಗ್ರೆಸ್‌ನವರು ನಾನು ಹೊರಗಿನವನು ಎನ್ನುತ್ತಿದ್ದಾರೆ. ಅವರಿಗೆ ಚರ್ಚಿಸಲು ಯಾವುದೇ ವಿಷಯವೇ ಇಲ್ಲ. ಟೀಕೆ–ಟಿಪ್ಪಣಿಗೆ ಯಾವುದೇ ಪ್ರತಿಕ್ರಿಯೆ ಕೊಡುವುದಿಲ್ಲ. ಕೆಳಹಂತಕ್ಕೆ



ಹೋಗಿ ನಾನು ಟೀಕೆ ಮಾಡುವುದಿಲ್ಲ' ಎಂದರು.

'ಪಕ್ಷದ ವರಿಷ್ಠರು ಮತ್ತು ಜನರ ತೀರ್ಮಾನದಂತೆ ಬೆಳಗಾವಿ ಕ್ಷೇತ್ರದಿಂದ ಸ್ಪರ್ಧಿಸಿದ್ದೇನೆ. ಪಕ್ಷ ಯಾವುದೇ ಜವಾಬ್ದಾರಿ ಕೊಟ್ಟರೂ ನಿಭಾಯಿಸುತ್ತೇನೆ.

ಜಾರಕಿಹೊಳಿ ಸಹೋದರರು ನನ್ನ ಜತೆಗೆ ಪ್ರಚಾರಕ್ಕೆ ಬಂದಿದ್ದರು. ಗೋಕಾಕ, ಅರಭಾವಿಯಲ್ಲಿ ಸಂಪೂರ್ಣವಾಗಿ ಬೆಂಬಲ ಕೊಟ್ಟಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಪ್ರತಿನಿಧಿಯಾಗಿ ಇಲ್ಲಿ ಸ್ಪರ್ಧಿಸಿದ್ದೇನೆ.

ಬೆಳಗಾವಿ ಸಮಗ್ರ ಅಭಿವೃದ್ಧಿಗೆ ಶ್ರಮಿಸುತ್ತೇನೆ. ಬಸನಗೌಡ ಪಾಟೀಲ ಯತ್ನಾಳ, ಮುರುಗೇಶ ನಿರಾಣಿ ಸೇರಿದಂತೆ ಎಲ್ಲರೂ ಪ್ರಚಾರಕ್ಕೆ ಬರುತ್ತಾರೆ' ಎಂದರು.

'ಪಂಚಮಸಾಲಿ ಸಮುದಾಯಕ್ಕೆ ಮೀಸಲಾತಿ ನೀಡುವುದನ್ನು ನಾವು ವಿರೋಧಿಸಿಲ್ಲ. ಅದನ್ನು ವಿರೋಧಿಸುವ ಪ್ರಶ್ನೆಯೇ ಉದ್ಭವಿಸಿಲ್ಲ. ಚುನಾವಣೆ ವೇಳೆ, ಬೇರೆ ಪಕ್ಷದವರಿಂದ ಈ ರೀತಿಯ ಅಪಪ್ರಚಾರ ನಡೆಯುತ್ತದೆ. ಇದಕ್ಕೆ ಯಾವುದೇ ಆಧಾರವಿಲ್ಲ. ಪಂಚಮಸಾಲಿ ಮೀಸಲಾತಿ ಬಗ್ಗೆ ಚರ್ಚೆ ಮಾಡಲ್ಲ' ಎಂದರು.

## ವಾಣಿಜ್ಯ ಬಳಕೆಯ ಎಲ್‌ಪಿಜಿ ಸಿಲಿಂಡರ್ ಬೆಲೆ ಇಳಿಕೆ

ನವದೆಹಲಿ: ವಾಣಿಜ್ಯ ಬಳಕೆಯ 19 ಕೆಜಿ ಎಲ್ಪಿಜಿ ಸಿಲಿಂಡರ್ ಬೆಲೆ 30.50 ರೂ. ಇಳಿಕೆಯಾಗಿದೆ.

ಇದಲ್ಲದೆ 5 ಕೆಜಿ ಎಫ್ಟಿಎಲ್ (ಫ್ರೀ ಟ್ರೇಡ್ ಎಲ್ಪಿಜಿ) ಸಿಲಿಂಡರ್ ಬೆಲೆಯೂ ಕೂಡ 7.50 ರೂಪಾಯಿ ಕಡಿಮೆಯಾಗಿದ್ದು ಹೊಸ ಹಣಕಾಸು ವರ್ಷದ 2024–25 ಮೊದಲ ದಿನ ಎಲ್ಪಿಜಿ ದರವನ್ನು ಕಡಿಮೆ ಮಾಡಲಾಗಿದ್ದು, ಇದರಿಂದ ವಾಣಿಜ್ಯ ಗ್ಯಾಸ್ ಬಳಕೆದಾರರಿಗೆ ಸಿಹಿ ಸುದ್ದಿಯಾಗಿದೆ.

ಈ ಪರಿಷ್ಕೃತ ದರ ಇಂದು (ಏಪ್ರಿಲ್ 01) ರಿಂದಲೇ ಅನ್ವಯವಾಗಲಿದೆ.

ದೇಶದ ಹಲವು ರಾಜ್ಯಗಳಲ್ಲಿ ತೆರಿಗೆ ಅನುಗುಣವಾಗಿ ದರ ಪರಸ್ಕರಣೆ



ಮಾಡಲಾಗಿದ್ದು ರಾಜಧಾನಿ ದೆಹಲಿಯಲ್ಲಿ 19 ಕೆಜಿ ಎಲ್ಪಿಜಿ ಸಿಲಿಂಡರ್ ಬೆಲೆ 30.50 ರೂ, ಮುಂಬೈನಲ್ಲಿ 31.50 ರೂ. ಚೆನ್ನೈನಲ್ಲಿ 30.50 ರೂ. ಮತ್ತು ಕೋಲ್ಕತ್ತಾದಲ್ಲಿ 32 ರೂ. ಕಡಿಮೆಯಾಗಿದೆ.

ಬೆಲೆ ಇಳಿಕೆ ನಂತರ ದೆಹಲಿಯಲ್ಲಿ ವಾಣಿಜ್ಯ ಸಿಲಿಂಡರ್ 1764.50 ರೂ. ಗಳಿಗೆ ಲಭ್ಯವಾಗಲಿದೆ.

ಇನ್ನು ಮುಂಬೈನಲ್ಲಿ 19 ಕೆಜಿ ವಾಣಿಜ್ಯ ಸಿಲಿಂಡರ್ ಬೆಲೆ 1717.50 ರೂ. ಇದೆ. ಕೋಲ್ಕತ್ತಾದಲ್ಲಿ 1879 ರೂ. ಮತ್ತು ಚೆನ್ನೈನಲ್ಲಿ 1930 ರೂ. ಮತ್ತು ಬೆಂಗಳೂರಿನಲ್ಲಿ ವಾಣಿಜ್ಯ ಬಳಕೆಯ ಸಿಲಿಂಡರ್ಬೆಲೆ 1830 ರೂಗೆ ಇಳಿದಿದೆ.

14 ಕೆಜಿ ಗೃಹಬಳಕೆಯ ಗ್ಯಾಸ್ ಸಿಲಿಂಡರ್ಗಳ ಬೆಲೆಯಲ್ಲಿ ಯಾವುದೇ ಬದಲಾವಣೆಯಾಗಿಲ್ಲ.

## ಅಮಿತ್ ಶಾ ಅವರೊಂದಿಗೆ ಇಂದು ಹೆಚ್.ಡಿ.ಕುಮಾರಸ್ವಾಮಿ ಬ್ರೇಕ್ ಫಾಸ್ಟ್ ಮೀಟಿಂಗ್

ಬೆಂಗಳೂರು: ರಾಜ್ಯಕ್ಕೆ ಆಗಮಿಸುತ್ತಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಮಾಜಿ ಮುಖ್ಯಮಂತ್ರಿಗಳಾದ ಹೆಚ್.ಡಿ.ಕುಮಾರಸ್ವಾಮಿ ಅವರು ಮಾತುಕತೆ ನಡೆಸಲಿದ್ದಾರೆ.

ಬೆಳಗ್ಗೆ ವೆಸ್ಟ್ ಎಂಡ್ ಹೋಟೆಲ್ ನಲ್ಲಿ ಈ ಭೇಟಿ ನಡೆಯಲಿದ್ದು, ಈ ಬಗ್ಗೆ ಕುಮಾರಸ್ವಾಮಿ ಅವರು ಮಾಹಿತಿ ನೀಡಿದ್ದಾರೆ.

ಮಂಗಳವಾರ ಬೆಳಗ್ಗೆ ಅಮಿತ್ ಶಾ ಅವರ ಜತೆ ಬ್ರೇಕ್ ಫಾಸ್ಟ್ ಮೀಟಿಂಗ್ ಇದೆ. ಲೋಕಸಭೆ ಚುನಾವಣೆ ಬಗ್ಗೆ ಅವರೊಂದಿಗೆ ಚರ್ಚೆ ನಡೆಸಲಾಗುವುದು. ನಮ್ಮಲ್ಲಿರುವ ಮಾಹಿತಿಯನ್ನು ಅಮಿತ್ ಶಾ ಅವರೊಂದಿಗೆ ಹಂಚಿಕೊಳ್ಳುತ್ತೇವೆ ಎಂದು ಅವರು ತಿಳಿಸಿದರು.

ಒಟ್ಟಾರೆಯಾಗಿ ರಾಜ್ಯದ 28 ಕ್ಷೇತ್ರಗಳನ್ನು ನಮ್ಮ ಮೈತ್ರಿಕೂಟ ಗೆಲ್ಲಬೇಕು.

ಯಾವುದೇ ಕ್ಷೇತ್ರದಲ್ಲಿಯೂ ಸಮಸ್ಯೆ ಆಗಬಾರದು. ಹೊಂದಾಣಿಕೆಗೆ ಧಕ್ಕೆ ಆಗಬಾರದು, ಗುರಿ ತಲುಪಲು ಯಾವ ಲೋಪ ಆಗಬಾರದು ಎಂಬ ಉದ್ದೇಶ ನಮ್ಮದು.

ಅದಕ್ಕೆ ಪೂರಕವಾಗಿ ಎಲ್ಲ ರೀತಿಯಲ್ಲಿ ಚರ್ಚೆ ಮಾಡ್ತೇವೆ. ನಂತರ ಸಂಜೆ ಚನ್ನಪಟ್ಟಣದಲ್ಲಿ ರೋಡ್ ಶೋದಲ್ಲಿ ಇಬ್ಬರೂ ಭಾಗವಹಿಸುತ್ತೇವೆ.

ಇಡಿ ರಾಜ್ಯಕ್ಕೆ ಚನ್ನಪಟ್ಟಣದಿಂದಲೇ ಒಂದು ಸ್ಪಷ್ಟ ಸಂದೇಶ ಕೊಡುತ್ತೇವೆ ಎಂದರು ಮಾಜಿ ಮುಖ್ಯಮಂತ್ರಿಗಳು.

ನಾನು ಬೆಂಗಳೂರು ಗ್ರಾಮಾಂತರ ಕ್ಷೇತ್ರದಲ್ಲಿ ಪ್ರಚಾರ ಮಾಡುತ್ತೇನೆ. ಕನಕಪುರ, ರಾಮನಗರ, ಚನ್ನಪಟ್ಟಣ, ಕುಣಿಗಲ್



ನಲ್ಲಿ ಪ್ರವಾಸ ಮಾಡುವೆ. ತುಮಕೂರು, ಚಾಮರಾಜನಗರ, ಮೈಸೂರು ಕೋಲಾರ, ಚಿಕ್ಕಬಳ್ಳಾಪುರ ಸೇರಿದಂತೆ 14 ಕಡೆ ಪ್ರಚಾರ ನಡೆಸುತ್ತೇನೆ. ಕರಾವಳಿ ಬಿಟ್ಟು ಎಲ್ಲ ಕಡೆ ಪ್ರಚಾರ ಮಾಡುತ್ತೇನೆ ಎಂದು ಅವರು ಹೇಳಿದರು.

ಸುಮಲತಾ ಬೆಂಬಲ ನೀಡುವ ಬಗ್ಗೆ ವಿಶ್ವಾಸ ಇದೀಯಾ ಎಂದು ಕೇಳಲಾದ ಪ್ರಶ್ನೆಗೆ ಉತ್ತರಿಸಿದ ಕುಮಾರಸ್ವಾಮಿ ಅವರು; ಸುಮಲತಾ ಅವರು ಒಂದು ಪದ ಹೇಳಿದ್ದಾರೆ. ಆರೋಗ್ಯಕರ ಚರ್ಚೆ ಆಗಿದೆ ಎಂದು ಅವರು ಹೇಳಿದ್ದಾರೆ. ಸೂಕ್ಷ್ಮವಾಗಿ ಹೇಳಿದ್ದಾರೆ. ಅದಕ್ಕೆ ಕಾಂಗ್ರೆಸ್ ನವರು ಭಯ ಬಿದ್ದು ಮಾತಾಡ್ತಾ ಇದ್ದಾರೆ ಎಂದು ಕುಮಾರಸ್ವಾಮಿ ಅವರು ಪ್ರಶ್ನೆಯೊಂದಕ್ಕೆ ಉತ್ತರ ನೀಡಿದರು.

ರಾಮನಗರ ಜನರ ಸೇವೆ ಮಾಡಲು ಅಣ್ಣ ತಮ್ಮ ಇರುವುದು ಎಂದು ಡಿ.ಕೆ.ಶಿವಕುಮಾರ್ ನೀಡಿರುವ ಹೇಳಿಕೆ ಬಗ್ಗೆ ತೀಕ್ಷ್ಣವಾಗಿ ಉತ್ತರ ಕೊಟ್ಟ ಕುಮಾರಸ್ವಾಮಿ ಅವರು; ಅವರು ಏನು ಸೇವೆ ಮಾಡುತ್ತಿದ್ದಾರೆ ಎನ್ನುವುದು ಎಲ್ಲರಿಗೂ ಗೊತ್ತಿದೆ.

ಬೆಂಗಳೂರಿನಲ್ಲಿ ಫ್ಲಾಟ್ ಪ್ಲಾನ್ ಮಂಜೂರಾತಿಗೆ ಪ್ರತೀ ಚದರ ಅಡಿಗೆ 100 ರೂಪಾಯಿ ಫಿಕ್ಸ್ ಮಾಡಿರುವುದು ಸೇವೆ ಅಲ್ಲವೇ? ಅದು ಒಂದು ಸೇವೆ! ಎಲ್ಲರಿಗೂ ಧಮ್ಕಿ ಹಾಕೋದು ಒಂದು ಸೇವೆ!! ಅದನ್ನೆ ತಾನೇ ಮಾಡ್ತಾ ಇರೋದು? ಎಂದು ಕುಟುಕಿದರು.

ಅವರ ಸೇವೆಯೇ ಬೇರೆ ರೀತಿ. ಸೇವೆ ಮಾಡುತ್ತಿದ್ದಾರೋ ಅಥವಾ ರಾಜ್ಯವನ್ನು ಯಾವ ಪರಿಸ್ಥಿತಿಗೆ ತೆಗೆದುಕೊಂಡು ಹೋಗುತ್ತಿದ್ದಾರೋ ಮುಂದಿನ ದಿನಗಳಲ್ಲಿ ನೋಡೋಣ. ನಾವು ಯಾತಕ್ಕೆ ಇದ್ದೀವಿ? ನಾವು ನಿದ್ದೆ ಮಾಡೋಕೆ ಬಂದಿದ್ದೀವಾ? ಅವರು ಮಾತ್ರವಾ ಸೇವೆ ಮಾಡೋದು? ಪಾಪ.. ಪಂಚಾಯತಿ ಸದಸ್ಯರ ರೀತಿ ಕೆಲಸ ಮಾಡುತ್ತಾರಂತೆ!! ಹಾಗಾದರೆ, ಪಂಚಾಯತಿ ಸದಸ್ಯರು ಯಾಕೆ? ಇವರು ಅಲ್ಲಿ ಹೋಗಿ ಕೈ ಹಾಕಿದರೆ ಪಂಚಾಯತಿ ಸದಸ್ಯರು ಏನ್ ಮಾಡಬೇಕು? ಅವರು ಮಾತುಗಳಿಗೂ ನಡುವಳಿಕೆಗೂ ಬಹಳ ವ್ಯತ್ಯಾಸ ಇದೆ ಎಂದು ತರಾಟೆಗೆ ತೆಗೆದುಕೊಂಡರು ಕುಮಾರಸ್ವಾಮಿ ಅವರು.

ಕೋವಿಡ್ ಸಮಯದಲ್ಲಿ ಕುಮಾರಸ್ವಾಮಿ ಎಲ್ಲಿ ಹೋಗಿದ್ದರು ಎಂದು ಕೇಳುತ್ತಾರೆ. ಅನಿತಾ ಕುಮಾರಸ್ವಾಮಿ ರಾಮನಗರ ಶಾಸಕರಿದ್ದರು. ನಾನು ಚನ್ನಪಟ್ಟಣ ಶಾಸಕನಿದ್ದೆ. ರಾಮನಗರ, ಚನ್ನಪಟ್ಟಣಕ್ಕೆ ನಾನು ಏನು ಸೇವೆ ಸಲ್ಲಿಸಬೇಕು ಸಲ್ಲಿಸಿದ್ದೇನೆ. ಪ್ರಚಾರ ಮಾಡಿಕೊಂಡಿಲ್ಲ. ಪ್ರತಿ ಕುಟುಂಬಕ್ಕೂ ಕೈಲಾದ ಸಹಾಯ ಮಾಡಿದ್ದೇವೆ. ಇವರಂತೆ ನಾವು ಡಂಗುರ ಹೊಡೆದ್ವಾ? ಪಾಪ.. ಹೆಣ ಹೊರೋಕೆ ಹೋಗಿದ್ದರಂತೆ ಇವರು. ನಾವು ಜನರು ಹೆಣವಾಗದಂತೆ ನೋಡಿಕೊಂಡೆವು. ಅವರ ಜೀವ ಉಳಿಸಲಿಕ್ಕೆ ಪ್ರಯತ್ನ ಮಾಡಿದೆವು ತಿರುಗೇಟು ಕೊಟ್ಟರು ಅವರು.

## ಹುಕ್ಕೇರಿ ಹಿರೇಮಠಕ್ಕೆ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಭೇಟಿ



ಬೆಳಗಾವಿ: ಇಲ್ಲಿನ ಲಕ್ಷ್ಮೀ ಟೆಕಡಿಯಲ್ಲಿರುವ ಹುಕ್ಕೇರಿ ಹಿರೇಮಠದ ಶಾಖೆಗೆ ಸೋಮವಾರ ಬೆಳಗಾವಿ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಭೇಟಿ ನೀಡಿ ಹಿರೇಮಠದ ಶ್ರೀ ಚಂದ್ರಶೇಖರ ಶಿವಾಚಾರ್ಯ ಸ್ವಾಮೀಜಿ ಅವರನ್ನು ಗೌರವಿಸಿ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಜಗದೀಶ್ ಶೆಟ್ಟರ್ ಮಾತನಾಡಿ, ನರೇಂದ್ರ ಮೋದಿ ಅವರು ಪ್ರಧಾನ ಮಂತ್ರಿ ಆದಾಗಿನಿಂದಲೂ ದೇಶಕ್ಕೆ ಹೊಸ ಬದಲಾವಣೆ ನಿರ್ಮಾಣವಾಗಿದೆ. ತಾವು ಆಶೀರ್ವದಿಸಿ ಮತ್ತೆ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನ ಮಂತ್ರಿಯಾಗಲು ತಮ್ಮ ಆಶೀರ್ವಾದ ಬೇಕು. ಬೆಳಗಾವಿ ಲೋಕಸಭೆಯಿಂದ ನನ್ನಗೆ ಆಯ್ಕೆ ಮಾಡಿ ಆಶೀರ್ವದಿಸಿ ಎಂದು ಶ್ರೀಗಳಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಬಿಜೆಪಿ ಉಪಾಧ್ಯಕ್ಷ ಅನಿಲ್ ಬೆನಕೆ, ಅಲ್ಪಸಂಖ್ಯಾತರ ನಿಗಮ ಮಂಡಳದ ಮಾಜಿ ಅಧ್ಯಕ್ಷ ಮುಕ್ತಾರ ಹುಸೇನ್ ಪಠಾಣ, ಈರಣ್ಣಾ ಕೋತ, ವೀರುಪಾಕ್ಷಯ್ಯ ನೀರಲಗಿಮಠ, ಪಾಲಿಕೆ ಸದಸ್ಯೆ ವೀಣಾ ವಿಜಾಪುರೆ, ಬುಡಾ ಮಾಜಿ ಅಧ್ಯಕ್ಷ ಘೂಳಪ್ಪ ಹೊಸಮನಿ, ದಾದಾಗೌಡ ಬಿರಾದರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಸುರೇಶ್ ಅಂಗಡಿ ಮನೆಯೇ ಜಗದೀಶ್ ಶೆಟ್ಟರ್ ಅಡ್ರೆಸ್: ಬಾಲಚಂದ್ರ ಜಾರಕಿಹೊಳಿ

ಬೆಳಗಾವಿ: ಸುರೇಶ ಅಂಗಡಿ ಅವರ ಮನೆಯೇ ಜಗದೀಶ್ ಶೆಟ್ಟರ್ ಅವರ ಅಡ್ರೆಸ್ ಎಂದು ಮಾಜಿ ಸಚಿವ ಬಾಲಚಂದ್ರ ಜಾರಕಿಹೊಳಿ ಹೇಳಿದ್ದಾರೆ.

ಬೆಳಗಾವಿಯಲ್ಲಿ ಸೋಮವಾರ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಅವರ ಬೆಳಗಾವಿ ಅಡ್ರೆಸ್ ಎಲ್ಲಿದೆ ಎನ್ನುವ ಪ್ರಶ್ನೆಯನ್ನು ವಿರೋಧ ಪಕ್ಷದವರು ಕೇಳುತ್ತಿದ್ದಾರೆ ಎಂದು ಕೇಳಿದಾಗ, ಸುರೇಶ ಅಂಗಡಿ ಅವರ ಮನೆಯೇ ಜಗದೀಶ್ ಶೆಟ್ಟರ್ ಅಡ್ರೆಸ್ ಎಂದರು.

ಜಗದೀಶ ಶೆಟ್ಟರ್ ಅವರನ್ನು ಅಂಡರ್ ಎಸ್ಟಿಮೇಟ್ ಮಾಡಬಾರದು. ಅವರು ಗೆದ್ದು ಮಂತ್ರಿಯಾದರೆ ಎಲ್ಲರೂ ಅವರ ಮನೆ ಅಡ್ರೆಸ್ ಹುಡುಕಿಕೊಂಡು ಹೋಗುತ್ತಾರೆ ಎಂದು ಬಾಲಚಂದ್ರ ಜಾರಕಿಹೊಳಿ ಹೇಳಿದರು.

**ಚಿಕ್ಕೋಡಿಗೆ ಪ್ರಚಾರಕ್ಕೆ ಹೋಗುತ್ತೀರಾ?**

ಚಿಕ್ಕೋಡಿ ಲೋಕಸಭಾ ಕ್ಷೇತ್ರಕ್ಕೆ ಪ್ರಚಾರಕ್ಕೆ ಹೋಗುತ್ತೀರಾ ಎನ್ನುವ ಪ್ರಶ್ನೆಗೆ, ನಮ್ಮದು ಬೆಳಗಾವಿ ಲೋಕಸಭಾ ಕ್ಷೇತ್ರ. ಇಲ್ಲೇ ಪ್ರಚಾರ ಮಾಡುತ್ತೇವೆ ಎನ್ನುತ್ತ ಕೈ ಮುಗಿದರು. ನಾನು, ರಮೇಶ್ ಜಾರಕಿಹೊಳಿ ಬೆಳಗಾವಿ ಕ್ಷೇತ್ರದಲ್ಲೇ ಹೆಚ್ಚು ಕೆಲಸ ಮಾಡುತ್ತೇವೆ, ಪಕ್ಷ ಹೇಳಿದರೆ ರಮೇಸ್ ಚಿಕ್ಕೋಡಿಗೆ ಹೋಗಬಹುದು ಎಂದರು.

ಜಗದೀಶ್ ಶೆಟ್ಟರ್ ನಿನ್ನೆ ಗೋಕಾಕ ಮತ್ತು ಅರಬಾವಿ ಕ್ಷೇತ್ರದಲ್ಲಿ ಅಡ್ಡಾಡಿದ್ದಾರೆ. ಏಪ್ರಿಲ್ 7ರಂದು ಗೋಕಾಕ ಮತ್ತು ಅರಬಾವಿಯಲ್ಲಿ ದೊಡ್ಡ ಕಾರ್ಯಕ್ರಮ ಮಾಡಲಿದ್ದೇವೆ. ಶೆಟ್ಟರ್ ಅವರು ಸವದತ್ತಿ, ಬೈಲಹೊಂಗಲ, ರಾಮದುರ್ಗದಲ್ಲೂ ಪ್ರಚಾರ ಮಾಡಲಿದ್ದಾರೆ. ಎಲ್ಲರೂ ಭಿನ್ನಾಭಿಪ್ರಾಯ ಮರೆತು ಸರಿಯಾಗಿ ಕೆಲಸ ಮಾಡಿದರೆ ಬಿಜೆಪಿಗೆ ಹೆಚ್ಚಿನ ಅವಕಾಶವಿದೆ ಎಂದು ಬಾಲಚಂದ್ರ



ಜಾರಕಿಹೊಳಿ ತಿಳಿಸಿದರು.

ಗೋಕಾಕ, ಅರಬಾವಿಯಲ್ಲಿ ಕಾಂಗ್ರೆಸ್ ಗೆ ಲೀಡ್ ಆಗಲಿದೆ ಎನ್ನುವ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರ ಹೇಳಿಕೆ ಕುರಿತು ಪ್ರಶ್ನಿಸಿದಾಗ, ಅವರೂ ಗೆಲ್ಲಲು ಪ್ರಯತ್ನಿಸುತ್ತಾರೆ, ನಾವೂ ಪ್ರಯತ್ನಿಸುತ್ತೇವೆ. ಕಾಂಗ್ರೆಸ್ ದೇಶದಲ್ಲಿ 45ಕ್ಕಿಂತ ಹೆಚ್ಚು ಸ್ಥಾನ ಗೆಲ್ಲುವುದಿಲ್ಲ ಎಂದು ಮಾಧ್ಯಮಗಳಲ್ಲಿ ಬರುತ್ತಿದೆ. ನಮ್ಮ ಕ್ಷೇತ್ರದಿಂದ ಆಯ್ಕೆಯಾದವರು ಆಡಳಿತ ಪಕ್ಷದಲ್ಲಿ ಕುಳಿತರೆ ಒಳ್ಳೆಯದಾಗುತ್ತದೆ ಎನ್ನುವುದು ನನ್ನ ಅಭಿಪ್ರಾಯ ಎಂದು ಬಾಲಚಂದ್ರ ಹೇಳಿದರು.

ನಾಗನೂರು ಬಸಗೌಡ ಪಾಟೀಲ ಅವರ ಮನೆಗೆ ಹೋಗಿ ಕಾಂಗ್ರೆಸ್ ನಾಯಕರು ಮಾತನಾಡಿರುವ ಕುರಿತು ಪ್ರಶ್ನಿಸಿದಾಗ, ಅವರು ಬಹಳ ಹಿರಿಯರು. ಅವರು ವಯಸ್ಸಾಗಿರುವುದರಿಂದ ಹೆಚ್ಚಾಗಿ ಮನೆಯಲ್ಲೇ ಇರುತ್ತಾರೆ. ಅವರ ಮನೆಗೆ ಎಲ್ಲ ಪಕ್ಷದವರೂ ಹೋಗುವುದು ಸಹಜ. ಅದರಲ್ಲೇನೂ ವಿಶೇಷವಿಲ್ಲ ಎಂದರು.

ವಿಧಾನಸಭೆ ಚುನಾವಣೆಯಲ್ಲಿ ಜಾತಿ ಸ್ವಲ್ಪ ನಡೆಯುತ್ತದೆ. ಆದರೆ ಲೋಕಸಭಾ ಚುನಾವಣೆ ದೇಶದ ಚುನಾವಣೆ, ನರೇಂದ್ರ ಮೋದಿ ಚುನಾವಣೆ. ಇಲ್ಲಿ ಜಾತಿ ಹೆಚ್ಚು ವರ್ಕೌಟ್ ಆಗುವುದಿಲ್ಲ ಎಂದರು.

ಸತೀಶ್ ಜಾರಕಿಹೊಳಿ ಅವ–ರಿಗೆ ಚಿಕ್ಕೋಡಿಯಲ್ಲಿ ಪ್ರಿಯಾಂಕಾ ಗೆಲ್ಲಿಸುವುದು ಎಷ್ಟು ಮುಖ್ಯವೋ ಬೆಳಗಾವಿಯಲ್ಲಿ ಮೃಣಾಲ ಹೆಬ್ಬಾಳಕರ್ ಗೆಲ್ಲಿಸುವುದೂ ಅಷ್ಟೇ ಮುಖ್ಯ. ಅವರಿಗೆ ಗೋಕಾಕದಲ್ಲೂ ಸಾಕಷ್ಟು ಪ್ರಭಾವವಿದೆ, ಹಾಗಾಗಿ ಗೋಕಾಕದಲ್ಲಿ ಕಾಂಗ್ರೆಸ್ ಗೆ ಲೀಡ್ ಆಗಬಹುದೇ ಎನ್ನುವ ಪ್ರಶ್ನೆಗೆ, ಅವರೂ ಗೆಲ್ಲಲು ಪ್ರಯತ್ನಿಸುತ್ತಾರೆ. ನಮ್ಮ ಅಭ್ಯರ್ಥಿ ಗೆಲ್ಲಿಸಲು ನಾವು ಪ್ರಯತ್ನಿಸುತ್ತೇವೆ ಎಂದರು.

**ಕೈಗೆ ಸಿಗಬೇಡಿ ಎಂದಿದ್ದೇನೆ!**

ಮಾಧ್ಯಮದವರ ಕೈಗೆ ಸಿಗಬೇಡಿ ಎಂದು ರಮೇಶ ಜಾರಕಿಹೊಳಿಗೆ ಹೇಳಿದ್ದೇನೆ ಎಂದು ಬಾಲಚಂದ್ರ ಜಾರಕಿಹೊಳಿ ತಿಳಿಸಿದರು. ಅವರು ಮಾತನಾಡಿದರೆ ಟಿಆರ್ ಪಿ ಜಾಸ್ತಿ ಆಗುತ್ತದೆ, ಯಾರು ಗೆಲ್ಲುತ್ತಾರೆ ಎನ್ನುವುದೇ ತಿಳಿಯುವುದಿಲ್ಲ ಎಂದು ಹಾಸ್ಯ ಚಟಾಕಿ ಹಾರಿಸಿದರು.

# ಲೋಕಸಭಾ ಸಾರ್ವತ್ರಿಕ ಚುನಾವಣೆ: ದಿನದ 24 ಗಂಟೆ ಕಾರ್ಯನಿರತ ಜಿಲ್ಲಾ ಮತದಾರರ ಸಹಾಯವಾಣಿ ಕೇಂದ್ರ: ಸಾರ್ವಜನಿಕರಿಂದ ಉತ್ತಮ ಸ್ಪಂದನೆ

ಧಾರವಾಡ: ಲೋಕಸಭಾ ಚುನಾವಣೆಗಾಗಿ ಜಿಲ್ಲಾಧಿಕಾರಿಗಳ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳ ಕಛೇರಿಯಲ್ಲಿ ಜಿಲ್ಲಾ ಮತದಾರರಿಗಾಗಿ ಸಹಾಯವಾಣಿ ಕೇಂದ್ರವನ್ನು ಮಾರ್ಚ್ 16 ರಿಂದ ಪ್ರಾರಂಭಿಸಲಾಗಿದ್ದು, ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಬರುತ್ತಿದೆ. ಮತದಾರರ ಪ್ರತಿ ಕರೆಗೆ ಮಾಹಿತಿಯುಕ್ತ ಪರಿಹಾರ ತಿಳಿಸಲಾಗುತ್ತಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲಾ ಚುನಾವಣಾ ಕಂಟ್ರೋಲ್ ರೂಮ್ನಲ್ಲಿ ಆರಂಭಿಸಲಾಗಿರುವ ಈ ಸಹಾಯವಾಣಿ ಕೇಂದ್ರವು ದಿನದ 24 ಗಂಟೆ (24 x 7) ಕಾರ್ಯ ನಿರ್ವಹಿಸುತ್ತಿದೆ. ಸಾರ್ವಜನಿಕರಿಂದ ಕರೆ ಸ್ವೀಕಾರಕ್ಕೆ ಒಟ್ಟು 6 ಸಿಬ್ಬಂದಿಗಳನ್ನು ಪ್ರತಿ 8 ಗಂಟೆಗಳಿಗೆ ಇಬ್ಬರಂತೆ (ಬೆಳಿಗ್ಗೆ 6 ರಿಂದ 2 ಗಂಟೆ. 2ಗಂಟೆಯಿಂದ ರಾತ್ರಿ 10 ಗಂಟೆಗೆ ಹಾಗೂ ರಾತ್ರಿ 10 ಗಂಟೆಯಿಂದ ಬೆಳಗ್ಗೆ 6 ಗಂಟೆಯವರೆಗೆ) ಕಾರ್ಯನಿರ್ವಹಿಸಲು ನೇಮಿಸಲಾಗಿದೆ. ಈ 6 ಸಿಬ್ಬಂದಿಗಳ ಮೇಲ್ವಿಚಾರಕರನ್ನಾಗಿ ಜಿಲ್ಲಾ ನೋಡಲ್ ಅಧಿಕಾ–ರಿಯಾಗಿ ಕೃಷಿ ವಿವಿಯ ಕುಲಸಚಿವೆ, ಹಿರಿಯ ಕೆಎಎಸ್ ಅಧಿಕಾರಿ ಜಯಲಕ್ಷ್ಮಿ ರಾಯಕೊಡ ಅವರನ್ನು ನೇಮಿಸಲಾಗಿದೆ ಎಂದು ಅವರು ತಿಳಿಸಿದರು.

ಜಿಲ್ಲೆಯ ಸಹಾಯವಾಣಿ ಕೇಂದ್ರಕ್ಕೆ 1950 ಟೋಲ್ ಫ್ರೀ ನಂಬರ್ನ ಸೌಕರ್ಯ ಕಲ್ಪಿಸಲಾಗಿದೆ. ಈ ದೂರವಾಣಿಯಲ್ಲಿ PRI(Priority Rate Interface) ಇದ್ದು, ಒಂದೇ ಸಲ ಹಲವು ಕರೆಗಳನ್ನು ಸ್ವೀಕರಿಸುವ ಸಾಮರ್ಥ್ಯ ಹೊಂದಿರುತ್ತದೆ ಎಂದು ಅವರು ತಿಳಿಸಿದ್ದಾರೆ.

ಜಿಲ್ಲೆಯ ಸೀಮೆಯೊಳಗೆ ವಾಸಿಸುವ ವ್ಯಕ್ತಿಗಳು ಜಿಲ್ಲೆಯ ಮತದಾರರ ಸಹಾಯವಾಣಿಗೆ ಕರೆ ಮಾಡಲು 1950 ಸಂಖ್ಯೆಯನ್ನು ಡಯಲ್ ಮಾಡಿದರೆ ಸಾಕು. ಲ್ಯಾಂಡಲೈನ್ ಇಲ್ಲವೆ ಯಾವುದೇ ಮೊಬೈಲ್ ಫೋನ್ನಿಂದ ಕರೆ ಮಾಡಬಹುದು. ಬೇರೆ ಜಿಲ್ಲೆಗಳಿಂದ ಅಥ–ವಾ ಹೊರರಾಜ್ಯಗಳಿಂದ ಈ ಸಹಾಯವಾಣಿಗೆ ಕರೆ ಮಾಡಬೇಕಾದಲ್ಲಿ ಖಖಿಆ ಕೋಡನ್ನು




ಉಪಯೋಗಿಸಿ 1950 ಡಯಲ್ ಮಾಡಬೇಕು.

ಮತದಾರರು ಹಾಗೂ ಸಾರ್ವಜನಿಕರು ಕೇಳುವ ಚುನಾವಣಾ ಸಂಬಂಧಿತ ವಿಷಯಗಳ ಮಾಹಿತಿಯನ್ನು ಒದಗಿಸಲಾಗುವುದು.

ಸಾರ್ವಜನಿಕರಿಂದ, ಮಾಹಿತಿ ಕೇಳಿ, ಮತದಾರರ ಕಾರ್ಡಗೆ ಹೊಸ ಅರ್ಜಿ ಸಲ್ಲಿಸಿದ್ದು ಯಾವಾಗ ಬರುತ್ತದೆ? ಮತದಾರರ ಪಟ್ಟಿಯಲ್ಲಿ ನನ್ನ ಹೆಸರು ಸಿಗುತ್ತಿಲ್ಲ. ಮತದಾರರ ಕಾರ್ಡಲ್ಲಿ ಹೆಸರು. ಲಿಂಗ. ಫೋನ್ ನಂಬರ್ ತಿದ್ದುಪಡಿ ಮಾಡಲು ಯಾವ ಫಾರಂ ತುಂಬಬೇಕು? ನಮ್ಮ ಭಾಗದ ಮತಗಟ್ಟೆ ಸಂಖ್ಯೆ ಎಷ್ಟು? ವಿಳಾಸ ಬದಲಾವಣೆ ಮಾಡಿಕೊಳ್ಳುವುದು ಹೇಗೆ? ಹೀಗೆ ಮತದಾರರ ಚೀಟಿಗೆ/ಕಾರ್ಡಗೆ ಸಂಬಂಧಿಸಿದ ಹಲವಾರು ಪ್ರಶ್ನೆಗಳು ಕುರಿತಂತೆ ಫೋನ್ ಕರೆಗಳು ಸ್ವೀಕೃತವಾಗುತ್ತಿದ್ದು, ಸಹಾಯವಾಣಿ ಸಿಬ್ಬಂದಿಗಳು ಸೂಕ್ತ ಉತ್ತರ ನೀಡುತ್ತಿದ್ದಾರೆ.

ಈ ರೀತಿ ಬರುವ ಕರೆಗಳಲ್ಲಿ ಯುವ ಮತದಾರರ ಕರೆಗಳೇ ಹೆಚ್ಚಾಗಿವೆ. ಅದರಲ್ಲೂ ಗ್ರಾಮೀಣ ಯುವ ಮತದಾರರಿಂದ ಅತಿ ಹೆಚ್ಚು ಕರೆಗಳು ಸ್ವೀಕಾರವಾಗುತ್ತಿವೆ. ಮತದಾರರ ನೋಂದಣಿ, ರದ್ದುಪಡಿಸುವಿಕೆ, ಸ್ಥಳಾಂತರ ಕು–ರಿತ ಫಾರಂ 6,7,8 ಕುರಿತಂತೆ ಕರೆಗಳಿಗೂ ಕೂಡ ಸಂಬಂಧಿತ (AERO) ಎಇಆರ್ಓ ಗಳಿಂದ ಮಾಹಿತಿ ಪಡೆದು ಉತ್ತರಿಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

ಪ್ರತಿ ಕರೆಯ ಮಾಹಿತಿಯನ್ನು ರಿಜಿಸ್ಟರ್ಗಳಲ್ಲಿ ದಾಖಲು ಮಾಡಲಾಗುತ್ತಿದ್ದು, ಪ್ರತಿ ಕರೆಯ ಹೆಲ್ಪಲೈನ್ ಚಾಪ್ಟರ್ನಲ್ಲಿ ದಾಖಲಾಗಿ ಕೇಂದ್ರ ಕಛೇರಿಗೆ ದಾಖಲಿಸಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

ಈ ರೀತಿ ಕರೆಗಳ ಜೊತೆ ಚುನಾವಣೆಗೆ ಸಂಬಂಧಿಸಿದ ದೂರುಗಳಿಗೂ ಉತ್ತ–ರಿಸಲಾಗುತ್ತಿದೆ. ಈ ದೂರುಗಳನ್ನು ಎನ್.ಜಿ.ಆರ್.ಎಸ್ (NGRS) ಮತ್ತು ಪಿ.ಜಿ.ಆರ್.ಎಸ್ (PGRS) ಪೋರ್ಟಲ್ಗಳ ಮೂಲಕ ಸ್ವೀಕೃತಗೊಳ್ಳುತ್ತಿವೆ. ದೂರು ಸ್ವೀಕರಿಸಿದ ನಂತರ 24 ರಿಂದ 48 ಗಂಟೆಗಳ ಒಳಗಡೆ ಪ್ರತಿ ದೂರಿಗೆ ಸಂಬಂಧಿತ ಇಲಾಖೆಯಿಂದ ಮಾಹಿತಿ ಪಡೆದು ನಂತರ ಜಿಲ್ಲಾಧಿಕಾರಿ, ಜಿಲ್ಲಾ ಚುನಾವಣಾಧಿಕಾರಿಗಳ ಸ್ಪಷ್ಟ ಅಭಿಪ್ರಾಯದೊಂದಿಗೆ ಚುನಾವಣಾ ಆಯೋಗದ ಈಮೇಲ್ cmc.ceo.f@gmail.com ಗೆ ಸಲ್ಲಿಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಇಂದಿನ (ಏ.01) ವರೆಗೆ ಜಿಲ್ಲಾ ಮತದಾರ ಸಹಾಯವಾಣಿ ಕೇಂದ್ರದಿಂದ ಮತದಾರ ಮಾಹಿತಿಯೊಂದಿಗೆ 610 ಎನ್.ಜಿ.ಎಸ್.ಪಿ (ಓಉಖಕ), ಹಾಗೂ 16 ಪಿ.ಜಿ.ಆರ್.ಎಸ್ (ಕಉಖಖ) ದೂರುಗಳ ಕರೆಗಳನ್ನು ಸ್ವೀಕ–ರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ವಿವಿಧ ಮತಕ್ಷೇತ್ರಗಳ ಸಹಾಯವಾಣಿ ಸಂಖ್ಯೆಗಳ ವಿವರ: ಧಾರವಾಡ ಜಿಲ್ಲೆಯ ಮತದಾರ ಸಹಾಯವಾಣಿ ಸಂಖ್ಯೆಗಳು 1950, 0836–2446650, 0836–2446651 ಹಾಗೂ 0836–2446652, ಧಾರವಾಡ ಗ್ರಾಮೀಣ ತಾಲೂಕಿನ ಮತದಾರ ಸಹಾಯವಾಣಿ ಸಂಖ್ಯೆ 0836–2233822, ನವಲಗುಂದ ತಾಲೂಕಿನ ಮತದಾರ ಸಹಾಯವಾಣಿ ಸಂಖ್ಯೆ 08380–229240, ಕುಂದಗೋಳ ತಾಲೂಕಿನ ಮತದಾರ ಸಹಾಯವಾಣಿ ಸಂಖ್ಯೆ 08304–290239, ಹುಬ್ಬಳ್ಳಿ – ಧಾರವಾಡ ಪೂರ್ವ ವಿಧಾನ ಸಭಾ ಮತಕ್ಷೇತ್ರದ ಮತದಾರ ಸಹಾಯವಾಣಿ ಸಂಖ್ಯೆ 0836–2213833, ಹುಬ್ಬಳ್ಳಿ – ಧಾರವಾಡ ಕೇಂದ್ರ ವಿಧಾನ ಸಭಾ ಮತಕ್ಷೇತ್ರದ ಮತದಾರ ಸಹಾಯವಾಣಿ ಸಂಖ್ಯೆ 0836–2355106, ಹುಬ್ಬಳ್ಳಿ – ಧಾರವಾಡ ಪಶ್ಚಿಮ ವಿಧಾನ ಸಭಾ ಮತಕ್ಷೇತ್ರದ ಮತದಾರ ಸಹಾಯವಾಣಿ ಸಂಖ್ಯೆ 0836–2446133, ಕಲಘಟಗಿ ತಾಲೂಕಿನ ಮತದಾರ ಸಹಾಯವಾಣಿ ಸಂಖ್ಯೆ 08370–284535 ಗೆ ಕರೆ ಮಾಡಿ ಮಾಹಿತಿ ಪಡೆದುಕೊಳ್ಳಬಹುದು ಎಂದು ಧಾರವಾಡ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

# ಬೆಳಗಾವಿ ಹಾಲು ಒಕ್ಕೂಟ ಬೆಮುಲ್ ಅಧ್ಯಕ್ಷರಾಗಿ ಬಾಲಚಂದ್ರ ಜಾರಕಿಹೊಳಿ ಆಯ್ಕೆ

ಬೆಳಗಾವಿ: ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ (ಬೆಮುಲ್) ಅಧ್ಯಕ್ಷರಾಗಿ ಅರಭಾವಿ ಶಾಸಕ ಬಾಲಚಂದ್ರ ಜಾರಕಿಹೊಳಿ ಅವಿರೋಧವಾಗಿ ಆಯ್ಕೆಯಾದರು.

ಬೆಮುಲ್ ಅಧ್ಯಕ್ಷ ಸ್ಥಾನದ ಆಯ್ಕೆಗೆ ಸೋಮವಾರ ಚುನಾವಣೆ ನಿಗದಿಯಾಗಿತ್ತು. ನಿರ್ದೇಶಕ ಬಾಲಚಂದ್ರ ಜಾರಕಿಹೊಳಿ ಒಬ್ಬರೇ ಉಮೇದುವಾರಿಕೆ ಸಲ್ಲಿಸಿದ್ದರಿಂದ ಅವಿರೋಧವಾಗಿ ಆಯ್ಕೆ ಪ್ರಕ್ರಿಯೆ ನಡೆಯಿತು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಬಾಲಚಂದ್ರ ಜಾರಕಿಹೊಳಿ, 'ಬೆಮುಲ್ ಆಡಳಿತ ಮಂಡಳಿಯ 16 ಸ್ಥಾನಗಳ ಪೈಕಿ, 13 ಸ್ಥಾನಕ್ಕೆ ಅವಿರೋಧ ಆಯ್ಕೆಯಾಗಿತ್ತು. 3 ಮಂದಿ ಚುನಾವಣೆಯಲ್ಲಿ ಆಯ್ಕೆಯಾಗಿದ್ದರು.

ಅಧ್ಯಕ್ಷರ ಆಯ್ಕೆಗೆ ನಡೆದ ಆಡಳಿತ ಮಂಡಳಿ ಸಭೆಯಲ್ಲಿ ಹಿಂದಿನ ಅಧ್ಯಕ್ಷ ವಿವೇಕರಾವ್ ಪಾಟೀಲ ಮತ್ತು ಎಲ್ಲ ಸದಸ್ಯರು ಸರ್ವಾನುಮತದಿಂದ ನನ್ನನ್ನು ಆಯ್ಕೆ ಮಾಡಿದ್ದಾರೆ' ಎಂದರು.

'ಆಗಸ್ಟ್‌ನಲ್ಲಿ ನಡೆಯಲಿರುವ ಕರ್ನಾಟಕ ಹಾಲು ಒಕ್ಕೂಟದ (ಕೆಎಂಎಫ್) ಅಧ್ಯಕ್ಷ ಸ್ಥಾನದ ಚುನಾವಣೆಗೆ ನಾನು ಸ್ಪರ್ಧಿಸಲು ಬಯಸಿದ್ದೇನೆ. ರಾಜ್ಯ ಸರ್ಕಾರ ಜಾರಿಗೆ ತಂದ ಹೊಸ ಕಾಯ್ದೆ ಪ್ರಕಾರ, ಜಿಲ್ಲಾ ಹಾಲು ಒಕ್ಕೂಟದ ಅಧ್ಯಕ್ಷರಾದವರು ಮಾತ್ರ ಅದಕ್ಕೆ ಸ್ಪರ್ಧಿಸಬಹುದು' ಎಂದ ಅವರು, 'ಬೆಮುಲ್ ಹಿಂದಿನ ಅಧ್ಯಕ್ಷ ವಿವೇಕರಾವ್ ಪಾಟೀಲ ಉತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ. ಆದರೆ, ಕೆಎಂಎಫ್ ಅಧ್ಯಕ್ಷನಾಗಲು ನಾನು



ಬೆಮುಲ್ ಚುಕ್ಕಾಣಿ ಹಿಡಿಯಬೇಕಾಯಿತು. ಮುಂದಿನ ದಿನಗಳಲ್ಲಿ ಯಾವುದೇ ಗೊಂದಲ ಆಗಬಾರದು. ಹಾಗಾಗಿ ವಿವೇಕರಾವ್ ಅವರೊಂದಿಗೆ ಚರ್ಚಿಸಿಯೇ, ಅಧ್ಯಕ್ಷನಾಗಲು ಒಪ್ಪಿಕೊಂಡಿರುವೆ' ಎಂದು ಹೇಳಿದರು.

'ಬೆಮುಲ್ ಅಭಿವೃದ್ಧಿಗೆ ಎಲ್ಲರೂ ಒಂದಾಗಿ, ಒಗ್ಗಟ್ಟಾಗಿ ದುಡಿಯೋಣ. ಪಕ್ಷಾತೀತವಾಗಿ ಕೆಲಸ ಮಾಡೋಣ' ಎಂದು ತಿಳಿಸಿದರು.

'ಜಿಲ್ಲೆಯಲ್ಲಿ ಪ್ರತಿದಿನ ಸುಮಾರು 15 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಈ ಪೈಕಿ, ಬೆಮುಲ್ ಸುಮಾರು 2 ಲಕ್ಷ ಲೀಟರ್ ಸಂಗ್ರಹಿಸುತ್ತಿದೆ. ಉಳಿದ ಹಾಲು ಮಹಾರಾಷ್ಟ್ರ ಮತ್ತು ಖಾಸಗಿ ಕಂಪನಿಗಳಿಗೆ ಹೋಗುತ್ತಿದೆ.

ಮುಂದಿನ ದಿನಗಳಲ್ಲಿ ಹಾಲಿನ ಸಂಗ್ರಹಣೆ ಪ್ರಮಾಣವನ್ನು ದಿನಕ್ಕೆ 3 ಲಕ್ಷ ಲೀಟರ್‌ಗೆ ಹೆಚ್ಚಿಸಲು ಗುರಿ ಹಾಕಿಕೊಂಡಿದ್ದೇವೆ. ಹಾಲು ಮತ್ತು ಹಾಲಿನ ಉತ್ಪನ್ನಗಳನ್ನು ಸಂಸ್ಕರಿಸಿ, ತಯಾರಿಸಲು 250 ಕೋಟಿ ವೆಚ್ಚದಲ್ಲಿ ಹೊಸ ತಂತ್ರಜ್ಞಾನವುಳ್ಳ ಮೇಗಾ ಡೇರಿ ಸ್ಥಾಪನೆಗೆ ಉದ್ದೇಶಿಸಲಾಗಿದೆ. ಹೈನಗಾರರಿಗೆ ಸಮರ್ಪಕವಾಗಿ ಬಿಲ್ ಪಾವತಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು' ಎಂದರು.

ಬೆಮುಲ್ ನಿರ್ದೇಶಕರಾದ ವಿವೇಕರಾವ್ ಪಾಟೀಲ, ಬಾಬು ಕಟ್ಟಿ, ಮಲ್ಲಪ್ಪ ಪಾಟೀಲ, ಕಲ್ಲಪ್ಪ ಗಿರೆಣ್ಣವರ, ಬಸವರಾಜ ಪರನ್ನವರ, ಬಾಬುರಾವ್ ವಾಘಮೋಡೆ, ವಿರೂಪಾಕ್ಷಿ ಈಟಿ, ರಾಯಪ್ಪ ಡೂಗ, ಪ್ರಕಾಶ ಅಂಬೋಜಿ, ಸಂಜಯ ಶಿಂತ್ರಿ, ವ್ಯವಸ್ಥಾಪಕ ನಿರ್ದೇಶಕ ಎಂ.ಕೃಷ್ಣಪ್ಪ ಇತರರು ಇದ್ದರು. ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಕುಲಸಚಿವೆ ರಾಜಶ್ರೀ ಜೈನಾಪುರ ಚುನಾವಣಾಧಿಕಾರಿಯಾಗಿ ಕಾರ್ಯ ನಿರ್ವಹಿಸಿದರು.

## ಚುನಾವಣಾ ಪ್ರಚಾರಕ್ಕೆ ಮಕ್ಕಳ ಬಳಕೆ ನಿಗಷೀಧ; ಜಿಲ್ಲಾ ಚುನಾವಣಾಧಿಕಾರಿ ದಿವ್ಯ ಪ್ರಭು

ಧಾರವಾಡ: ಲೋಕಸಭಾ ಚುನಾವಣೆಯಲ್ಲಿ ಚುನಾವಣಾ ಕಾರ್ಯಗಳಿಗೆ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಗಷೀಧಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಬಾಲ ಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ನಿಗಷೀಧ ಮತ್ತು ನಿಯಂತ್ರಣ ಕಾಯ್ದೆ 1986 ರನ್ವಯ ಯಾವುದೇ ಉದ್ಯೋಗ ಮತ್ತು ಪ್ರಕ್ರಿಯೆಗಳಲ್ಲಿ 14 ವರ್ಷಕಿಂ–ತ ಕಡಿಮೆ ವಯಸ್ಸಿನ ಮಕ್ಕಳನ್ನು ಕೆಲಸಕ್ಕೆ ನಿಯೋಜಿಸಿಕೊಳ್ಳುವುದನ್ನು ಸಂಪೂರ್ಣವಾಗಿ ನಿಗಷೀಧಿಸಲಾಗಿದೆ.



ಲೋಕಸಭಾ ಚುನಾವಣಾ ಪ್ರಚಾರದ ಸಮಯದಲ್ಲಿ ವಿವಿಧ ರಾಜಕೀಯ ಪಕ್ಷಗಳು ಬಹು ವಿವಿಧ ಚಟುವಟಿಕೆಗಳಲ್ಲಿ 18 ವರ್ಷ ಪೂರ್ವದ ಮಕ್ಕಳನ್ನು ತೊಡಗಿಸಿಕೊಳ್ಳುವುದನ್ನು ನಿಗಷೀಧಿಸಲಾಗಿದೆ. ಅಂದರೆ ಮಕ್ಕಳನ್ನು ಯಾವುದೇ ಚುಣಾವಣಾ ಪ್ರಚಾರದಲ್ಲಿ ಬಳಸದಂತೆ ಕರಪತ್ರ ಹಾಗೂ ಪೋಸ್ಟರ್ ಹಂಚಲು ಅಥವಾ ಘೋಷಣೆ ಕೂಗುವುದು, ಚುನಾವಣಾ ಸಭೆ, ಹೋಲ್ಡಿಂಗ್ ಕಟ್ಟುವುದು, ಪ್ರಚಾರ ವಾಹನದ ಮೇಲೆ ಮಕ್ಕಳನ್ನು ಕೂ–ರಿಸುವುದು, ಒಟ್ಟಾರೆಯಾಗಿ ಪ್ರಚಾರ ಸಭೆಗಳಲ್ಲಿ ಮಕ್ಕಳನ್ನು ಬಳಸದಂತೆ ನಿರ್ದೇಶಿಸಲಾಗಿದೆ.

ಲೋಕಸಭಾ ಸಾರ್ವತ್ರಿಕ ಚುನಾವಣೆ 2024ಕ್ಕೆ ಯಾವುದೇ ಪಕ್ಷಗಳು ಚುನಾವಣಾ ಮತ್ತು ಪ್ರಚಾರ ಕಾರ್ಯಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಳ್ಳದಂತೆ ಕ್ರಮವಹಿಸಲು ಹಾಗೂ ಉಲ್ಲಂಘನೆ ಕಂಡು ಬಂದಲ್ಲಿ ಕಾಯ್ದೆಯ ಕಲಂ.ಗಳ ಅನ್ವಯ ಅಗತ್ಯ ಸೂಕ್ತ ಕ್ರಮ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಜೆಪಿಯಿಂದ ಚಾಯ್ ಪೇ ಚರ್ಚಾ ಕಾರ್ಯಕ್ರಮ

ಬೆಳಗಾವಿ: ಲೋಕಸಭಾ ಚುನಾವಣೆ ಅಂಗವಾಗಿ ಬೆಳಗಾವಿಯ ಶಾಹುನಗರ ಹಾಗೂ ವೈಭವ ನಗರದಲ್ಲಿ" ಚಾಯ್ ಪೇ ಚರ್ಚಾ "ಕಾರ್ಯಕ್ರಮದ ಮೂಲಕ ಸಾರ್ವಜನಿಕರನ್ನು ಭೇಟಿ ಮಾಡಿ, ಮಾನ್ಯ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರನ್ನು ಮತ್ತೊಮ್ಮೆ ಪ್ರಧಾನಮಂತ್ರಿಗಳಾಗಿ ಆಯ್ಕೆ ಮಾಡಲು ವಿನಂತಿಸಲಾಯಿತು.

ಚಾಯ್ ಪೇ ಚರ್ಚಾ ಕಾರ್ಯಕ್ರಮದಲ್ಲಿ ಭಾಗವಹಿಸಿದ ಸಾರ್ವಜನಿಕರ ಉತ್ಸಾಹ ಕಂಡು ಸಂತಸವಾಯಿತು. ವಿಕಸಿತ ಬೆಳಗಾವಿಗಾಗಿ ಮತಯಾಚನೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷರಾದ ಶ್ರೀ ಅನಿಲ ಬೆನಕೆ, ಮಹಾನಗರ ಪಾಲಿಕೆ ಸದಸ್ಯರಾದ ಶ್ರೀ ಶ್ರೇಯಸ್ ನಾಕಾಡಿ, ಮಂಡಲ ಅಧ್ಯಕ್ಷ ಶ್ರೀ ವಿಜಯ ಕೊಡಗವರ್, ವಿಶ್ವ ಹಿಂದೂಪರಿಷತ್ ಪ್ರಾಂತ ಉಪಾದ್ಯಕ್ಷರಾದ ಶ್ರೀ ಶ್ರೀಕಾಂತ ಕದಂ, ಮಾಜಿ ಮಹಾಪೌರರಾದ



ಭಾಸ್ಕರ್ ಶೆಟ್ಟಿ, ಮಾಜಿ ಉಪ ಮಹಾಪೌರರಾದ ಶ್ರೀಮತಿ ರೇಷ್ಮಾ ಪಾಟೀಲ್, ಪ್ರಮುಖರಾದ ಡಾ. ಬಸವರಾಜ ಜಗಜಂಪಿ, ಶ್ರೀ ಅಪ್ಪಣ್ಣ ಅಂಗಡಿ, ಶ್ರೀ ಬಿ.ಜಿ. ಸವಣೂರು, ಶ್ರೀ ಅರವಿಂದ ಆಸದವರ್, ಶ್ರೀ ಸದಾನಂದ ಪಾಟೀಲ್, ಶ್ರೀ ವಿಜಯ್ ಜಾಧವ ಹಾಗೂ ಇತರರು ಉಪಸ್ಥಿತರಿದ್ದರು.

# ಡಿಮ್ಹಾನ್ಸ್ ಸಂಸ್ಥೆಯಲ್ಲಿ ವಿಶ್ವ ಬೈ–ಪೋಲಾರ್ ದಿನಾಚರಣೆ

ಧಾರವಾಡ: ಧಾರವಾಡ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನಗಳ ಸಂಸ್ಥೆ (ಡಿಮ್ಹಾನ್ಸ್) ಧಾರವಾಡದ ಓ.ಪಿ.ಡಿ ವಿಭಾಗದಲ್ಲಿ ವಿಶ್ವ ಬೈ ಪೋಲಾರ್ ದಿನಾಚರಣೆಯ ಅಂಗವಾಗಿ ಜಾಗೃತಿ ಕಾರ್ಯಕ್ರಮವನ್ನು ಏಪ್ರಿಲ್ 01, 2024 ರಂದು ಹಮ್ಮಿಕೊಳ್ಳಲಾಗಿತ್ತು. ವಿಶ್ವದಾದ್ಯಂತ ಪ್ರತಿ ವರ್ಷ ಬೈಪೋಲಾರ್ ಮಾನಸಿಕ ಕಾಯಿಲೆಯ ಕುರಿತು ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತದೆ. ಈ ಅಂಗವಾಗಿ ಡಿಮ್ಹಾನ್ಸ್ ಸಂಸ್ಥೆಗೆ ಬರುವಂತಹ ರೋಗಿಗಳಿಗೆ ಮತ್ತು ಅವರ ಆರೈಕೆದಾರರುಗಳಿಗೆ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

ಡಿಮ್ಹಾನ್ಸ್ ಸಂಸ್ಥೆಯ ನಿರ್ದೇಶಕರಾದ ಡಾ. ಅರುಣಕುಮಾರವರು ಈ ಜಾಗೃತಿ ಕಾರ್ಯಕ್ರಮಕ್ಕೆ ಸಸಿಗೆ ನೀರುಣಿಸುವುದರ ಮೂಲಕ ಚಾಲನೆ ನೀಡಿ, ಬೈ ಪೋಲಾರ್ ಮಾನಸಿಕ ಕಾಯಿಲೆಯ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಬೈ ಪೋಲಾರ್ ಒಂದು ಕ್ಲಿಷ್ಟಕರ ಮಾನಸಿಕ ಕಾಯಿಲೆಯಾಗಿದ್ದು, ಈ ಕಾಯಿಲೆಯು ಕೇವಲ ಅವರ ಮನಸ್ಥಿತಿ ಮೇಲೆ ಪರಿಣಾಮ ಬೀರುವುದಲ್ಲದೇ, ಅವರ ಜೀವನದ ಮೇಲೆ, ಕುಟುಂಬದ ಸದಸ್ಯರ ಮೇಲೆ ಹಾಗೂ ಸಮುದಾಯ ಮೇಲೆ ಪ್ರಭಾವ ಬೀರುತ್ತದೆ. ಈ ಕಾಯಿಲೆಯಲ್ಲಿ ಉನ್ಮಾದ ಹಾಗೂ ಖಿನ್ನತೆಯ ಲಕ್ಷಣಗಳು ಕೂಡಿಕೊಂಡಿರುತ್ತವೆ. ಉನ್ಮಾದ ಕಾಯಿಲೆ ಲಕ್ಷಣಗಳೆಂದರೆ ಅತಿಯಾದ ಸಿಟ್ಟು, ಮಾತನಾಡುವುದು, ಚಟುವಟಿಕೆಗಳು ಹಾಗೂ ಆತ್ಮಪ್ರತಿಷ್ಠೆ ಇತರ ಲಕ್ಷಣಗಳು ಇರುತ್ತವೆ.

ಖಿನ್ನತೆಯಲ್ಲಿ ಅತಿಯಾದ ಬೇಸರ, ದು:ಖ, ಕೆಲಸಗಳಲ್ಲಿ ನಿರಾಸಕ್ತಿ, ಸಾಮಾಜಿ–ಕವಾಗಿ ಬೇರೆಯವರೊಂದಿಗೆ ಬೆರೆಯಲು ಆಸಕ್ತಿ ಇರದೇ ಇರುವುದು ಮತ್ತು ಆತ್ಮಹತ್ಯೆ ಯೋಚನೆಗಳು ಇತ್ಯಾದಿ ಲಕ್ಷಣಗಳು ಇರುತ್ತವೆಂದು ತಿಳಿಸಿದರು.

ಇದರ ಜೊತೆಗೆ ಬೈ ಪೋಲಾರ್ ಕಾಯಿಲೆಯ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ತಿಳಿದುಕೊಂಡು, ಇವುಗಳನ್ನು ಹೋಗಲಾಡಿಸಲು ಪ್ರಯತ್ನಿಸಬೇಕೆಂದರು. ಈ ಕಾಯಿಲೆಯು ವ್ಯಕ್ತಿಯ ದೌರ್ಬಲ್ಯತೆ ಅಥವಾ ವ್ಯಕ್ತಿತ್ವದ ನ್ಯೂನ್ಯತೆಯೆಂದು ತಿಳಿಯಬಾರದು. ಇಂತಹ ಕಾಯಿಲೆಯಿಂದ ಬಳಲುತ್ತಿರುವವರಿಗೆ ಮನೋವೈದ್ಯರನ್ನು ಸಂಪರ್ಕಿಸಿ ಸರಿಯಾದ ಚಿಕಿತ್ಸೆ ಮತ್ತು ಔಷಧೋಪಚಾರವನ್ನು ಕೊಡಿಸುವುದರಿಂದ ಗುಣಮುಖರಾಗಿ ಸಮಾಜದಲ್ಲಿ ಎಲ್ಲರೊಂದಿಗೆ ಬೆರೆತು ಜೀವನ ಮಾಡಲು ನೆರವಾಗುತ್ತದೆಂದರು.



ಡಿಮ್ಹಾನ್ಸ್ ಸಂಸ್ಥೆಯಿಂದ ಇಂತಹ ರೋಗದಿಂದ ಬಳಲುತ್ತಿರುವವ–ರಿಗೆ ಉತ್ತಮವಾದ ಚಿಕಿತ್ಸೆ, ವೈದ್ಯಕೀಯ ಸೇವೆ, ಉತ್ತಮವಾದ ಮಾನಸಿಕ ಆರೋಗ್ಯ ಸೇವೆಗಳು, ಗುಣಮಟ್ಟದ ಚಿಕಿತ್ಸೆ ಹಾಗೂ ಸಹಕಾರವನ್ನು ದೊರಕಿಸಿಕೊಡಲು ಪ್ರಾಮಾಣಿಕ ಪ್ರಯತ್ನವನ್ನು ಮಾಡಲಾಗುತ್ತಿದೆ ಹಾಗೂ ಇಂತಹ ರೋಗಿಗಳ ಹಕ್ಕುಗಳ ಬದ್ಧತೆಯನ್ನು ಕಾಪಾಡಲು ಎಲ್ಲಾ ರೀತಿಯ ಪ್ರಯತ್ನ ಮಾಡಲಾಗುತ್ತಿದೆಯೆಂದರು.

ಬೈ ಪೋಲಾರ್ ಕಾಯಿಲೆ ಕು–ರಿತು ಜಾಗೃತಿಯನ್ನು ಮೂಡಿಸಲು ನಾವು ನಮ್ಮ ಬದ್ಧತೆಯನ್ನು ಪುನರುಚ್ಚರಿಸೋಣ, ತಿಳುವಳಿಕೆಯನ್ನು ಬೆಳೆಸುವುದು ಹಾಗೂ ಬೈ ಪೋಲಾರ್ ಕಾಯಿಲೆ ಹೊಂದಿರುವ ವ್ಯಕ್ತಿಗಳಿಗೆ ಬೆಂಬಲವನ್ನು ಒದಗಿಸೋಣ.

ಮಾನಸಿಕ ಆರೋಗ್ಯಕ್ಕೆ ಮಹತ್ವವನ್ನು ನೀಡುವ ವಿಶ್ವದಲ್ಲಿ ನಾವು ಒಟ್ಟಾಗಿ ಕೆಲಸಮಾಡೋಣ ಹಾಗೂ ಬೈ ಪೋಲಾರ್ ಕಾಯಿಲೆ ಇರುವವರು ತಾರತಮ್ಯ ರಹಿತ ಹಾಗೂ ಕಳಂಕ ಮುಕ್ತ ಜೀವನ ಕಡೆ ಇರುವಂತೆ ಮಾಡಲು ಕಾರ್ಯನಿರ್ವಹಿಸೋಣ ಎಂದು ಹೇಳಿದರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಡಿಮ್ಹಾನ್ಸ್ ಸಂಸ್ಥೆಯ ವೈದ್ಯಕೀಯ ಅಧೀಕ್ಷಕರು ಹಾಗೂ ಸೈಕಿಯಾಟ್ರಿ ವಿಭಾಗದ ಮುಖ್ಯಸ್ಥರು ಡಾ.ರಾಘವೇಂದ್ರ ನಾಯಕ್ ರವರು ಮಾತನಾಡಿ ಬೈ ಪೋಲಾರ್ ಮಾನಸಿಕ ಕಾಯಿಲೆಯ ಗುಣಲಕ್ಷಣಗಳು ಹಾಗೂ ಲಭ್ಯವಿರುವ ವೈಜ್ಞಾನಿಕ ಚಿಕಿತ್ಸಾ ಪದ್ಧತಿಗಳ ಕುರಿತು ವಿವರಿಸಿದರು.

ಈ ಕಾಯಿಲೆಯು ಬರಲು ಇರುವ ಮುಖ್ಯ ಕಾರಣಗಳ ಬಗ್ಗೆ ತಿಳಿಸಿದರು. ಜನಸಾಮಾನ್ಯರಲ್ಲಿ ಮಾನಸಿಕ ಕಾಯಿಲೆಯ ಬಗ್ಗೆ ಇರುವ ತಪ್ಪು ಕಲ್ಪನೆಗಳನ್ನು ಹೋಗಲಾಡಿಸಲು ಇಂತಹ ಕಾರ್ಯಕ್ರಮಗಳು ಸಹಕಾರಿಯಾಗಲಿದೆಯೆಂದು ಅಭಿಪ್ರಾಯ ಪಟ್ಟರು.

ಮನೋವೈದ್ಯಕೀಯ ಸಮಾಜಕಾರ್ಯ ವಿಭಾಗದ ಮುಖ್ಯಸ್ಥರಾದ ಡಾ.ಸತೀಶ್ ಕೌಜಲಗಿ ರವರು ಮಾನಸಿಕ ಕಾಯಿಲೆಗಳ ಲಕ್ಷಣಗಳು, ಆರೈಕೆದಾರರಿಗೆ ಇರಬೇಕಾದ ಜವಾಬ್ದಾರಿಗಳು, ಚಿಕಿತ್ಸಾ ಸೌಲಭ್ಯಗಳ ಬಗ್ಗೆ ವಿವರಿಸಿದರು.

ಬೈ ಪೋಲಾರ್ ಕಾಯಿಲೆಯಿಂದ ಬಳಲುತ್ತಿರುವ ವ್ಯಕ್ತಿಯೊಬ್ಬರು ತಾವು ಚಿಕಿತ್ಸೆ ಪಡೆದುಕೊಂಡು ಗುಣಮುಖರಾಗಿರುವುದರ ಬಗ್ಗೆ ತಮ್ಮ ಅನುಭವಗಳನ್ನು ಹಂಚಿಕೊಂಡರು. ಈ ಕಾರ್ಯಕ್ರಮದಲ್ಲಿ ಸೈಕಿಯಾಟ್ರಿ ವಿಭಾಗದ ಸಹಪ್ರಾಧ್ಯಾಪಕರಾದ ಡಾ. ಶ್ರೀನಿವಾಸ ಕೊಸಗಿ, ಡಾ. ಮಂಜುನಾಥ ಭಜಂತ್ರಿ ರವರು ಅತಿಥಿಗಳಾಗಿ ಭಾಗವಹಿಸಿದ್ದರು.

ಕಾರ್ಯಕ್ರಮದ ನಿರೂಪಣೆಯನ್ನು ಎಂ.ಫಿಲ್ ವಿದ್ಯಾರ್ಥಿನಿ ಅಕ್ಷತಾ ತೋಟಗೇರ್ ರವರು ನಿರೂಪಿಸಿದರು. ಕಾವೇರಿ ಕಿತ್ತೂರು ರವರು ಪ್ರಾರ್ಥಸಿದರು. ವಿನೋದಾ ಹಿರೆಮಠ ರವರು ಸ್ವಾಗತಿಸಿದರು. ರಾಕೇಶ್ ರವರು ವಂದಿಸಿದರು.

ಕಾರ್ಯಕ್ರಮದಲ್ಲಿ ಮನೋವೈದ್ಯಕೀಯ ಸಮಾಜಕಾರ್ಯ ವಿಭಾಗದ ಸಿಬ್ಬಂದಿಗಳಾದ ಅಶೋಕ ಕೋರಿ, ಓಬಾ ನಾಯ್ಕ, ಪ್ರಶಾಂತ ಪಾಟೀಲ್, ಆರ್.ಎಮ್.ತಿಮ್ಮಾಪೂರ್, ಶ್ರೀದೇವಿ ಬಿರಾದಾರ, ಅನಂತರಾಮು ಬಿ.ಜಿ ಹಾಗೂ ಸೈಕಿಯಾಟ್ರಿಕ್ ನಸಿಂಗ್ ವಿಭಾಗದ ಮುಖ್ಯಸ್ಥರಾದ ಡಾ. ಆರ್.ಶ್ರೀವಾಣಿ ಹಾಗೂ ಉಪನ್ಯಾಸಕರಾದ ಡಾ. ಸುಶೀಲ್ಕುಮಾರ್ ರೋಣದ, ಫಿಜಿಯೋಥೇರಪಿಸ್ಟ್ ಡಾ. ಇಸ್ಮೈಲ್ ರವರು, ಎಂ.ಫಿಲ್ ಇನ್ ಸೈಕಿಂ–ಯಾಟ್ರಿಕ್ ಸೋಷಿಯಲ್ ವರ್ಕ ವಿಭಾಗದ ವಿದ್ಯಾರ್ಥಿಗಳಾದ ಲಕ್ಷ್ಮೀ ಮಲ್ಲಿಕ್, ಮೋನಿಶಾ, ರಂಜನಿ, ಸಚಿನ್ ಪ್ರಸಾದ್, ಯತೀಶ್ ಭಾರದ್ವಾಜ್ ಸೇರಿದಂತೆ ಕ್ಲಿನಿಕಲ್ ಸೈಕಾಲಜಿ ಸಿಬ್ಬಂದಿಗಳು, ವಿದ್ಯಾರ್ಥಿಗಳು, ನರ್ಸಿಂಗ್ ವಿಭಾಗದ ಪ್ರಶಿಕ್ಷಣಾರ್ಥಿಗಳು ಮತ್ತು ರೋಗಿಗಳು ಹಾಗೂ ಅವರ ಆರೈಕೆದಾರರು ಭಾಗವಹಿಸಿದ್ದರು.

## ಚುನಾವಣಾ ಸೆಕ್ಟರ್ ಆಫೀಸರ್ ತರಬೇತಿ



ಧಾರವಾಡ: ಚುನಾವಣಾ ಕಾರ್ಯಗಳು ನಿಯಮಾನುಸಾರ ನಡೆಯುವಲ್ಲಿ ಸೆಕ್ಟರ್ ಅಧಿಕಾರಿಗಳ ಪಾತ್ರ ಬಹು ಮುಖ್ಯವಾಗಿದೆ. ಅವರು ಚುನಾವಣಾಧಿಕಾರಿಗೂ (ಆರ್.ಓ) ಮತ್ತು ಮತಗಟ್ಟೆಯಲ್ಲಿನ ಪಿ.ಆರ್.ಓ ಅಧಿಕಾರಿಗೂ ಸಂಪರ್ಕ ಸೇತುವೆಯಾಗಿ ಕಾರ್ಯ ನಿರ್ವಹಿಸುತ್ತಾರೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಸೋಮವಾರ ಜಿಲ್ಲಾ ಚುನಾವಣಾ ಅಧಿಕಾರಿಗಳ ಕಾರ್ಯಾಲಯದಿಂದ ಆಯೋಜಿಸಿದ್ದ ಧಾರವಾಡ ಲೋಕಸಭಾ ಚುನಾವಣೆ- 2024ರ ಸೆಕ್ಟರ್ ಅಧಿಕಾರಿಗಳಿಗೆ, ತಾಲೂಕ ಮಟ್ಟದ ಚುನಾವಣಾ ಸಂಪನ್ಮೂಲ ವ್ಯಕ್ತಿಗಳಿಗೆ ಮತ್ತು ತರಬೇತಿ ನೀಡುವ ಸಂಪನ್ಮೂಲ ವ್ಯಕ್ತಿಗಳ ತರಬೇತಿ ಕಾರ್ಯಗಾರದ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಚುನಾವಣೆಯಲ್ಲಿ ನಮ್ಮ ನಮ್ಮ ಕಾರ್ಯಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವ ಮೂಲಕ ಚುನಾವಣೆಯನ್ನು ಯಶಸ್ವಿಗೊಳಿಸಬೇಕು. ಇದು ಎಲ್ಲರೂ ಸೇರಿ ಒಟ್ಟಾಗಿ ಕೆಲಸ ಮಾಡುವ ಸಂದರ್ಭವಾಗಿದೆ. ತರಬೇತಿಯಲ್ಲಿ ನೀಡುವ ಮಾಹಿತಿಯನ್ನು ಸರಿಯಾಗಿ ತಿಳಿದು, ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕು ಎಂದು ಅವರು ಹೇಳಿದರು.

ಜಿಲ್ಲೆಯಲ್ಲಿ 1660 ಮತಗಟ್ಟೆಗಳಿದ್ದು, ಪ್ರತಿ ಮತಗಟ್ಟೆಯ ಪಿ.ಆರ್.ಓ ಮತ್ತು ಎಪಿ.ಆರ್.ಓ.ಗಳು ಮತಗಟ್ಟೆಯಲ್ಲಿ ತಾವು ನಿರ್ವಹಿಸಬೇಕಾದ ಪ್ರತಿ ಕರ್ತವ್ಯದ ಬಗ್ಗೆ ಮನದಟ್ಟು ಹೊಂದಬೇಕು. ಅವರಿಗೆ ಅಗತ್ಯವಿರುವ ಮಾಹಿತಿ, ತರಬೇತಿಯನ್ನು ಸೆಕ್ಟರ್ ಅಧಿಕಾರಿಗಳು, ಸಂಪನ್ಮೂಲ ವ್ಯಕ್ತಿಗಳು ಮಾಡಬೇಕೆಂದು ಅವರು ಹೇಳಿದರು.

ಭಾರತ ಚುನಾವಣಾ ಆಯೋಗ ನೀಡಿರುವ ನೀರ್ದೇಶಗಳನ್ನು ಚುನಾವಣಾ ಕರ್ತವ್ಯದಲ್ಲಿ ತೊಡಗಿಸಿಕೊಂಡಿರುವ ಪ್ರತಿ ಅಧಿಕಾರಿ ಮತ್ತು ಸಿಬ್ಬಂದಿ ತಮ್ಮ ಕರ್ತವ್ಯದಲ್ಲಿ ಅಳವಡಿಸಿಕೊಂಡು ಪಾಲಿಸಬೇಕು. ತಮ್ಮ ಕರ್ತವ್ಯ ನಿರ್ವಹಣೆ ಸಂದರ್ಭದಲ್ಲಿ ಯಾವುದೇ ರೀತಿಯ ಗೊಂದಲ ಅಥವಾ ತೊಂದರೆ ಉಂಟಾದರೆ ತಕ್ಷಣ ತಮ್ಮ ಮೇಲಾಧಿಕಾರಿಗಳನ್ನು ಸಂಪರ್ಕಿಸಿ, ಅವುಗಳನ್ನು ಪರಿಹರಿಸಿಕೊಳ್ಳುವಂತೆ ತಿಳಿಸಬೇಕು ಎಂದು ಅವರು ಹೇಳಿದರು.

## ಮೇ.20 ರಿಂದ 25ರವರೆಗೆ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮ

ಬೆಳಗಾವಿ: ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರ ಧಾರವಾಡ, ಜಿಲ್ಲಾ ಕೈಗಾರಿಕಾ ಕೇಂದ್ರ, ಬೆಳಗಾವಿ ಹಾಗೂ ಕೆ.ಎಲ್.ಎಸ್. ಇನಸ್ಟಿಟ್ಯೂಟ್ ಆಫ್ ಮ್ಯಾನೆಜಮೆಂಟ್ ಎಜುಕೇಶನ್ & ರಿಸರ್ಚ್, ಬೆಳಗಾವಿ ಕೆ.ಎಲ್.ಎಸ್. ಇನಸ್ಟಿಟ್ಯೂಟ್ ಆಫ್ ಮ್ಯಾನೆಜಮೆಂಟ್ ಎಜುಕೇಶನ್ & ರಿಸರ್ಚ್ (IMER) ಅವರ ಸಯುಕ್ತ ಆಶ್ರಯದಲ್ಲಿ ಬೆಳಗಾವಿಯ ಹಿಂದವಾಡಿನಲ್ಲಿ ಮೇ.20 ರಿಂದ ಮೇ.25ರವರೆಗೆ ರಫ್ತು ನಿರ್ವಹಣಾ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

6 ದಿನಗಳ ಈ ತರಬೇತಿ ಕಾರ್ಯಕ್ರಮವು ಅಂತರಾಷ್ಟ್ರೀಯ ವ್ಯವಹಾರದ ಮಾಹಿತಿಯನ್ನು ನೀಡುವ ಉದ್ದೇಶವನ್ನು ಹೊಂದಿರುತ್ತದೆ. ರಫ್ತು ಅಂದರೇನು? ಏಕೆ? ಎಲ್ಲಿಗೆ? ಹಾಗೂ ಹೇಗೆ ಮಾಡಬೇಕೆಂಬುದರ ಬಗ್ಗೆ, ರಫ್ತಿಗೆ ಸಂಬಂಧಿಸಿದಂತೆ ನಿಯಮಾವಳಿಗಳು, ಅಂತರಾಷ್ಟ್ರೀಯ ರಫ್ತು ವ್ಯಾಪಾರ, ರಫ್ತು ಮಾರುಕಟ್ಟೆ, ರಫ್ತಿಗೆ ಸಂಬಂಧಿತ ಕೇಂದ್ರ ಸರ್ಕಾರದ ಸಂಸ್ಥೆಗಳಾದ ಡಿ.ಜಿ.ಎಫ್.ಟಿ., ಕಸ್ಟಮ್ಸ್, ಆರ್.ಬಿ.ಐ. ಹಾಗೂ ರಫ್ತು ಉತ್ತೇಜನ ಕೌನ್ಸಿಲ್‌ಗಳಾದ ಅಪೇಡಾ, ಫಿಯೋ ಇತ್ಯಾದಿ, ರಫ್ತು ಪ್ಯಾಕೇ-ಜಿಂಗ್, ಹಣಕಾಸು, ವಿದೇಶಿ ವಿನಿಮಯ, ಇ.ಸಿ.ಜಿ.ಸಿ., ಇ-ವಾಣಿಜ್ಯ ವೇದಿಕೆ ಹಾಗೂ ಜಿ.ಎಸ್.ಟಿ. ನಿಯಮಗಳ ಕು-ರಿತಾಗಿಯೂ ವಿಷಯ ಮಂಡನೆ ಮಾಡಲಾಗುವುದು ಹಾಗೂ ಉತ್ತರ ಕರ್ನಾಟಕದ ರಫ್ತು ಸಾಧ್ಯತಾ ಉತ್ಪನ್ನಗಳ ಕುರಿತು ಮಾಹಿತಿಯನ್ನು ಹಾಗೂ ಆಯಾ ಕ್ಷೇತ್ರಗಳಲ್ಲಿ ಸಾಕಷ್ಟು ಅನುಭವ ಹೊಂದಿರುವ / ಸೇವೆ ಸಲ್ಲಿಸುತ್ತಿರುವ ಪರಿಣಿತಿದಾರರು ಅತಿಥಿ ಉಪನ್ಯಾಸಕರಾಗಿ ಪಾಲ್ಗೊಂಡು ಮಾಹಿತಿ ನೀಡಲಿದ್ದಾರೆ.

ರಫ್ತು ವ್ಯವಹಾರ ಪ್ರಾರಂಭಿಸಲಿಚ್ಛಿಸುವವರು, ಹಾಲಿ ರಫ್ತುದಾರರು, ವ್ಯಾಪಾರ ಹಾಗೂ ಉತ್ಪಾದನಾ ಚಟುವಟಿಕೆಗಳಲ್ಲಿ ನಿರತರಾದವರು.

ರಫ್ತು ಚಟುವಟಿಕೆಯಲ್ಲಿ ಪಾಲ್ಗೊಳ್ಳಲಿಚ್ಛಿಸುವ ಉದ್ದಿಮೆದಾರರು ಹಾಗೂ ರಫ್ತು ವ್ಯವಹಾರ ಕುರಿತು ಬೋಧನೆಯಲ್ಲಿ ನಿರತವಾಗಿರುವ ಶೈಕ್ಷಣಿಕ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ರಫ್ತು ವ್ಯವಹಾರದಲ್ಲಿ ಆಸಕ್ತಿ ಹೊಂದಿದ ವಿದ್ಯಾರ್ಥಿಗಳಿಗೆ ಈ ತರಬೇತಿ ಕಾರ್ಯಕ್ರಮವು ಅತ್ಯಂತ ಉಪಯೋಗಕಾರಿಯಾಗಿದೆ. ಈ ತರಬೇತಿಯು ವಸತಿ ರಹಿತವಾಗಿದ್ದು, ಆಸಕ್ತಿಯುಳ್ಳವರು ಶಿಬಿರಾರ್ಥಿಗಳಾಗಿ ಪಾಲ್ಗೊಳ್ಳಬಹುದಾಗಿದೆ.

ಆಸಕ್ತರು ಮೇ.20 ಒಳಗಾಗಿ ತರಬೇತಿ ಶುಲ್ಕ ರೂ.3.540 ಭರ್ತಿ ಮಾಡಿ, ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಜಾಲತಾಣ: www.vtpc.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರು, ವಿಶ್ವೇಶ್ವರಯ್ಯಾ ವ್ಯಾಪಾರ ಉತ್ತೇಜನ ಕೇಂದ್ರ, 1ನೇ ಮಹಡಿ, ಡಿ.ಐ.ಸಿ ಕಟ್ಟಡ, ರಾಯಾಪುರ, ಧಾರವಾಡ, ಮೋಬೈಲ್ ಸಂಖ್ಯೆ: 8073707446 (ಟಿ.ಎಸ್. ಮಲ್ಲಿಕಾರ್ಜುನ) 9742709229 (ವಿಶ್ವನಾಥ ಸೂಸಿಮಠ), ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರ, ಉದ್ಯಮ ಭಾಗ, ಬೆಳಗಾವಿ ಹಾಗೂ ಉತ್ತರ ಕರ್ನಾಟಕದ ಜಿಲ್ಲೆಗಳ ಅಭ್ಯರ್ಥಿಗಳು ಆಯಾ ಜಿಲ್ಲೆಯ ಜಿಲ್ಲಾ ಕೈಗಾರಿಕಾ ಕೇಂದ್ರ ಕಛೇರಿಗಳನ್ನು ಸಂಪರ್ಕಿಸಬಹುದು ಎಂದು ಧಾರವಾಡ ವಿಶ್ವೇಶ್ವರಯ್ಯ ವ್ಯಾಪಾರ ಉತ್ತೇಜನ ಕೇಂದ್ರದ ಸಹಾಯಕ ನಿರ್ದೇಶಕರು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಏ.2 ರಂದು ಮತದಾನ ಜಾಗೃತಿ ಮ್ಯಾರಥಾನ್

ಬೆಳಗಾವಿ: ಸಾರ್ವತ್ರಿಕ ಲೋಕಸಭಾ ಚುನಾವಣೆ 2024ರ ಅಂಗವಾಗಿ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ, ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ವತಿಯಿಂದ ಮತದಾನರಿಗೆ ಮತದಾನ ಜಾಗೃತಿ ಮೂಡಿಸುವ ಉದ್ದೇಶದಿಂದ ಏ.2 ರಂದು ಬೆಳಗ್ಗೆ 6.30 ಗಂಟೆಗೆ ಮ್ಯಾರಥಾನ ಜಾಗೃತಿ ಜಾಥಾ ಹಮ್ಮಿಕೊಳ್ಳಲಾಗಿದೆ.

ಜಾಗೃತಿ ಜಾಥಾ ಮ್ಯಾರಥಾನ ಬಿಮ್ಸ್ ಕಾಲೇಜು ಮುಖ್ಯಧ್ವಾರದಿಂದ ಚನ್ನಮ್ಮ ವೃತ್ತ ಮಾರ್ಗವಾಗಿ, ಮಹಾವೀರ ಕ್ಯಾಂಟೀನ್, ಸಿಪಿಇಡಿ ಮೈದಾನ, ಗಾಲ್ಫ್ ಕೋರ್ಸ್ ರಸ್ತೆ, ಜಿಲ್ಲಾಧಿಕಾರಿಗಳ ವಸತಿಗೃಹ, ಕೆಜಿಐಡಿ ಕಚೇರಿ, ಸದಾಶಿವ ನಗರ, ಬಿನಾಯ ಫೋಟೋ ಸ್ಟುಡಿಯೋ, ತಮ್ಮಣ್ಣಾ ಆರ್ಕೆಡ್, ಬಿಮ್ಸ್ ಕಾಲೇಜು ಮುಖ್ಯಧ್ವಾರದವರೆಗೆ ನಡೆಯಲಿದೆ ಎಂದು ಜಿಲ್ಲಾ ಪಂಚಾಯತ ಸ್ವೀಪ್ ನೊಡಲ್ ಅಧಿಕಾರಿಗಳು ಹಾಗೂ ಯೋಜನಾ ನಿದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾಂಗ್ರೆಸ್ ಪಂಚ್ ಗ್ಯಾರಂಟಿಗಳನ್ನು ಜನರಿಗೆ ತಿಳಿಸಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

### ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹುದಲಿ ಜಿಲ್ಲಾ ಪಂ ವ್ಯಾಪ್ತಿಯ ಪಣಗುತ್ತಿ ಗ್ರಾಮದಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆ



ಬೆಳಗಾವಿ: ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾದ ನನಗೆ ನೀವೆಲ್ಲರೂ ಆಶೀರ್ವಾದ ಮಾಡಬೇಕು. ಸಚಿವರಾದ ನಮ್ಮ ತಂದೆ ಶ್ರೀ ಸತೀಶ ಜಾರಕಿಹೊಳಿ ಅವರನ್ನು ಹಾಗೂ ಜನಪ್ರತಿನಿಧಿಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವ ಮೂಲಕ ಚಿಕ್ಕೋಡಿ ಲೋಕಸಭೆಯ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುವುದು ಎಂದು ಚಿಕ್ಕೋಡಿ ಲೋಕಸಭಾ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಹೇಳಿದರು.

ಯಮಕನಮರಡಿ ವಿಧಾನಸಭಾ ಕ್ಷೇತ್ರದ ಹುದಲಿ ಜಿಲ್ಲಾ ಪಂ ವ್ಯಾಪ್ತಿಯ ಪಣಗುತ್ತಿ ಗ್ರಾಮದಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಬೇರುಮಟ್ಟದಿಂದ ಕೈ ಪಕ್ಷವನ್ನು ಬಲಪಡಿಸಿ. ರಾಜ್ಯ ಮತ್ತು ರಾಷ್ಟ್ರದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದ ಚುಕ್ಕಾಣಿ ಹಿಡಿಯುವಂತೆ ಮಾಡಲು ಕಾರ್ಯಕರ್ತರು ಸಿದ್ಧರಾಗಬೇಕು. ಕಾಂಗ್ರೆಸ್ ಪಕ್ಷದ ಪಂಚ್ ಗ್ಯಾರಂಟಿಗಳನ್ನು ಜನರಿಗೆ ಮನವರಿಕೆ ಮಾಡಿಕೊಟ್ಟು ಮತದಾರರ ಮನಸ್ಸು ಗೆಲ್ಲಲು ಮುಂದಾಗಬೇಕು ಎಂದರು.

ಕಾಂಗ್ರೆಸ್ ಸರ್ಕಾರ ಬಡವರ ಪರವಾಗಿದ್ದು, ರೈತರ ಬಗ್ಗೆ ಅಪಾರ ಕಾಳಜಿ ಹೊಂದಿದೆ. ಅಧಿಕಾರಕ್ಕೆ ಬಂದ 9 ತಿಂಗಳಲ್ಲೇ ಘೋಷಿಸಿದ್ದ ಎಲ್ಲಾ ಐದು ಗ್ಯಾರಂಟಿಗಳನ್ನು ಜಾರಿಗೆ ತಂದಿದೆ, ಇದು ನಮ್ಮ ಸರ್ಕಾರದ ಹೆಗ್ಗಳಿಕೆಯಾಗಿದೆ. ಕಾಂಗ್ರೆಸ್ ಯಾವಾಗಲೂ ಎಲ್ಲಾ ಸಮುದಾಯಗಳನ್ನು ಒಟ್ಟಿಗೆ ತೆಗೆದುಕೊಂಡು ವಿವಿಧ ಸಮುದಾಯ ಗಳು ಮತ್ತು ಧಾರ್ಮಿಕ ಗುಂಪುಗಳಿಗೆ ಸಮಾನ ಅವಕಾಶವನ್ನು ಖಚಿತ ಪಡಿಸಿಕೊಳ್ಳಲು ಶ್ರಮಿಸುತ್ತಿದೆ.

ಇದು ನಿರಂತರವಾಗಿ ಸಮಾಜವನ್ನು ಧಾರ್ಮಿಕ ಮತ್ತು ಜಾತಿಯ ಆದ- ,ಾರದ ಮೇಲೆ ವಿಭಜಿ ಸುವ ಬಿಜೆಪಿಗೆ ವ್ಯತಿರಿಕ್ತ ವಾಗಿದೆ. ಈ ಭಾರಿ ಚಿಕ್ಕೋಡಿ ಅಭಿವೃದ್ಧಿಗೆ ಕಾಂಗ್ರೆಸ್ ಕಾರ್ಯಕರ್ತರು ಕೈ ಅಭ್ಯರ್ಥಿಯಾದ ನನಗೆ ಮತ ನೀಡುವಂತೆ ಮತದಾರರಲ್ಲಿ ಕಾಂಗ್ರೆಸ್ ಸಾಧನೆಯನ್ನು ತಿಳಿಹೇಳಲು ಮುಂದಾಗಬೇಕು ಎಂದರು.

ಈ ವೇಳೆಸಚಿವರ ಆಪ್ತ ಸಹಾಯಕರಾದ ಅರವಿಂದ ಕಾರ್ಚಿ ಮಾತನಾಡಿ, ಸ್ವಾತಂತ್ರ್ಯ ಹೋರಾಟದಲ್ಲಿ ಕಾಂಗ್ರೆಸ್ ಮುಖಂಡರ ಕೊಡುಗೆ ಅಪಾರ. ಸಾಮಾಜಿಕ ನ್ಯಾಯ ಕೊಡುವಲ್ಲಿ ಕಾಂಗ್ರೆಸ್ ಪಕ್ಷ ದ ಪಾತ್ರ ಮುಖ್ಯ ಪಾತ್ರ ವಹಿಸಿದೆ. ಇಂದಿನ ನಿರುದ್ಯೋ?ಗ ಹೆಚ್ಚಳಕ್ಕೆ ಬಿಜೆಪಿಯೇ ಕಾರಣ. ಅಚ್ಚೆ ದಿನ್ ಬರುತ್ತವೆ ಎಂದು ಹೇಳಿರುವ ಬಿಜೆಪಿ, 9 ವರ್ಷ ಗತಿಸಿದರೂ ಯಾವುದೇ ಅಚ್ಚೆ ದ್ದಿನ್ ತರಲಿಲ್ಲ. ಕಾಂಗ್ರೆಸ್ ಕಾರ್ಯಕರ್ತರು ಅಭಿವೃದ್ಧಿ ಹಾಗೂ ಪಕ್ಷ ದ ತತ್ವ ಸಿದ್ಧಾಂತಗಳನ್ನು ಜನರಿಗೆ ಮುಟ್ಟಿಸುವ ಮೂಲಕ ಬೂತ ಮಟ್ಟದಿಂದ ಪಕ್ಷ ಸಂಗಟಿಸಲು ಕಾರ್ಯಕರ್ತರು ಸಿದ್ದರಾಗಬೇಕು ಎಂದು ಕಾರ್ಯಕರ್ತರಿಗೆ ಸಲಹೆ ನೀಡಿದರು.

ಉತ್ತರ ಕರ್ನಾಟಕದ ಅಭಿವೃದ್ಧಿ ಹ-ರಿಕಾರ ಎನಿಸಿಕೊಂಡಿಡಿರುವ ಸಚಿವ ಸತೀಶ್ ಜಾರಕಿಹೊಳಿ ಅವರ ಪತ್ರಿ ಪ್ರಿಯಂಕಾ ಜಾರಕಿಹೊಳಿ ಚಿಕ್ಕೋಡಿ ಲೋಕಸಭಾ ಕೈ ಅಭ್ಯರ್ಥಿಯಾಗಿ ಚುನಾವಣಾ ಕಣಕ್ಕೆ ಇಳಿದಿದ್ದಾರೆ. ಅದ್ದರಿಂದ ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಯೋಜನೆಗಳ ಫಲಾನುಭವಿಗಳಿಗೆ ಸರ್ಕಾರ ಜಾ-ರಿಗೆ ತಂದಿರುವ ಯೋಜನೆಗಳ ಅರಿವು ಮೂಡಿಸುವ ಮಹತ್ತರ ಕಾರ್ಯ ಮಾಡಿ. ಈ ಭಾರಿ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಅತಿ ಹೆಚ್ಚು ಮತಗಳಿಂದ ಗೆಲುವು ಸಾಧಿಸಲು ಪ್ರತಿಯೊಬ್ಬರು ಶ್ರಮಿಸಬೇಕು ಎಂದು ಕರೆ ನೀಡದರು. ಈ ಸಂದರ್ಭದಲ್ಲಿ ಶಹಾಬಂದರ ಹಾಗೂ ಇಸ್ಲಾಂಪೂರ ಗ್ರಾಮದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

## ಸಮರ್ಥವಾಗಿ ಜಿಲ್ಲೆಯನ್ನು ಪ್ರತಿನಿಧಿಸುವ ಸಾಮರ್ಥ್ಯ ಮೃಣಾಲ್ ಹೆಬ್ಬಾಳಕರ್ ಗೆ ಇದೆ: ಚನ್ನರಾಜ ಹಟ್ಟಿಹೊಳಿ



ಬೆಳಗಾವಿ: ಮೇ 7ರಂದು ನಡೆಯಲಿರುವ ಬೆಳಗಾವಿ ಲೋಕಸಭಾ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಸವದತ್ತಿ ವಿಧಾನಸಭಾ ಕ್ಷೇತ್ರದ ವಿವಿಧೆಡೆ ಪ್ರಚಾರ ಸೋಮವಾರ ಪ್ರಚಾರ ಸಭೆಗಳನ್ನು ಹಮ್ಮಿಕೊಳ್ಳಲಾಗಿದ್ದು, ಕ್ಷೇತ್ರಾದ್ಯಂತ ಅಭೂತಪೂರ್ವ ಜನಬೆಂಬಲ ವ್ಯಕ್ತವಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹೇಳಿದರು.

ಗೊರಾಬಾಳ ಮತ್ತು ಬಸಿಡೋಣಿ ಯಲ್ಲಿ ಹಮ್ಮಿಕೊಳ್ಳಲಾಗಿದ್ದ ಸಭೆಯಲ್ಲಿ ಮಾತನಾಡಿದ ಅವರು, ನಿರೀಕ್ಷೆಗೂ ಮೀರಿ ಜನರು ಬೆಂಬಲ ಸೂಚಿಸುತ್ತಿದ್ದಾರೆ. ಮೃಣಾಲ ಹೆಬ್ಬಾಳಕರ್ ಅತ್ಯಂತ ಪ್ರಚಂಡ ಬಹುಮತದಿಂದ ಆಯ್ಕೆ ಯಾಗುವುದರಲ್ಲಿ ಸಂದೇಹವಿಲ್ಲ ಎಂದರು.

ಕಾಂಗ್ರೆಸ್ ಪಕ್ಷದ ಗ್ಯಾರಂಟಿ ಯೋಜನೆಗಳು ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಜನರು ಮೆಚ್ಚಿಕೊಂಡಿದ್ದಾರೆ. ಜೊತೆಗೆ ಜನರ ಬದುಕನ್ನು ಕಟ್ಟಿಕೊಡುವ ಕೆಲಸವನ್ನು ಕಾಂಗ್ರೆಸ್ ಸರಕಾರ ಮಾಡುತ್ತಿದೆ. ಮೃಣಾಲ ಹೆಬ್ಬಾಳಕರ್ ಯುವಕನಿದ್ದು, ಕ್ಷೇತ್ರದ ಅಭಿವೃದ್ಧಿಗೆ ಹಲವು ಕನಸನ್ನು ಕಟ್ಟಿಕೊಂಡಿದ್ದಾನೆ. ಅತ್ಯಂತ ಸಮರ್ಥವಾಗಿ ಜಿಲ್ಲೆಯನ್ನು ಪ್ರತಿನಿಧಿಸುವ ಸಾಮರ್ಥ್ಯ ಹೊಂದಿದ್ದಾನೆ. ಹಾಗಾಗಿ ಎಲ್ಲರೂ ಮೃಣಾಲ ಹೆಬ್ಬಾಳಕರ್ ಗೆ ಮತ ನೀಡಿ ಆಯ್ಕೆ ಮಾಡಬೇಕು ಎಂದು ಅವರು ಕೋರಿದರು.

ಶಾಸಕ ವಿಶ್ವಾಸ ವೈದ್ಯ ಮಾತನಾಡಿ, ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಹಿಂದೆಂದೂ ಕಾಣದಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದಾರೆ. ಕ್ಷೇತ್ರ ರಾಜ್ಯದಲ್ಲೇ ಮಾದರಿಯಾಗುತ್ತ ಮುನ್ನಡೆದಿದೆ. ಅದೇ ಮಾದ-ರಿಯಲ್ಲಿ ಬೆಳಗಾವಿ ಲೋಕಸಭಾ ಕ್ಷೇತ್ರದ ಅಭಿವೃದ್ಧಿ ಮಾಡಲು ಮೃಣಾಲ ಹೆಬ್ಬಾಳಕರ್ ಅವರನ್ನು ಬೆಂಬಲಿಸೋಣ ಎಂದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮಾತನಾಡಿ, ಕಳೆದ 10 ವರ್ಷದಿಂದ ನಾನು ಸಕ್ರೀಯವಾಗಿ ಸಾಮಾಜಿಕ ಮತ್ತು ರಾಜಕೀಯ ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದು, ಕ್ಷೇತ್ರದ ಸಮಸ್ಯೆ ಮತ್ತು ಜನರ ಬೇಕು ಬೇಡಗಳನ್ನು ತಿಳಿದುಕೊಂಡಿದ್ದೇನೆ. ಕ್ಷೇತ್ರದ ಅಭಿವೃದ್ಧಿ ಸ್ಪಷ್ಟ ಯೋಚನೆಯನ್ನು ಹೊಂದಿದ್ದೇನೆ. ಹಾಗಾಗಿ ನನಗೆ ಮತ ನೀಡಿ ಅವಕಾಶ ಮಾಡಿಕೊಟ್ಟಲ್ಲಿ ಜನರು ಮೆಚ್ಚುವ ರೀತಿಯಲ್ಲಿ ಕೆಲಸ ಮಾಡಿ ತೋರಿಸುತ್ತೇನೆ ಎಂದರು.

ಶಿವಪ್ಪ ಸುಬ್ಬರ, ಬಸಯ್ಯ ಮಠಪತಿ, ದುಂಡಪ್ಪ ಖನವಿ, ಗಾಜಿ ವಕೀಲರು, ರಾಮನಗೌಡ ತಿಪ್ಪರಾಶಿ, ರಾಜು ಕಗದಾಳ, ಡಿ.ಡಿ.ಟೋಪೋಜಿ, ಬಸವರಾಜ ಆಯಟ್ಟಿ, ಗೋಪಾಲ ದಳವಾಯಿ, ಪತ್ರೆಪ್ಪ ಚಿಕ್ಕುಂಬಿ, ಶ್ರೀಕಾಂತ ನೇಗಿನಾಳ, ಈರಪ್ಪ ಕೊಡ್ಲಿ, ಮಹಾರಾಜಗೌಡ ಪಾಟೀಲ, ಮುತ್ತು ಬಾಂಗಿಡದ, ಲಕ್ಕಪ್ಪ ಸುಬ್ಬರ, ಹನಮಂತ ಮುಳ್ಳೂರ್, ಎಂ.ಎಸ್.ಜಾವೂರ್, ಸಿದ್ದು ಶಿರಹಟ್ಟಿ, ದ್ಯಾಮಣ್ಣ ಮ್ಯಾದಾರ್ ಮುಂತಾದವರು ಇದ್ದರು.

## 'ಐಪಿಓ' ಅನುಮತಿಗೆ ಇಕೋಸ್ (ಇಂಡಿಯಾ) ಮೊಬಿಲಿಟಿ ಪ್ರಸ್ತಾವನೆ ಸಲ್ಲಿಕೆ

ಹುಬ್ಬಳ್ಳಿ: ಕಾರ್ಪೊರೇಟ್ ಕಂಪನಿಗಳಿಗೆ ಚಾಲಕಸಹಿತ ಬಾಡಿಗೆ ವಾಹನ ಸೌಲಭ್ಯ ಒದಗಿಸುವ ಭಾರತದ ಅತಿ-ದೊಡ್ಡ ಮತ್ತು ಲಾಭದಾಯಕ ಸಂಸ್ಥೆಯಾಗಿರುವ ಇಕೋಸ್ (ಇಂಡಿಯಾ) ಮೊಬಿಲಿಟಿ ಆ್ಯಂಡ್ ಹಾಸ್ಪಿಟ್ಯಾಲಿಟಿ ಲಿಮಿಟೆಡ್, ಪ್ರಾಥಮಿಕ ಮಾರುಕಟ್ಟೆಯಿಂದ ಬಂಡವಾಳ ಸಂಗ್ರಹಿಸಲು ಅನುಮತಿ ನೀಡಬೇಕು ಎಂದು ಭಾರತದ ಷೇರು ನಿಯಂತ್ರಣ ಮಂಡಳಿಗೆ (ಸೆಬಿ) ಕರಡು ಪ್ರಸ್ತಾವ ಸಲ್ಲಿಸಿದೆ.

ಕಾರ್ಯಾಚರಣೆಗಳಿಂದ ಗಳಿಸಿದ ವರಮಾನ ಮತ್ತು ಹಣಕಾಸು 2023ರಲ್ಲಿ ತೆರಿಗೆ ಪಾವತಿ ನಂತರದ ಲಾಭದ ಲೆಕ್ಕಾಚಾರದಲ್ಲಿ ಇದೊಂದು ಲಾಭದಾಯಕ ಕಂಪನಿಯಾಗಿದೆ. ತಲಾ ರೂ 2 ಮುಖಬೆಲೆಯ 1,80,00,000 ವರೆಗಿನ ಈಕ್ವಿಟಿ ಷೇರುಗಳ ಆರಂಭಿಕ ಸಾರ್ವಜನಿಕ ಕೊಡುಗೆಗೆ (ಐಪಿಒ) ಅನುಮತಿ ನೀಡಲು 'ಸೆಬಿ'ಗೆ ಕರಡು ಪ್ರಸ್ತಾವ ಸಲ್ಲಿಸಿದೆ.

ರಾಜೇಶ್ ಲೂಂಬಾ, ಆದಿತ್ಯ ಲೂಂಬಾ, ರಾಜೇಶ್ ಲೂಂಬಾ ಫ್ಯಾಮಿಲಿ ಟ್ರಸ್ಟ್ ಮತ್ತು ಆದಿತ್ಯ ಲೂಂಬಾ ಫ್ಯಾಮಿಲಿ ಟ್ರಸ್ಟ್ ಈ ಕಂಪನಿಯ ಪ್ರವರ್ತಕರಾಗಿದ್ದಾರೆ.

ಈ ಕೊಡುಗೆಯು ರಾಜೇಶ್ ಲೂಂಬಾ ಅವರ 99,00,000 ವರೆಗಿನ ಈಕ್ವಿಟಿ ಷೇರುಗಳು ಮತ್ತು ಆದಿತ್ಯ ಲೂಂಬಾ ಅವರ 81,00,000 ವರೆಗಿನ ಸೇರಿದಂತೆ 1,80,00,000 ಈಕ್ವಿಟಿ ಷೇರುಗಳ ಮಾರಾಟ ಕೊಡುಗೆ ಒಳಗೊಂಡಿದೆ.

ಕಂಪನಿಯು 25 ವರ್ಷಗಳಿಂದ ಭಾರತದಲ್ಲಿ ಫಾರ್ಚೂನ್ 500 ಕಂಪನಿಗಳು ಸೇರಿದಂತೆ ತನ್ನೆಲ್ಲ ಕಾರ್ಪೊರೇಟ್ ಗ್ರಾಹಕರಿಗೆ ಚಾಲಕ ಸಹಿತ ಕಾರ್ ಬಾಡಿಗೆ (ಸಿಸಿಆರ್) ಮತ್ತು ಉದ್ಯೋಗಿ ಸಾರಿಗೆ ಸೌಲಭ್ಯದ (ಇಟಿಎಸ್) ಸೇವೆಗಳನ್ನು ಒದಗಿಸುತ್ತಿದೆ. ಕಂಪನಿಯು ವಿವಿಧ ಬಗೆಯ ವಾಹನ ಬ್ರ್ಯಾಂಡ್‌ಗಳಾದ ಔಡಿ, ಬಿಎಂಡಬ್ಲ್ಯು ಮತ್ತು ಮರ್ಸಿಡಿಸ್-ಬೆಂಜ್ ಸೇರಿದಂತೆ 9,000 ಕ್ಕೂ ಹೆಚ್ಚಿನ ಅಗ್ಗದ, ಐಷಾರಾಮಿ ಹಾಗೂ ಪ್ರೀಮಿಯಂ ವಾಹನ, ವಿವಿಧ ಬಗೆಯ ಕಾರ್, ಮಿನಿ ವ್ಯಾನ್ ಮತ್ತು ಬಸ್‌ಗಳ ಸೇವೆ ಒದಗಿಸುತ್ತಿದೆ. ಇದು ವಿಶೇಷ ವಾಹನಗಳಾದ ಲಗೇಜ್ ವ್ಯಾನ್‌ಗಳು, ಹೆಚ್ಚು ಆರಾಮದಾಯಕ ದೊಡ್ಡ ಕಾರ್, ಹಳೆಯ ಕಾರುಗಳು ಮತ್ತು ಅಂಗವಿಕಲರು ಸುಲಭವಾಗಿ ಹತ್ತಬಹುದಾದ ಸಾರಿಗೆ ವಾಹನಗಳನ್ನು ಒದಗಿಸುತ್ತದೆ.

ಕಂಪನಿಯು ಮಾಹಿತಿ ತಂತ್ರಜ್ಞಾನ, ಹೊರಗುತ್ತಿಗೆ, ಜಾಗತಿಕ ಸಾಮರ್ಥ್ಯ ಕೇಂದ್ರಗಳು, ಸಲಹಾ, ಆರೋಗ್ಯ, ಇ-ಕಾಮರ್ಸ್, ಔಷಧ, ಕಾನೂನು ಮತ್ತು ತಯಾರಿಕೆ ವಲಯಗಳು ಸೇರಿದಂತೆ ವೈವಿಧ್ಯಮಯ ಉದ್ದಿಮೆಗಳಿಗೆ ಸೇವೆ ಒದಗಿಸುತ್ತಿದೆ.

ಈ ಎಲ್ಲ ವಲಯಗಳ ಪ್ರಮುಖ ಕಂಪನಿಗಳಾದ ಎಚ್‌ಸಿ-ಎಲ್ ಕಾರ್ಪೊರೇಷನ್ ಪ್ರೈವೇಟ್ ಲಿಮಿಟೆಡ್, ಎಚ್‌ಡಿ-ಎಫ್‌ಸಿ ಲೈಫ್ ಇನ್ಶುರನ್ಸ್ ಲಿಮಿಟೆಡ್, ಥಾಮಸ್ ಕುಕ್, ಡಬ್ಲ್ಯುಎಂ ಗ್ಲೋಬಲ್ ಟೆಕ್ನಾಲಜಿ ಸರ್ವಿಸಸ್ ಇಂಡಿಂ-ಯಾ ಪ್ರೈವೇಟ್ ಲಿಮಿಟೆಡ್, ವಿಆರ್‌ಬಿ ಕನ್ಸುಮರ್ ಪ್ರಾಡಕ್ಟ್ಸ್ ಲಿಮಿಟೆಡ್, ಮೆಡ್‌ಜೆನೊಮ್ ಲ್ಯಾಬ್ಸ್ ಲಿಮಿಟೆಡ್, ಡ್ರೀಮ್‌ಫೋಕ್ಸ್ ಸರ್ವಿಸಸ್ ಲಿಮಿಟೆಡ್, ಮೆರ್ಸರ್ ಕನ್ಸಲ್ಟಿಂಗ್, ಎಫ್‌ಎನ್‌ಎಫ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಎಕ್ಸೆಲ್‌ಸರ್ವಿಸ್‌ಡಾಟ್‌ಕಾಂ (ಇಂಡಿಯಾ) ಪ್ರೈವೇಟ್ ಲಿಮಿಟೆಡ್ ಮತ್ತು ವಿಎ ಟೆಕ್ ವಾಬ್ಯಾಗ್ ಲಿಮಿಟೆಡ್ ಸೇರಿದಂತೆ ಹಲವಾರು ಕಂಪನಿಗಳಿಗೆ ತನ್ನ ಸೇವೆಗಳನ್ನು ಒದಗಿಸುತ್ತದೆ.

ಈಕ್ವೈರಸ್ ಕ್ಯಾಪಿಟಲ್ ಪ್ರೈವೇಟ್ ಲಿಮಿಟೆಡ್ ಮತ್ತು ಐಐಎಫ್‌ಎಲ್ ಸೆಕ್ಯುರಿಟೀಸ್ ಲಿಮಿಟೆಡ್ ಈ ನೀಡಿಕೆಯ ಬುಕ್ ರನ್ನಿಂಗ್ ಲೀಡ್ ಮ್ಯಾನೇಜರ್‌ಗಳಾಗಿವೆ.

## ಯುವಕರಿಗೆ ಉದ್ಯೋಗ ಸೃಷ್ಟಿ ಮತ್ತು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಅಭ್ಯರ್ಥಿಗೆ ಮತ ನೀಡಿ: ಲಕ್ಷ್ಮೀ ಹೆಬ್ಬಾಳಕರ್



ಬೆಳಗಾವಿ : ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಪಕ್ಷ ಸುಭದ್ರವಾಗಿದೆ. ಕಳೆದ 10 ತಿಂಗಳಲ್ಲಿ ಜನ-ರಿಗೆ ನೀಡಿದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದಿದ್ದೇವೆ. ಇನ್ನು ನಾಲ್ಕು ವರ್ಷಗಳ ಕಾಲ ಸರ್ಕಾರ ಸುಭದ್ರವಾಗಿರಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದ್ದಾರೆ.

ಸವದತ್ತಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಶಿಂದೋಗಿ, ಬಂಡಾರಹಳ್ಳಿ, ಹಿರೂರು ಹಾಗೂ ಹಳ್ಳೂರಿನಲ್ಲಿ ಸೋಮವಾರ ಚುನಾವಣಾ ಪ್ರಚಾರದಲ್ಲಿ ಮಾತನಾಡಿದ ಸಚಿವರು, ಲೋಕಸಭಾ ಚುನಾವಣೆ ಬಳಿಕ ಸರ್ಕಾರ ಬೀಳಲಿದೆ ಎಂದೆಲ್ಲಾ ಹಗಲು ಕನಸು ಕಾಣುತ್ತಿದ್ದಾರೆ. ಜನರು 135 ಶಾಸಕರನ್ನು ಆರಿಸಿ ಕಳುಹಿಸುವ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಸ್ಪಷ್ಟ ಬಹುಮತ ನೀಡಿದ್ದಾರೆ ಎಂದರು.

**ಉದ್ಯೋಗ ಸೃಷ್ಟಿ:**

ಬೆಳಗಾವಿ ಜಿಲ್ಲೆಯ ಯುವಕರಿಗೆ ಜಿಲ್ಲೆಯಲ್ಲೇ ಉದ್ಯೋಗ ಒದಗಿಸುವ ಯೋಜನೆಗಳನ್ನು ತರಲಾಗುವುದು. ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು. ಕೊಟ್ಟ ಮಾತಿಗೆ ಚ್ಯುತಿ ಬರದಂತೆ ಕೆಲಸ ಮಾಡಲಾಗುವುದು ಎಂದು ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

**ಮೃಣಾಲ್ ಎಲ್ಲರ ಪ್ರತಿನಿಧಿಯಾಗಿ ಕೆಲಸ ಮಾಡಲಿದ್ದಾನೆ:**

ಮೃಣಾಲ್ ಹೆಬ್ಬಾಳ್ಕರ್ ಯುವಕರು ಸೇ-ರಿದಂತೆ ಎಲ್ಲರ ಪ್ರತಿನಿಧಿಯಾಗಿ ಸಂಸತ್‌ನಲ್ಲಿ ಧ್ವನಿ ಎತ್ತಲಿದ್ದಾನೆ. ಯುವಕರ ಪಾಲಿಗೆ ಗೆಳೆಯ, ಅಣ್ಣ, ತಮ್ಮ ಆಗಿ ಕೆಲಸ ಮಾಡಲಿದ್ದಾನೆ. ಕ್ಷೇತ್ರದ ಮಗನಿಗೆ ಆಶೀರ್ವಾದ ಮಾಡಿ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಮನವಿ ಮಾಡಿದರು.

ಲೋಕಸಭಾ ವ್ಯಾಪ್ತಿಯಲ್ಲಿ ಸುಮಾರು 2500 ಗ್ರಾಮಗಳಿದ್ದು, ಪ್ರತಿ ಗ್ರಾಮಕ್ಕೂ ಭೇಟಿ ಕೊಟ್ಟು ಸ್ಥಳೀಯರ ಸಮಸ್ಯೆ ಆಲಿಸಲಿದ್ದಾನೆ. ನಮ್ಮ ಕುಟುಂಬ ಸವದತ್ತಿ ಕ್ಷೇತ್ರದ ಜೊತೆ ಭಾವನಾತ್ಮಕ ನಂಟನ್ನು ಹೊಂದಿದೆ ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ್ ಜಾರಕಿಹೊಳಿ ಅಶೀರ್ವಾದಿಂದ ಪ್ರಿಯಾಂಕ ಜಾರಕಿಹೊಳಿ ಚಿಕ್ಕೋಡಿ, ಮೃಣಾಲ್ ಹೆಬ್ಬಾಳ್ಕರ್ ಬೆಳಗಾವಿ ಕ್ಷೇತ್ರದಿಂದ ಕಣಕ್ಕಿಳಿದಿದ್ದಾರೆ. ಇಬ್ಬರೂ ಯುವ ಅಭ್ಯರ್ಥಿಗಳಾಗಿರುವುದರಿಂದ ನಮ್ಮ ಅಭ್ಯರ್ಥಿಗಳನ್ನು ಬೆಂಬಲಿಸಬೇಕು ಎಂದು ಕೋರಿದರು.

ಕಾಂಗ್ರೆಸ್ ಅಧಿಕಾರಕ್ಕೆ ಬರಬೇಕು ಎಂದು ಕಳೆದ ವರ್ಷ ಶೆಟ್ಟರ್ ನಮ್ಮ ಪಕ್ಷಕ್ಕೆ ಸೇರ್ಪಡೆಗೊಂಡರು. ವಿಧಾನಸಭೆ ಚುನಾವಣೆಯಲ್ಲಿ ಸೋತರೂ ಅವರ ಹಿರಿತನಕ್ಕೆ ಗೌರವ ನೀಡಿದ ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯರನ್ನಾಗಿ ಮಾಡಿತು. ಇದೀಗ ಪುನಃ ಬಿಜೆಪಿಗೆ ಜಾರಿಕೊಂಡರು. ಇಂತವರಿಗೆ ಜನರು ಸರಿಯಾದ ಪಾಠ ಕಲಿಸಬೇಕು ಎಂದು ಸಚಿವರು ಕರೆಕೊಟ್ಟರು.

ಅಭ್ಯರ್ಥಿ ಮೃಣಾಲ್ ಹೆಬ್ಬಾಳಕರ್ ಮಾತನಾಡಿ, ಕ್ಷೇತ್ರವನ್ನು ಸಮಗ್ರವಾಗಿ ಅಭಿವೃದ್ಧಿ ಪಡಿಸಬೇಕೆನ್ನುವ ಕನಸು ಹೊತ್ತು ಚುನಾವಣೆಗೆ ಸ್ಪರ್ಧಿಸಿದ್ದೇನೆ. ವಿಶೇಷವಾಗಿ ಯುವಕರಿಗೆ ಜಿಲ್ಲೆಯಲ್ಲೇ ಉದ್ಯೋಗಾವಕಾಶಗಳನ್ನು ಕಲ್ಪಿಸುವ ಉದ್ದೇಶ ಹೊಂದಿದ್ದೇನೆ.

ಉದ್ಯೋಗದ ಜೊತೆಗೆ ಯುವಕರನ್ನು ಉದ್ಯಮಿಗಳನ್ನಾಗಿಸಲು ಒತ್ತು ನೀಡಲಾಗುವುದು ಎಂದರು.

ಸಚಿವರೊಂದಿಗೆ ಚುನಾವಣಾ ಪ್ರಚಾರದಲ್ಲಿ ಸವದತ್ತಿ ಶಾಸಕ ವಿಶ್ವಾಸ ವೈದ್ಯ, ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್, ಡಿ.ಡಿ.ಟೋಪೋಜಿ ಸೇರಿದಂತೆ ಅಪಾರ ಸಂಖ್ಯೆ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸ್ವೀಪ್ ರಾಯಭಾರಿಗಳಿಂದ 'ಮತ' ಜಾಗೃತಿ

ಬೆಳಗಾವಿ: ಈ ಬಾರಿ ಲೋಕಸಭೆ ಚುನಾವಣೆಯಲ್ಲಿ ಮತದಾನದ ಕುರಿತು ಜಾಗೃತಿ ಮೂಡಿಸಲು ಸ್ವೀಪ್ (ವ್ಯವಸ್ಥಿತ ಮತದಾರರ ಶಿಕ್ಷಣ ಹಾಗೂ ಚುನಾವಣೆಯಲ್ಲಿ ಪಾಲ್ಗೊಳ್ಳುವಿಕೆ) ಸಮಿತಿಯು ವಿವಿಧ ರಂಗಗಳಲ್ಲಿ ಸಾಧನೆ ಮಾಡಿದ ಮೂವರನ್ನು ರಾಯಭಾರಿಗಳನ್ನಾಗಿ ನೇಮಿಸಿದೆ.

ಇಲ್ಲಿನ ಅಂತರರಾಷ್ಟ್ರೀಯ ಅಂಗವಿಕಲ ಈಜುಪಟು ರಾಘವೇಂದ್ರ ಅಣ್ವೇಕರ್, ಲಿಂಗತ್ವ ಅಲ್ಪಸಂಖ್ಯಾತರಾದ ಚಿನ್ನು ತಳವಾರ ಮತ್ತು ರಾಷ್ಟ್ರೀಯ ಜುಡೋಪಟು ಸಹನಾ ಎಸ್.ಆರ್. ರಾಯಭಾರಿಗಳಾಗಿ ನೇಮಕ ಗೊಂಡವರು.

ನಾಲ್ಕನೇ ಬಾರಿ ರಾಯಭಾರಿ: ರಾಣಿ ಚನ್ನಮ್ಮ ವಿಶ್ವವಿದ್ಯಾಲಯದಲ್ಲಿ ಪ್ರಥಮ ದರ್ಜೆ ಸಹಾಯಕರಾಗಿ ಸೇವೆ ಸಲ್ಲಿಸುತ್ತಿರುವ ರಾಘವೇಂದ್ರ ಅಣ್ವೇಕರ್, ಅಂಗವೈಕಲ್ಯದ ಮಧ್ಯೆಯೂ ಈಜು ಸ್ಪರ್ಧೆಯಲ್ಲಿ ಮಿಂಚುತ್ತಿದ್ದಾರೆ. ಅಂಗವಿಕ ಲರ ಈಜು ಟೂರ್ನಿಗಳಲ್ಲಿ ಅಂತರ ರಾಷ್ಟ್ರೀಯ ಮಟ್ಟದಲ್ಲಿ 28, ರಾಷ್ಟ್ರಮಟ್ಟ ದಲ್ಲಿ 100 ಪದಕ ಗೆದ್ದಿದ್ದಾರೆ.

2018ರಲ್ಲಿ ನಡೆದ ವಿಧಾನಸಭೆ ಚುನಾವಣೆಯಲ್ಲಿ ಮೊದಲ ಬಾರಿ ಅವರು ಸ್ವೀಪ್ ರಾಯಭಾರಿಯಾಗಿದ್ದರು. 2019ರ ಲೋಕಸಭೆ ಚುನಾವಣೆ, 2021ರ ಲೋಕಸಭೆ ಉಪಚುನಾವಣೆಯಲ್ಲಿ 'ಸ್ವೀಪ್ ರಾಯಭಾರಿ' ಕೆಲಸ ಮಾಡಿ, ಜಿಲ್ಲೆಯಾದ್ಯಂತ ಮತದಾರರಲ್ಲಿ ಜಾಗೃತಿ ಮೂಡಿಸಿದ್ದರು.

ಮತ್ತೊಬ್ಬ ರಾಯಭಾರಿಯಾದ ರಾಮದುರ್ಗ ತಾಲ್ಲೂಕಿನ ಕುನ್ನಾಳದ ಚಿನ್ನು ತಳವಾರ ಬೆಳಗಾವಿಯ ಹ್ಯುಮ್ಯಾನಿಟಿ ಫೌಂಡೇಷನ್‌ನಲ್ಲಿ ಸದಸ್ಯರಾಗಿದ್ದಾರೆ. ಲಿಂಗತ್ವ ಅಲ್ಪಸಂಖ್ಯಾತರ ಕಲ್ಯಾಣಕ್ಕಾಗಿ ಹಲವು ವರ್ಷಗಳಿಂದ ಶ್ರಮಿಸುತ್ತಿದ್ದಾರೆ. ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ ಫ್ಯಾಷನ್ ಷೋನಲ್ಲಿ ರನ್ನರ್ ಅಪ್ ಪ್ರಶಸ್ತಿಗೆ ಭಾಜನರಾಗಿದ್ದಾರೆ.



ಜುಡೋದಲ್ಲಿ ಸಾಧನೆ: 21 ವರ್ಷದ ಸಹನಾ ಬೆಳಗಾವಿಯ ಮರಾಠ ಮಂಡಳ ಕಾಲೇಜಿನಲ್ಲಿ ಬಿ.ಎ ಅಂತಿಮ ವರ್ಷ ವ್ಯಾಸಂಗ ಮಾಡುತ್ತಿದ್ದಾರೆ. ರಾಷ್ಟ್ರಮಟ್ಟದ ಜುಡೋ ಟೂರ್ನಿಗಳಲ್ಲಿ 3 ಚಿನ್ನ, 1 ಬೆಳ್ಳಿ ಮತ್ತು 3 ಕಂಚಿನ ಪದಕ ಗಳಿಸಿದ್ದಾರೆ.

> ನಾನು ಸ್ವೀಪ್ ರಾಯಭಾರಿ ಆಗುತ್ತಿರುವುದು ನಾಲ್ಕನೇ ಬಾರಿ. ಮತದಾನದ ಮಹತ್ವದ ಕುರಿತು ಜಾಗೃತಿ ಮೂಡಿಸುವ ಕಾಯಕದಲ್ಲಿ ತೊಡಗಿರುವುದಕ್ಕೆ ಹೆಮ್ಮೆಯಿದೆ.
> **ರಾಘವೇಂದ್ರ ಅಣ್ವೇಕರ್, ಅಂತರರಾಷ್ಟ್ರೀಯ ಅಂಗವಿಕಲ ಈಜುಪಟು**

ಪ್ರೇರಣೆ ಆಗಲೆಂದು ನೇಮಕ: ಸಿಇಒ 'ರಾಘವೇಂದ್ರ, ಚಿನ್ನು ಮತ್ತು ಸಹನಾ ಅವರು, ಹಲವು ತೊಡಕುಗಳ ಮಧ್ಯೆಯೂ ತಮ್ಮ ರಂಗಗಳಲ್ಲಿ ಸಾಧನೆ ಮಾಡಿದ್ದಾರೆ. ಸಮಾಜಕ್ಕೆ ಪ್ರೇರಣೆಯಾಗ ಲೆಂದು ಇವರನ್ನೇ ಸ್ವೀಪ್ ರಾಯಭಾರಿಗಳನ್ನಾಗಿ ನೇಮಿಸಿದ್ದೇವೆ.

ಜಿಲ್ಲೆಯಲ್ಲಿ ನಿರಂತರವಾಗಿ ನಡೆಯುವ ಸ್ವೀಪ್ ಚಟುವಟಿಕೆಗಳು ಮತ್ತು ತಾವು ಕಾರ್ಯನಿರ್ವಹಿಸುವ ಸ್ಥಳಗಳಲ್ಲಿ ಅವರು ಮತದಾನದ ಕುರಿತು ಜಾಗೃತಿ ಮೂಡಿಸಲಿದ್ದಾರೆ' ಎಂದು ಜಿ.ಪಂ ಸಿಇಒ ರಾಹುಲ್ ಶಿಂಧೆ ಹೇಳಿದರು.

ಎಷ್ಟು ಮತದಾನವಾಗಿತ್ತು?

2019ರ ಲೋಕಸಭೆ ಚುನಾವಣೆಯಲ್ಲಿ ಬೆಳಗಾವಿ ಕ್ಷೇತ್ರದಲ್ಲಿ ಶೇ 67.70, ಚಿಕ್ಕೋಡಿಯಲ್ಲಿ ಶೇ 75.53ರಷ್ಟು ಮತದಾನವಾಗಿತ್ತು. ಕೆನರಾ ಕ್ಷೇತ್ರಕ್ಕೆ ಒಳಪಟ್ಟ ಖಾನಾಪುರ ವಿಧಾನಸಭೆ ಕ್ಷೇತ್ರದಲ್ಲಿ ಶೇ 70.68, ಚನ್ನಮ್ಮನ ಕಿತ್ತೂರು ಕ್ಷೇತ್ರದಲ್ಲಿ ಶೇ 72.33ರಷ್ಟು ಮತದಾನವಾಗಿತ್ತು. ಈ ಬಾರಿ ಪ್ರತಿಶತ 100ರಷ್ಟು ಮತದಾನದ ಗುರಿಯೊಂದಿಗೆ ಸ್ವೀಪ್ ಕೆಲಸ ಮಾಡುತ್ತಿದೆ.

# ತಂದೆಯವರಿಗೆ ತೋರಿದ ಅಭಿಮಾನ-ಬೆಂಬಲ ನನಗೂ ನೀಡಿ: ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ

## ಹುಕ್ಕೇರಿ ವಿಧಾನಸಭಾ ಕ್ಷೇತ್ರದ ರುಸ್ತುಂಪೂರ ಗ್ರಾಮದಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆ



ಬೆಳಗಾವಿ: ತಂದೆಯವರಿಗೆ ತೋರಿದ ಅಭಿಮಾನ- ಬೆಂಬಲ ನಿಮ್ಮ ಮನೆ ಮಗಳಾದ ನನಗೂ ನೀಡಿ, ಕ್ಷೇತ್ರದ ಜನರ ಸೇವೆ ಮಾಡಲು ಮತದಾರರು ಒಂದು ಭಾರಿ ಅವಕಾಶ ನೀಡಿ ಆಶೀರ್ವಾದ ಮಾಡಬೇಕು ಎಂದು ಚಿಕ್ಕೋಡಿ ಲೋಕಸಭಾ ಕೈ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಮನವಿ ಮಾಡಿದರು.

ಹುಕ್ಕೇರಿ ವಿಧಾನಸಭಾ ಕ್ಷೇತ್ರದ ರುಸ್ತುಂಪೂರ ಗ್ರಾಮದಲ್ಲಿ ಆಯೋಜಿಸಿದ್ದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಭಾಗವಹಿಸಿ ಮಾತನಾಡಿ, ಮತಕ್ಷೇತ್ರದಲ್ಲಿ ಈಗಾಗಲೇ ನಮ್ಮ ತಂದೆಯವರು ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿ ರಾಜ್ಯದಲ್ಲಿ ಮಾದರಿ ಕ್ಷೇತ್ರವನ್ನಾಗಿ ರೂಪಿಸಿದ್ದಾರೆ. ಅಲ್ಲದೇ ಕಳೆದ 15 ವರ್ಷಗಳ ಅವಧಿಯಲ್ಲಿ ಮತಕ್ಷೇತ್ರದ ಅನೇಕ ಗ್ರಾಮಗಳಲ್ಲಿ ಬೇಡಿಕೆಗೆ ಅನುಗುಣವಾಗಿ ಶಾಲಾ-ಕಾಲೇಜುಗಳನ್ನು ನಿರ್ಮಿಸಿ ಶೈಕ್ಷಣಿಕ ಅಭಿವೃದ್ಧಿಗೆ ಆದ್ಯತೆ ನೀಡಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನೂ ಹತ್ತಾರು ಅಭಿವೃದ್ಧಿ ಕಾರ್ಯಗಳನ್ನು ಈ ಕ್ಷೇತ್ರದಲ್ಲಿ ಮಾಡಲು ಮತದಾರರು ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನನಗೆ ಆಶೀರ್ವಾದ ಮಾಡಬೇಕು ಎಂದು ಮತದಾರರಲ್ಲಿ ಮನವಿ ಮಾಡಿದರು.

ಕೇಂದ್ರ ಸರ್ಕಾರದ ದುರಾಡಳಿತ ದಿಂದ ನೊಂದ ಜನರಿಗೆ ನಮ್ಮ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ನೆಮ್ಮದಿ ದೊರಕಿದ್ದು, ನಮ್ಮ ಕಾರ್ಯಕರ್ತರು ಮನೆ ಮನೆಗೆ ತೆರಳಿ ಚಿಕ್ಕೋಡಿ ಸಂಸದರ ವೈಫಲ್ಯಗಳನ್ನು ತಿಳಿಸಿ ಮತಯಾಚಿಸಬೇಕೆಂದು ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಕಾಂಗ್ರೆಸ್ ಸದಾ ಬಡವರ ಪರವಾಗಿದ್ದು, ಚುನಾವಣೆಗೂ ಮುನ್ನ ಘೋಷಿಸಿದ್ದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರುವ ಮೂಲಕ ನುಡಿದಂತೆ ನಡೆದಿದೆ. ಬಿಜೆಪಿಯವರಿಗೆ ಕೇವಲ ಶ್ರೀಮಂತ ಉದ್ಯಮಿಗಳ ಪರವಾಗಿ ಕೆಲಸ ಮಾಡುವುದು ಗೊತ್ತು. ಆದರೆ ಇಂದಿರಾ ಗಾಂಧಿ ಅವರಿಂದ ಹಿಡಿದು ಸಿದ್ದರಾಮಯ್ಯವರೆಗೆ ಕಾಂಗ್ರೆಸ್ ಪಕ್ಷದ ಎಲ್ಲರೂ ಬಡವರ ಪರ ಕೆಲಸ ಮಾಡಿದ್ದಾರೆ. ಆದ್ದರಿಂದ ಕ್ಷೇತ್ರದ ಜನರ ಕಲೆಸ ಮಾಡಲು ನನಗೂ ಒಂದು ಅವಕಾಶ ನೀಡಬೇಕು ಎಂದು ಮನವಿ ಮಾಡಿದರು.

ಕಳೆದ 4 ವರ್ಷಗಳಿಂದ ಶೈಕ್ಷಣಿಕ ಸೇರಿದಂತೆ ಕ್ರೀಡಾ ಪಟುಗಳಿಗೆ ಸತೀಶ ಜಾರಕಿಹೊಳಿ ಫೌಂಡೇಶನ್ ದಿಂದ ಸಹಾಯ-ಸಹಕಾರ ಮಾಡಲಾಗಿದೆ. ನಿಮ್ಮ ಮನೆ ಮಗಳನ್ನು ಮತದಾರರು ಸಹಕರಿಸಬೇಕು. ಈ ಕ್ಷೇತ್ರದಿಂದ ಗೆಲ್ಲಲು ಶಕ್ತಿ ತುಂಬಬೇಕು ಎಂದ ಅವರು, ದೇಶದಲ್ಲಿ ಸ್ವಚ್ಛ ಆಡಳಿತ ನೀಡಿದವರು ಕಾಂಗ್ರೆಸ್, ದೇಶಕ್ಕೆ ಸ್ವಾತಂತ್ರ್ಯ ಸಿಗಲು ಹೋರಾಟ ಮಾಡಿದವರು ಕಾಂಗ್ರೆಸ್ . ಹೀಗಾಗಿ ಜಿಲ್ಲೆ ಸೇರಿದಂತೆ ದೇಶದ ಅಭಿವೃದ್ಧಿಗೆ ಕಾರಣವಾಗಿರುವ ಕಾಂಗ್ರೆಸ್ ಪಕ್ಷದ ಗೆಲುವಿಗೆ ಪಣತೊಡಬೇಕು ಎಂದರು.

ಇದೇ ಸಂದರ್ಭದಲ್ಲಿ ಚಿಕ್ಕೋಡಿ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗ್ರಾಮದ ಮಹಿಳೆಯರು ಸನ್ಮಾನಿಸಿದರು. ಈ ಸಂದರ್ಭದಲ್ಲಿ ಶಿವಾನಂದ ಗುಡಗನಟ್ಟಿ, ಶಿವಪ್ಪ ಈರನಟ್ಟಿ, ಯಲ್ಲಪ್ಪ ನಾಯ್ಕ, ಶ್ರೀಶೈಲ್ ದೊಡಮನಿ, ಗ್ರಾಪಂ ಅಧ್ಯಕ್ಷ ಶಿವಲಿಂಗಪ್ಪ ಹೆಬ್ಬಾಳ, ಗ್ರಾಪಂ ಉಪಾಧ್ಯಕ್ಷ ಲಗಮವ್ವಾ ಸಾವಿನಾಯ್ಕ, ಗ್ರಾಪಂ ಸದಸ್ಯ ಅಡಿವೆಪ್ಪ ಬಡನಾಯ್ಕ, ಸತ್ತೆಪ್ಪ ಲಠ್ಠೆ, ಚಂದ್ರಪ್ಪ ಹೆಬ್ಬಾಳ,ಈಶ್ವರ ಮುನ್ನೋಳಿ, ವೀರಭದ್ರ ಮನಗುತ್ತಿ ಸೇರಿದಂತೆ ಗ್ರಾಮದ ಮುಖಂಡರು ಹಾಗೂ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

## ಮೇ, ಜೂನ್ ತಿಂಗಳಲ್ಲಿ ಸ್ಥಿರಾಸ್ತಿಗಳ ತೆರಿಗೆ ಪಾವತಿಸಲು ಅವಕಾಶ

ಬೆಳಗಾವಿ: 2024-25ರ ಸಾಲಿನ ಪೀನರವಾಡಿ ಪಟ್ಟಣ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಕಟ್ಟಡ ಹಾಗೂ ಖಾಲಿ ನಿವೇಶನ ಮಾಲೀಕರಿಗೆ ಅಥವಾ ಅನುಭೋಗದಾರರು ಸ್ವಯಂ ಘೋಷಿತ ಆಸ್ತಿ ತೆರಿಗೆಯನ್ನು ಚಾಲ್ತಿ ಸಾಲಿನ ಮಾರುಕಟ್ಟೆ ಮೌಲ್ಯದ ಮಾರ್ಗಸೂಚಿ ಬೆಲೆಯ ಮೇಲೆ ಶೇ.25 ರಷ್ಟು ಏ.1 ರಿಂದ ವಿಧಿಸಿ ತೆರಿಗೆ ಪರಿಷ್ಕರಣೆ ಮಾಡಿ ಮಂಜೂರು ಪಡೆಸಲಾಗಿದೆ.

ಕರದಾತರು ತಮ್ಮ 2024-25ನೇ ಸಾಲಿನ ಆಸ್ತಿ ತೆರಿಗೆ ಎಪ್ರಿಲ್ ತಿಂಗಳಿನಲ್ಲಿ ಪಾವತಿಸಿದರೆ ಆಸ್ತಿ ತೆರಿಗೆ ಮೇಲೆ ಶೇಕಡಾ 5% ರಷ್ಟು ರಿಯಾಯಿತಿ ನೀಡಲಾಗಿರುತ್ತದೆ. ಕರದಾತರು ಮೇ ಮತ್ತು ಜೂನ್ ತಿಂಗಳಲ್ಲಿ ದಂಡ ರಹಿತ ಆಸ್ತಿ ತೆರಿಗೆ ತುಂಬಲು ಅವಕಾಶ ನೀಡಲಾಗಿದೆ.

ಸದರಿ ಕರದಾತರು ತಮ್ಮ ಆಸ್ತಿಯ ಮೇಲೆ ದಂಡ ರಹಿತವಾಗಿ ತೆರಿಗೆ ಪಾವತಿ ಮಾಡಲು ಜೂ.30 ರವರೆಗೆ ಕಾಲವಾಶವಿದೆ. ಜು.1 ನಂತರ ಪ್ರತಿ ತಿಂಗಳಿಗೆ ಶೇಕಡಾ 2 ರಷ್ಟು ದಂಡದೊಂದಿಗೆ ಪಾವತಿ ಮಾಡಬೇಕಾಗಿದೆ.

ಎಲ್ಲಾ ಆಸ್ತಿ ಮಾಲೀಕರು ತಮ್ಮ ಆಸ್ತಿಯ ಕುರಿತು ಪೀರನವಾಡಿ ಪಟ್ಟಣ ಪಂಚಾಯತಿ ಕಚೇರಿಗೆ ಸಂಪರ್ಕಿಸಿ ಸ್ವಯಂ ಘೋಷಿತ ಆಸ್ತಿಯ ಮಾಹಿತಿಯನ್ನು ತಿಳಿದುಕೊಂಡು ಆಸ್ತಿ ತೆರಿಗೆ ಪಾವತಿ ಮಾಡಬೇಕು ಎಂದು ಪೀರನವಾಡಿ ಪಟ್ಟಣ ಪಂಚಾಯತಿಯ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 2024ರ ಲೋಕಸಭಾ ಚುನಾವಣೆ; ಜಪ್ತಿಯಾದ ನಗದು ಬಿಡುಗಡೆಗೆ ಸಮಿತಿ ರಚನೆ

ಬೆಳಗಾವಿ: ಸಾರ್ವತ್ರಿಕ ಲೋಕಸಭಾ ಚುನಾವಣಾ 2024ರ ಪ್ರಯುಕ್ತ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿದ್ದು, ಯಾವುದೇ ವ್ಯಕ್ತಿಯು ರೂ.50,000 ಮೇಲ್ಪಟ್ಟು ನಗದು ಮೊತ್ತವನ್ನು ಯಾವುದೇ ದಾಖಲೆಗಳಿಲ್ಲದೇ ತೆಗೆದುಕೊಂಡು ಹೋಗುತ್ತಿದ್ದಲ್ಲಿ, ಸದರಿ ಮೊತ್ತವು ಚುನಾವಣಾ FST/ SST ಯವರಿಂದ ಜಪ್ತಿಯಾದ ಸಂದರ್ಭದಲ್ಲಿ ಅಂತಹ ಮೊತ್ತವನ್ನು ಕೂಡಲೇ ಬಿಡುಗಡೆಗೊಳಿಸಲು ಕ್ಯಾಶ್ ರಿಲೀಸ್ ಕಮಿಟಿ ರಚಿಸಲಾಗಿರುತ್ತದೆ.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ಯಾಶ್ ರಿಲೀಸ್ ಕಮೀಟಿ ಅಧ್ಯಕ್ಷರಾಗಿರುತ್ತಾರೆ. ಗೌರಿಶಂಕರ ಕಡೇಚೂರ(ಮೊಬೈಲ್-9560273950) ಅವರು ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿದ್ದು, ದಾಖಲೆ ಹಾಜರುಪಡಿಸಿ ನಗದು ಮೊತ್ತದ ಬಿಡುಗಡೆಗಾಗಿ ಇವರ ಮೊಬೈಲ್ ಸಂಖ್ಯೆಗೆ ಕರೆ ಮಾಡಬಹುದಾಗಿದೆ.

**FST/ SST** ತಂಡದವರು ನಗದು ಮೊತ್ತ ಜಪ್ತಿ ಮಾಡಿದ ಬಳಿಕ ಸಾರ್ವಜನಿಕರು ಸೂಕ್ತ ದಾಖಲೆ ಸಲ್ಲಿಸಿ ನಗದು ಮೊತ್ತವನ್ನು ಹಿಂಪಡೆದುಕೊಳ್ಳಬಹುದು ಎಂದು ಜಿಲ್ಲಾ ನೋಡಲ್ ಅಧಿಕಾರಿಗಳು, ಚುನಾವಣಾ ವೆಚ್ಚ ಮೇಲ್ವಿಚಾರಣೆ ಮತ್ತು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕ್ಯಾಶ್ ರಿಲೀಸ್ ಕಮಿಟಿ ಹಾಗೂ ಕಾಡಾ ಮುಖ್ಯ ಲೆಕ್ಕಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾಹಿತಿ/ಕಲಾವಿದರ ಮಾಸಾಶನ ಫಲಾನುಭವಿಗಳಿಗೆ ಜೀವಿತಾವಿಧಿ ಪ್ರಮಾಣ ಪತ್ರ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕೊಡಮಾಡುವ ಕಷ್ಟ ಪರಿಸ್ಥಿಯಲ್ಲಿರುವ ಸಾಹಿತಿ/ಕಲಾವಿದರ ಮಾಸಾಶನ ಹಾಗೂ ವಿಧವಾ ಮಾಸಾಶನ ಫಲಾನುಭವಿಗಳಿಗೆ ಮಾರ್ಚ 2024 ರ ವರೆಗೆ ಮಾಸಾಶನವನ್ನು ಪಾವಿತಿಸಲಾಗಿತ್ತು.

2024-25 ನೇ ಸಾಲಿಗಾಗಿ ಜೀವಿತಾವಧಿ ಪ್ರಮಾಣ ಪತ್ರಕ್ಕೆ ಸಹಿ ಮಾಡಿ ಹಾಗು ಬ್ಯಾಂಕ್ ವ್ಯವಸ್ಥಾಪಕರ ಸಹಿ ಮೊಹರಿನೊಂದಿಗೆ ತಮ್ಮ ಪಿಂಚಣೆ ಪ್ರಮಾಣ ಪತ್ರ, ಆಧಾರ ಕಾರ್ಡ, ಬ್ಯಾಂಕ್ ಪಾಸ್-ಬುಕ್ ಝರಾಕ್ಸ್ ಪ್ರತಿಗಳನ್ನು ಲಗತ್ತಿಸಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಸಲ್ಲಿಸಲು ತಿಳಿಸಲಾಗಿದೆ.

ದಾಖಲಾತಿಗಳು ಈ ಕಚೇರಿಗೆ ತಲುಪಿದ ನಂತರ ಏಪ್ರಿಲ್ 2024 ರಿಂದ ಮಾಸಾಶನ ಪಾವತಿಸಲು ಕ್ರಮಕೈಗೊಳ್ಳಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಪರಿಚಿತ ವ್ಯಕ್ತಿ ಶವ ಪತ್ತೆ

ಬೆಳಗಾವಿ: ಘಟಪ್ರಭಾ ರೈಲು ನಿಲ್ದಾಣ ಯಾರ್ಡ ಹೊಸ ನೀರಿನ ಟ್ಯಾಂಕ ಹತ್ತಿರ ಮಾ. 30 ರಂದು ಅನಾರೋಗ್ಯದಿಂದ ಮೃತಪಟ್ಟ ಅಪರಿಚಿತ ವ್ಯಕ್ತಿ ಶವ ಪತ್ತೆಯಾಗಿದೆ.

ಮೃತನ ಚಹರೆ : ವಯಸ್ಸು ಸುಮಾರು 55-60 ವರ್ಷ ಎಂದು ಅಂದಾಜಿಸಲಾಗಿದೆ. 5-6 ಎತ್ತರ, ಕಪ್ಪು ಮೈ ಬಣ್ಣ, ಮೈಯಿಂದ ತಳ್ಳಗೆ, ಕೋಲು ಮುಖ, ದುಂಡ ಮೂಗು, ಮಿಸಿ-ದಾಡಿ ಬಿಟ್ಟಿರುತ್ತಾನೆ, ಬಿಳಿ ಗೇರೆ ಮತ್ತು ಬೂದು ಬಣ್ಣ ಮಿಶ್ರಿತ ಫುಲ್ ಶರ್ಟ, ಹಾಪ್ ಪ್ಯಾಂಟ್ ಧರಿಸಿರುತ್ತಾನೆ.

ಮೃತನ ವಾರಸುದಾರರು ಪತ್ತೆಯಾದರೆ ಬೆಳಗಾವಿ ರೈಲ್ವೆ ಪೊಲೀಸ್ ದೂ. ಸಂಖ್ಯೆ : (0831) 2405273, ಪಿಎಸ್ಐ ದೂ ಸಂಖ್ಯೆ : 9480802127 ಅಥವಾ ರೈಲು ಪೊಲೀಸ್ ನಿಯಂತ್ರಣ ಕೊಠಡಿ ದೂ ಸಂಖ್ಯೆ:(080) 22871291 ಸಂಪರ್ಕಿಸಬೇಕು ಎಂದು ಬೆಳಗಾವಿ ರೈಲ್ವೆ ಪೊಲೀಸ್ ಠಾಣೆ ಆರಕ್ಷಕ ಉಪನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕ್ರಾಂತಿ ಮಹಿಳಾ ಮಂಡಳ, ಉಮಾ ಸಂಗೀತ ಪ್ರತಿಷ್ಠಾನದಿಂದ ಆರ್ಷ ವಿದ್ಯಾ ಶ್ರಮ ಮಕ್ಕಳ ಶಿಕ್ಷಣಕ್ಕೆ 6 ಲಕ್ಷ.ರೂ ದೇಣಿಗೆ ವಿತರಣೆ



ಬೆಳಗಾವಿ: ಆರ್ಥಿಕವಾಗಿ ಹಿಂದುಳಿದ ಮಕ್ಕಳು ಹಾಗೂ ಅನಾಥ ಮಕ್ಕಳ ಸೇವೆಯಲ್ಲಿ, ಮಹಿಳಾ ಸಬಲೀಕರಣದಲ್ಲಿ ತೊಡಗಿಸಿಕೊಂಡಿರುವ ಕ್ರಾಂತಿ ಮಹಿಳಾ ಮಂಡಳ ಹಾಗೂ ಉಮಾ ಸಂಗೀತ ಪ್ರತಿಷ್ಠಾನ ಕಾರ್ಯ ಶ್ಲಾಘನೀಯ. ಮಹಿಳೆಯರು ನಿಜವಾದ ಕರುಣೆಯ ವ್ಯಕ್ತಿತ್ವವುಳ್ಳವರು ಎಂದು ಪರಮ ಪೂಜ್ಯ ಚಿತ್ತಪ್ರಕಾಶಾನಂದ ಸ್ವಾಮೀಜಿ ಅವರು ಹೇಳಿದರು.

ನಗರದ ಕೆಎಲ್ಎಸ್ ಐ. ಎಮ್.ಇ. ಆರ್ ಕಾಲೇಜಿನ ಸಭಾಂಗಣದಲ್ಲಿ ಕ್ರಾಂತಿ ಮಹಿಳಾ ಮಂಡಳ, ಉಮಾ ಸಂಗೀತ ಪ್ರತಿಷ್ಠಾನ, ಹಿಂದವಾಡಿಯ ಈ ಎರಡೂ ಸಂಸ್ಥೆಗಳ ವಾರ್ಷಿಕೋತ್ಸವ ನಿಮಿತ್ತವಾಗಿ ಶ್ರಿ ದಾನೇಶ್ವರಿ ಶಿಕ್ಷಣ ಟ್ರಸ್ಟ್ ಸಂಕೇಶ್ವರ್ ಸಹಕಾರದಿಂದ ಆಯೋಜಿಸಲಾದ ವಿಶ್ವ ಮಹಿಳಾ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಶೈಕ್ಷಣಿಕ ಕಾರ್ಯ ಸೇರಿದಂತೆ ಸಮಾಜ ಸೇವೆಗೆ ಮಹಿಳಾ ಸಂಘಟನೆ ಶ್ರಮಿಸುತ್ತಿರುವುದು ಸಂಸತದ ಸಂಗತಿ. ಕ್ರಾಂತಿ ಮಹಿಳಾ ಮಂಡಳ , ಉಮಾ ಸಂಗೀತ ಪ್ರತಿಷ್ಠಾನದ ಸಮಾಜಕ್ಕೆ ಮಾದರಿ, ಇನ್ನೂ ಸಮಾಜಸೇವೆ ನಿರಂತರವಾಗಿ ಸಾಗಲಿ ಎಂದು ಚಿತ್ತಪ್ರಕಾಶಾನಂದ ಸ್ವಾಮೀಜಿ ಅವರು ಹಾರೈಸಿದರು.

ವೀರ ನಾರಿ ಸುಧಾ ಚೌಗುಲಾ ಮಾತನಾಡಿ, ಕ್ರಾಂತಿ ಮಹಿಳಾ ಮಂಡಳವು ಹೆಸರಿನಂತೆ ಸಮಾಜಸೇವೆ ಮಾಡುತ್ತಿರುವುದು ಸತೀವ ಸಂತೋಷದಾಯಕವಾಗಿದೆ. ನಿಮ್ಮ ಸಂಘಟನೆ ಇಷ್ಟೊಂದು ಶಕ್ತಿಯುತ್ತವಾದ ಬೆಳೆದಿರುವುದು ಉಳಿದ ಸಂಘ ಸಂಸ್ಥೆಗಳಿಗೆ ಮಾದರಿಯಾಗಿದೆ ಎಂದರು.

ಮುಖ್ಯ ಅತಿಥಿಯಾಗಿ ಆಗಮಿಸಿದ ದಿವಂಗತ ವೀರಯೋಧ ಶಿವಾನಂದ ಚೌಗುಲಾ ಅವರ ಧರ್ಮಪತ್ನಿ ವೀರ ನಾರಿ ಸುಧಾ ಚೌಗುಲಾ ಅವರನ್ನು ಸನ್ಮಾನಿಸಲಾಯಿತು.

ಈ ವೇಳೆ ಕ್ರಾಂತಿ ಮಹಿಳಾ ಮಂಡಳ, ಉಮಾ ಸಂಗೀತ ಪ್ರತಿಷ್ಠಾನದ ವತಿಯಿಂದ ಆರ್ಷ ವಿದ್ಯಾ ಆಶ್ರಮದ 30 ಹೆಣ್ಣು ಮಕ್ಕಳ ಶೈಕ್ಷಣಿಕ ಅಂದರೆ, ಪ್ರಾಥಮಿಕ, ಮಾಧ್ಯಮಿಕ ಮತ್ತು ಕಾಲೇಜ ವಿದ್ಯಾಭ್ಯಾಸಕ್ಕೆ ಭರಿಸುವ ಉದ್ದೇಶದಿಂದ 6 ಲಕ್ಷ ರೂ. ಚೆಕ್‌ನ್ನು ಆರ್ಷ ವಿದ್ಯಾ ಆಶ್ರಮದ ಚಿತ್ತ ಪ್ರಕಾಶಾನಂದ ಸ್ವಾಮೀಜಿಯವರಿಗೆ ವಿತರಿಸಲಾಯಿತು.

**ವಿವಿಧ ಕ್ಷೇತ್ರದ ಸಾಧಕಿಯರಿಗೆ ಗೌರವ, ಸನ್ಮಾನ:**

ಈ ವೇಳೆ ದಂಪತಿಗಳಾದ ಜ್ಯೋತಿ, ಅಶೋಕ್ ಬಾದಾಮಿ, ಮರ್ತ್ಯೋರ್ವ ದಂಪತಿ ಅನಿತಾ ದತ್ತಾ ಕಣಬರ್ಗಿ ಅವರಿಗೆ ಆದರ್ಶ ದಂಪತಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಈ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಐದು ಮಹಿಳಾ ಸಾಧಕಿಯರಿಗೆ ಗೌರವಿಸಲಾಯಿತು. ಸಮಾಜ ಸೇವೆ ಸಲ್ಲಿಸಿದ ಡಾ. ಸವಿತಾ ದೇಗಿನಾಳ, ಸಂಗೀತ ಕ್ಷೇತ್ರ ದಲ್ಲಿ ಸಾಧನೆಗೈದ ನಮ್ರತಾ ಜಹಾಗೀರದಾರ ಮತ್ತು ವಿದೂಶಿ, ನೇತ್ರಾ ಜೋಶಿ, ಶಿಕ್ಷಣ ಕ್ಷೇತ್ರದಲ್ಲಿ ಸಾಧನೆಗೈದ ಕಮಲಾ ಗಣಾಚಾರಿ, ಬಹು ಮುಖ ಪ್ರತಿಭಾವಂತ ಮಹಿಳೆ ವಿದ್ಯಾ ಹುಂಡೆಕರ ಇವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶ್ರಿ ದಾನೇಶ್ವರಿ ಶಿಕ್ಷಣ ಟ್ರಸ್ಟ್ ಅಧ್ಯಕ್ಷೆ ಪ್ರಿಯಾಂಕ ಗಡ್ಕರಿ, ಮಂಡಳದ ಅಧ್ಯಕ್ಷೆ ಮಂಗಲ ಮಠದ ಸ್ವಾಗತಿಸಿದರು. ಕಾರ್ಯದರ್ಶಿ ರೇಣುಕಾ ಕಾಂಬಳೆ ಪ್ರಾಸ್ತಾವಿಕವಾಗಿ ಮಾತನಾಡಿದರು. ರಾಧಿಕಾ ಬಿರ್ಜೆ, ಭಾರತಿ ಕೆರೂರ್, ರಾಜಶ್ರೀ ಗುರವ, ಪ್ರಾರ್ಥಿಸಿದರು. ವಸುಂಧರಾ ದೆಸನೂರ ಅಥಿತಿ ಪರಿಚಯಿಸಿದರು. ಆಶಾ ಹೊಸಮನಿ ನಿರೂಪಿಸಿದರು. ಜಯಶ್ರೀ ಟೋಪಗಿ ವಂದಿಸಿದರು. ಮಂಡಳದ ಉಪಾಧಕ್ಷ್ಯ ತ್ರಿಶಲಾ ಪಾಯಪ್ಪನವರ ಹಾಗು ಜ್ಯೋತಿ ಘಾಟಗೆ ಆಶಾ ನಿಲಜಗಿ, ಜ್ಯೋತಿ ಘಾಟಗೆ ಕ್ರಾಂತಿ ಮಹಿಳಾ ಮಂಡಳದ ಎಲ್ಲ ಸದ್ಯಸರು ಮತ್ತು ಉಮಾ ಸಂಗೀತ ಪ್ರತಿಷ್ಠಾನದ ವಿಧ್ಯಾರ್ಥಿಗಳು ಇತರರು ಇದ್ದರು. ಉಮಾ ಸಂಗೀತ ಪ್ರತಿಷ್ಠಾನದ ವಿಧ್ಯಾರ್ಥಿಗಳು ಸಂಗೀತ ಕಾರ್ಯಕ್ರಮವನ್ನು ನೆರವೇರಿಸಿದರು. ಕ್ರಾಂತಿ ಮಹಿಳಾ ಮಂಡಳ ದ ಮಹಿಳೆಯರಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗಿತು. ಅಲ್ಲದೆ ಜರ್ಮನ್ ಮತ್ತು ಸ್ಪೇನ್ ದೇಶದ ವಿದೇಶಿ ಮಹಿಳೆಯರಿಬ್ಬರು ಈ ಕಾರ್ಯಕ್ರಮಕ್ಕೆ ಆಗಮಿಸಿದ್ದು ವಿಶೇಷ ಮೆರಗನ್ನು ನೀಡಿತು.

## ದಡ್ಡಿ ಚೆಕ್ ಪೋಸ್ಟ್ ಗೆ ದಿಢೀರ್ ಭೇಟಿ ನೀಡಿದ ಜಿಪಂ ಸಿಇಓ



ಹುಕ್ಕೇರಿ: ಸಾರ್ವತ್ರಿಕ ಲೋಕಸಭೆ ಚುನಾವಣೆ ಹಿನ್ನಲೆಯಲ್ಲಿ ಹುಕ್ಕೇರಿ ತಾಲೂಕಿನ ದಡ್ಡಿ ಕ್ರಾಸ್ ಬಳಿ ಸ್ಥಾಪಿಸಿರುವ ಚೆಕ್ ಪೋಸ್ಟ್ಗೆ ಬೆಳಗಾವಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯೂ ಆದ ಚಿಕ್ಕೋಡಿ ಲೋಕಸಭೆ ಕ್ಷೇತ್ರ ಚುನಾವಣಾಧಿಕಾರಿ ರಾಹುಲ್ ಶಿಂಧೆ ಅವರು ಸೋಮವಾರ ದಿಢೀರ್ ಭೇಟಿ ನೀಡಿ ಪರಿಶೀಲಿಸಿದರು.

ಅನೀರಿಕ್ಷಿತ ಭೇಟಿ ನೀಡಿದ ರಾಹುಲ್ ಶಿಂಧೆ ಅವರು, ಈ ಮಾರ್ಗದ ಮೂಲಕ ಸಾಗಿ ಹೋಗಿರುವ ವಾಹನಗಳ ಪಟ್ಟಿ, ಚೆಕ್ ಪೋಸ್ಟ್ ಸಿಬ್ಬಂದಿಗಳ ಹಾಜರಾತಿ ಪರಿಶೀಲಿಸಿ ಎಲ್ಲ ವಾಹನಗಳನ್ನು ಕಡ್ಡಾಯವಾಗಿ ತಪಾಸಿಸುವಂತೆ ಸೂಚಿಸಿದರು. ಹಣ, ಹೆಂಡ ಸೇರಿದಂತೆ ಮತದಾರರಿಗೆ ಆಮಿಷವೊಡ್ಡುವ ವಸ್ತುಗಳ ಸಾಗಾಟ ಮತ್ತು ಯಾವುದೇ ರೀತಿಯ ಅಕ್ರಮಗಳಿಗೆ ಅವಕಾಶ ನೀಡದಂತೆ ಕರ್ತವ್ಯ ನಿರ್ವಹಿಸಬೇಕು ಸೂಚಿಸಿದರು.

ಸಹಾಯಕ ನಿರ್ದೇಶಕರಾದ ಲಕ್ಷ್ಮಿನಾರಾಯಣ, ರಾಜು ಢಾಂಗೆ, ಪಿಡಿಒ ಮಹಾದೇವ ಪೂಜೇರಿ, ಮಹಾಂತೇಶ ಬಾದವಾನಮಠ, ಪೊಲೀಸ್ ಮತ್ತು ಅಬಕಾರಿ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ರಸ್ತೆ ಬಂದ್ ಮಾಡಿ ಇಫ್ತಾರ್ ಕೂಟ ಆಯೋಜನೆ; ತುರ್ತು ನೋಟಿಸ್ ನೀಡಿದ ಚುನಾವಣಾ ಆಯೋಗ



ಮಂಗಳೂರು: ಪ್ರಸಕ್ತ ರಂಜಾನ್ ಆಚರಣೆ ವೇಳೆ ರೋಜಾ ಪ್ರಯುಕ್ತ ರಸ್ತೆ ಬಂದ್ ಮಾಡಿ ಇಫ್ತಾರ್ ಕೂಟ ವ್ಯವಸ್ಥೆ ಆಯೋಜಿಸಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಚುನಾವಣಾ ಆಯೋಗ ನೋಟಿಸ್ ನೀಡಿದೆ. ಸಾರ್ವಜನಿಕ ರಸ್ತೆಯಲ್ಲಿ ಇಫ್ತಾರ್ ಕೂಟ ಆಯೋಜಿಸಿದ್ದ ಅಬೂಬಕರ್ ಸಿದ್ದಿಕಿಗೆ ಚುನಾವಣಾ ಆಯೋಗ ತುರ್ತು ನೋಟಿಸ್ ನೀಡಿದೆ.

ಮಂಗಳೂರು ಹೊರವಲಯ ಮುಡಿಪುವಿನಲ್ಲಿ ರಸ್ತೆಯಲ್ಲಿ ಆಟೋ ಚಾಲಕರಿಗಾಗಿ ಈ ಇಫ್ತಾರ್ ಕೂಟ ಆಯೋಜನೆಗೊಂಡಿತ್ತು. ಇಫ್ತಾರ್ ಕೂಟದ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ವಿಡಿಯೋ ಕುರಿತು ವ್ಯಾಪಕವಾಗಿ ಭಾರೀ ಪರ ಮತ್ತು ವಿರೋಧ ಚರ್ಚೆ ನಡೆದಿತ್ತು.

ಇದೀಗ ಇಫ್ತಾರ್ ಕೂಟದಲ್ಲಿ ರಸ್ತೆ ಬಂದ್ ಮಾಡಿ ಸಂಚಾರಕ್ಕೆ ಅಡ್ಡಿಪಡಿಸಿದ್ದೀರಿ ಎಂದು ಚುನಾವಣಾ ಆಯೋಗದಿಂದ ಆಯೋಜಕರಿಗೆ ನೋಟಿಸ್ ನೀಡಲಾಗಿದೆ. ಈ ಮೂಲಕ ಚುನಾವಣಾ ನೀತಿ ಸಂಹಿತೆ ಉಲ್ಲಂಘನೆಯೂ ಮಾಡಲಾಗಿದೆ ಅಂತ ನೋಟಿಸ್ ನೀಡಲಾಗಿದೆ.

## ಪಿಡಿಒ ಕೊರತೆಗೆ ಬಳಲಿದೆ ಬೆಳಗಾವಿ 'ಗ್ರಾಮಾಡಳಿತ'




ಹುಕ್ಕೇರಿ: ಒಂದೆಡೆ ಲೋಕಸಭೆ ಚುನಾವಣೆಯ ಮಾದರಿ ನೀತಿ ಸಂಹಿತೆ ಎದುರಾಗಿದ್ದರೆ, ಇನ್ನೊಂದೆಡೆ ಗ್ರಾಮದ ಆಡಳಿತ ನಿರ್ವಹಣೆ ಹೊಣೆ ಹೊತ್ತಿರುವ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ(ಪಿಡಿಒ)ಗಳಿಗೆ ಹಲವು ಜವಾಬ್ದಾರಿಗಳು ಹೆಗಲೇರಿಕೊಂಡಿವೆ. ಇದರಿಂದ ಗ್ರಾಮ ಪಂಚಾಯಿತಿ ಸದಸ್ಯರಿಗೆ ಅಧಿಕಾರ ಇದ್ದೂ ಇಲ್ಲದಂತಾಗಿದೆ. ಜೊತೆಗೆ ಸದ್ಯ ಎದುರಾಗಿರುವ ಭೀಕರ ಬರದ ಸ್ಥಿತಿಯೂ ಸೇರಿದಂತೆ ಹಳ್ಳಿಗಳಲ್ಲಿ ಆಡಳಿತ ನಿರ್ವಹಣೆಗೆ ತೊಡಕು ಎದುರಾಗುತ್ತಿರುವ ದೂರು ಕೇಳಿ ಬರುತ್ತಿದೆ.

ಬೆಳಗಾವಿ ಜಿಲ್ಲೆಯಲ್ಲಿ 14 ತಾಲೂಕುಗಳಿದ್ದು 500 ಗ್ರಾಮ ಪಂಚಾಯಿತಿಗಳಿವೆ. ಈ ಪೈಕಿ 453 ಕಡೆಗಳಲ್ಲಿ ಪಿಡಿಒಗಳು ಕಾರ್ಯನಿರ್ವಹಿಸುತ್ತಿದ್ದು ಇನ್ನುಳಿದ ಸ್ಥಾನಗಳು ಖಾಲಿ ಇವೆ. 6 ಜನ ಪಿಡಿಒಗಳು ಸಚಿವರು, ಶಾಸಕರ ಆಪ್ತ ಸಹಾಯಕರಾಗಿ ನಿಯೋಜನೆಗೊಂಡಿದ್ದರೆ, ಕೆಲ ಪಿಡಿಒಗಳನ್ನು ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿಯ ವಿವಿಧ ವಿಭಾಗಕ್ಕೆ ನೇಮಿಸಲಾಗಿದೆ. ಈ ನಡುವೆ ಅಂತರ್ ಜಿಲ್ಲೆ ನಿಯೋಜನೆ ಮೂಲಕ ಬೇರೆ ಜಿಲ್ಲೆಗಳಿಗೆ ತೆರಳಿದವರೂ ಇದ್ದಾರೆ.

ಕೆಲ ಪಂಚಾಯಿತಿಗಳಲ್ಲಿ ಕಾಯಂ ಪಿಡಿಒಗಳ ಕೊರತೆ ಇರುವುದು ನಿಜ. ಅದನ್ನು ನಿಭಾಯಿಸಲು ಒಬ್ಬೊಬ್ಬ ಪಿಡಿಒಗೆ ಎರಡು ಅಥವಾ ಮೂರು ಗ್ರಾಮ ಪಂಚಾಯಿತಿಗಳ ಆಡಳಿತದ ಜವಾಬ್ದಾರಿ ವಹಿಸಲಾಗಿದೆ. ಇದೇ ವೇಳೆ ಲೋಕಸಭೆ ಚುನಾವಣೆಯ ವಿವಿಧ ವಿಭಾಗಗಳಲ್ಲಿ ಸುದೀರ್ಘ ಎರಡೂವರೆ ತಿಂಗಳ ಕಾಲ ಕರ್ತವ್ಯಕ್ಕೆ ಬಹುತೇಕ ಪಿಡಿಒಗಳ ನಿಯೋಜಿಸಿದ್ದು ಗ್ರಾಮಾಡಳಿತದ ಮೇಲೆ ನೇರ ಪರಿಣಾಮ ಬೀರಿ ಅಭಿವೃದ್ಧಿಗೆ ಹೊಡೆತ ಬಿದ್ದಂತಾಗಿದೆ.

ಚುನಾವಣೆಯ ಎಸ್-ಎಸ್ಟಿ, ಎಫ್ಎಸ್ಟಿ, ವಿಎಸ್ಟಿ, ವಿವಿಟಿ ತಂಡಗಳಲ್ಲಿ ಪಿಡಿಒಗಳು ತೊಡಗಿಸಿ ಕೊಂಡಿದ್ದರಿಂದ ಹಳ್ಳಿಗಳಲ್ಲಿ ಬರಗಾಲ ಎದುರಿಸುವ ಕಾರ್ಯಕ್ಕೆ ಹಿನ್ನಡೆಯಾಗಿದೆ. ಜನ-ಜಾನುವಾರುಗಳಿಗೆ ನೀರು ಪೂರೈಕೆಗೆ ತೊಂದರೆಯಾಗುತ್ತಿದೆ. ಅಷ್ಟೇ ಅಲ್ಲದೇ ಉದ್ಯೋಗ ಖಾತರಿ ಅಕುಶಲ ಕೂಲಿಕಾರರಿಗೆ ಉದ್ಯೋಗ ನೀಡುವ ಕಾರ್ಯಕ್ಕೂ ಹಿನ್ನಡೆಯಾಗಿದೆ. ಇದರಿಂದ ದುಡಿಯುವ ಕೂಲಿಕಾರ ವರ್ಗ ವಲಸೆ ಹೋಗುವ ಸಂದರ್ಭ ಬಂದೊದಗಿ ಮತ ಪ್ರಮಾಣ ಕಡಿಮೆಯಾಗುವ ಸಾಧ್ಯತೆ ಅಲ್ಲಗಳೆಯುವಂತಿಲ್ಲ.

ಹಾಗಾಗಿ ಮತದಾನ ಮತ್ತು ಮತ ಎಣಿಕೆಗೆ ಮಾತ್ರ ಪಿಡಿಒಗಳನ್ನು ಬಳಸಿಕೊಳ್ಳಬೇಕೆನ್ನುವ ಅಭಿಪ್ರಾಯಗಳಿವೆ. ಹಾವೇರಿ ಸೇರಿದಂತೆ ರಾಜ್ಯದ ಕೆಲ ಬೇರೆ ಜಿಲ್ಲೆಗಳಂತೆ ಇಲ್ಲಿನ ಪಿಡಿಒಗಳ ನಿಯೋಜನೆಯನ್ನು ಹಿಂತೆಗೆದುಕೊಂಡು ಇತರೆ ಇಲಾಖೆ ಸಿಬ್ಬಂದಿಗಳನ್ನು ಆ ಜಾಗಕ್ಕೆ ನೇಮಿಸಬೇಕೆಂಬ ಒತ್ತಾಯಗಳು ಕೇಳಿ ಬರುತ್ತಿವೆ. ಈ ಮೂಲಕ ಭೀಕರ ಬರ ಎದುರಿಸಲು ಯಾವುದೇ ಅಡಚಣೆಯಾಗದಂತೆ ನೋಡಿಕೊಳ್ಳುವ ಹೊಣೆ ಜಿಲ್ಲಾ ಆಡಳಿತದ ಮೇಲಿದೆ.

ಗ್ರಾಮ ಪಂಚಾಯಿತಿಯ ಯಾವುದೇ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು, ನಿರ್ಣಯಿಸಲು ಪಿಡಿಒ ಅಗತ್ಯ. ಒಬ್ಬೊಬ್ಬರಿಗೆ ಎರಡು, ಮೂರು ಕಡೆ ಜವಾಬ್ದಾರಿ ನೀಡಿದ್ದರಿಂದ ವಾರದಲ್ಲಿ ಒಂದು ಅಥವಾ ಎರಡು ದಿನ ಮಾತ್ರ ಕಚೇರಿಯಲ್ಲಿ ಲಭ್ಯರಿದ್ದು ಜನರ ಸಮಸ್ಯೆಗಳಿಗೆ ಸ್ಪಂದನೆ ಸಿಗುತ್ತಿಲ್ಲ. ಇದರಿಂದ ಆಡಳಿತ ವ್ಯವಸ್ಥೆ ಬಲಗೊಳಿಸಲು ಸಾಧ್ಯವಾಗುತ್ತಿಲ್ಲ. ಇದು ಹಲವು ಗ್ರಾಮ ಪಂಚಾಯಿತಿಗಳು ಎದುರಿಸುತ್ತಿರುವ ಸಮಸ್ಯೆಯಾಗಿದೆ.

ಬರಗಾಲದ ಸಮಸ್ಯೆ ಎದುರಾಗಿರುವುದರಿಂದ ಗ್ರಾಮದಲ್ಲಿ ಜಲಮೂಲಗಳು ಬತ್ತಿ ಹೋಗುತ್ತಿವೆ. ನೀರಿನ ಪೂರೈಕೆಯಲ್ಲಿ ವ್ಯತ್ಯಯ ಉಂಟಾದರೆ ಜನರು ಸದಸ್ಯರನ್ನು ಕೇಳುತ್ತಾರೆ. ನೀತಿ ಸಂಹಿತೆ ಎದುರಾಗಿರುವ ಕಾರಣ ಯಾವ ನಿರ್ಧಾರವನ್ನೂ ಕೈಗೊಳ್ಳುವಂತಿಲ್ಲ. ಪಿಡಿಒಗಳಿಗೆ ವಿಚಾರಿಸಬೇಕೆಂದರೆ ಅವರನ್ನು ಚುನಾವಣೆಗೆ ನಿಯೋಜಿಸಿದ್ದರಿಂದ ಸಂಪರ್ಕಕ್ಕೆ ಲಭಿಸುವುದು ಅಪರೂಪಎಂದು ಸಾರ್ವಜನಿಕರು ಅಳಲು ತೋಡಿಕೊಳ್ಳುತ್ತಿದ್ದಾರೆ.



ಪ್ರಸಕ್ತ ಸಾರ್ವತ್ರಿಕ ಲೋಕಸಭೆ ಚುನಾವಣೆ ಹಿನ್ನಲೆ ಯಲ್ಲಿ ಬೆಳಗಾವಿ ಮತ್ತು ಚಿಕ್ಕೋಡಿ ಕ್ಷೇತ್ರಗಳ ಸುಗಮ ಚುನಾವಣೆಗೆ ಎಲ್ಲ ಕ್ರಮಕೈಗೊಳ್ಳಲಾಗಿದೆ. ಕಂದಾಯ, ಆರ್‌ಡಿಪಿಆರ್ ಸೇರಿದಂತೆ ಬಹುತೇಕ ಇಲಾಖೆಗಳ ಪಾತ್ರ ಪ್ರಮುಖವಿದೆ. ನೀತಿ ಸಂಹಿತೆ ಕಟ್ಟುನಿಟ್ಟಾಗಿ ಜಾರಿಗೊಳಿಸಲಾಗಿದೆ.

**-ನಿತೇಶ ಪಾಟೀಲ, ಜಿಲ್ಲಾಧಿಕಾರಿ**




## ಹುಕ್ಕೇರಿ: ದಾಖಲೆ ಇಲ್ಲದೆ 1.10 ಸಾವಿರ ರೂ. ಸಾಗಾಟ; ವಶಕ್ಕೆ ಪಡೆದ ಅಧಿಕಾರಿಗಳು

ಹುಕ್ಕೇರಿ: ಹುಕ್ಕೇರಿ ಹಿಟ್ನಿ ಚೆಕ್ ಪೋಸ್ಟ್ ನಲ್ಲಿ ದಾಖಲೆ ಇಲ್ಲದೆ 1.10 ಸಾವಿರ ರೂ. ಹಣವನ್ನು ಸಾಗಾಟ ಮಾಡುತ್ತಿದ್ದ ವಾಹನವನ್ನು ಜಪ್ತಿ ಮಾಡಿ, ಹಣವನ್ನು ಚುನಾವಣಾ ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

ಹುಕ್ಕೇರಿ ತಾಲೂಕಿನ ಹಿಟ್ನಿ ಚೆಕ್ ಪೋಸ್ಟ್ ಬಳಿಯಲ್ಲಿ ಚುನಾವಣೆ ಅಧಿಕಾರಿಗಳು ವಾಹನಯೊಂದನ್ನು ಪರಿಶೀಲನೆ ನಡೆಸಿದಾಗ ದಾಖಲೆ ಇಲ್ಲದೇ ಸಾಗಾಟ ಮಾಡುತ್ತಿದ್ದ 1. ಲಕ್ಷ 10 ಸಾವಿರ ರೂ. ಹಣವನ್ನು ವಶಪಡಿಸಿಕೊಳ್ಳಲಾಗಿದೆ ಎನ್ನಲಾಗಿದೆ.

## ಕೌಟುಂಬಿಕ ಕಲಹ; ಇಬ್ಬರು ಗಂಡು ಮಕ್ಕಳಿಗೆ ವಿಷವುಣಿಸಿ ತಂದೆ ಆತ್ಮಹತ್ಯೆ



ಕೋಲಾರ: ಇಬ್ಬರು ಗಂಡು ಮಕ್ಕಳಿಗೆ ವಿಷ ಕುಡಿಸಿ ತಂದೆಯೊಬ್ಬ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕೋಲಾರ ಜಿಲ್ಲೆಯ ಶ್ರೀನಿವಾಸಪುರ ತಾಲೂಕಿನ ಶೀಗೆಹಳ್ಳಿ ಗ್ರಾಮದಲ್ಲಿ ನಡೆದಿದೆ.

ನಾರಾಯಣಸ್ವಾಮಿ (40) ಹಾಗೂ ಮಕ್ಕಳಾದ ಪವನ್ (12), ನಿತಿನ್ (10) ಮೃತ ದುರ್ದೈವಿಗಳು. ಕೌಟುಂಬಿಕ ಕಲಹದಿಂದ ಬೇಸತ್ತು ಆತ್ಮಹತ್ಯೆಗೆ ಶರಣಾಗಿರುವ ಶಂಕೆ ವ್ಯಕ್ತವಾಗಿದೆ.

ವಿಷಯ ತಿಳಿಯುತ್ತಿದ್ದಂತೆ ಶ್ರೀನಿವಾಸಪುರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಮೂವರ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಆಸ್ಪತ್ರೆಗೆ ರವಾನಿಸಿದ್ದಾರೆ. ಶ್ರೀನಿವಾಸಪುರ ಪೊಲೀಸ್ ಠಾಣೆಯಲ್ಲಿ ಈ ಸಂಬಂಧ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089